ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com  E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 88 ಸಂಚಿಕೆ- 88 | PAGE- 8 ಪುಟ-8 | ಮಂಗಳವಾರ 13.05.2025 | RS.2/- ಬೆಲೆ 2/-

# ಆಪರೇಷನ್ ಸಿಂಧೂರ್

## ದೇಶದ ಹೆಣ್ಣುಮಕ್ಕಳಿಗೆ ಸಮರ್ಪಣೆ:ಪ್ರಧಾನಿ ಮೋದಿ



ನವದೆಹಲಿ:ಮೇ.12:ಪ್ರಧಾನಿ ನರೇಂದ್ರ ಮೋದಿ ಇಂದು ಸಶಸ್ತ್ರ ಪಡೆಗಳ ಶೌರ್ಯ ಮತ್ತು ಧೈರ್ಯಕ್ಕೆ ನಮನ ಸಲ್ಲಿಸಿದ್ದು ಆಪರೇಷನ್ ಸಿಂಧೂರ್ ಅನ್ನು ದೇಶದ ಮಹಿಳೆಯರಿಗೆ ಅರ್ಪಿಸಿದರು. ಕಳೆದ ಕೆಲವು ದಿನಗಳಲ್ಲಿ ನಾವೆಲ್ಲರೂ ದೇಶದ ಸಾಮರ್ಥ್ಯ ಮತ್ತು ತಾಳ್ಮೆಯನ್ನು ನೋಡಿದ್ದೇವೆ. ನಾನು ಸಶಸ್ತ್ರ ಪಡೆಗಳು, ಮಿಲಿಟರಿ, ಗುಪ್ತಚರ ಸಂಸ್ಥೆ ಮತ್ತು ವಿಜ್ಞಾನಿಗಳಿಗೆ ವಂದಿಸುತ್ತೇನೆ ಎಂದು ಮೋದಿ ಹೇಳಿದರು. ಇಂದು, ನಾನು ಈ ಶೌರ್ಯ, ಧೈರ್ಯವನ್ನು (ಸಶಸ್ತ್ರ ಪಡೆಗಳ) ನಮ್ಮ ದೇಶದ ಪ್ರತಿಯೊಬ್ಬ ತಾಯಿಗೆ, ದೇಶದ ಪ್ರತಿಯೊಬ್ಬ ಸಹೋದರಿಗೆ ಮತ್ತು ದೇಶದ ಪ್ರತಿಯೊಬ್ಬ ಮಗಳಿಗೆ ಅರ್ಪಿಸುತ್ತೇನೆ ಎಂದರು. ಆಪರೇಷನ್ ಸಿಂಧೂರ್ ಕೇವಲ ಹೆಸರಲ್ಲ. ಇದು ದೇಶದ ಕೋಟ್ಯಾಂತರ ಜನರ ಭಾವನೆಯ ಪ್ರತಿಬಿಂಬವಾಗಿದೆ. ಆಪರೇಷನ್ ಸಿಂಧೂರ್ ನ್ಯಾಯದ ಅವಿಚ್ಛಿನ್ನ ಪ್ರತಿಜ್ಞೆಯಾಗಿದೆ. ಮೇ 6ರ ತಡರಾತ್ರಿ ಮತ್ತು ಮೇ 7ರ ಬೆಳಿಗ್ಗೆ, ಇಡೀ ಜಗತ್ತು ಈ ಪ್ರತಿಜ್ಞೆಯು ಫಲಿತಾಂಶವಾಗಿ ಬದಲಾಗುವುದನ್ನು ಕಂಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಆಪರೇಷನ್ ಸಿಂಧೂರ್ ನಂತರ ಮೊದಲ ಬಾರಿಗೆ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಭಾರತೀಯ ಪಡೆಗಳು ಭಯೋತ್ಪಾದಕರ ಕಟ್ಟಡಗಳ ಮೇಲೆ ದಾಳಿ ಮಾಡಿದ್ದಲ್ಲದೆ, ಅವರ ಧೈರ್ಯವನ್ನೂ ಪುಡಿಪುಡಿ ಮಾಡಿವೆ ಎಂದು ಹೇಳಿದರು. ಭಾರತೀಯ ಸಶಸ್ತ್ರ ಪಡೆಗಳು ಪಾಕಿಸ್ತಾನದ ಭಯೋತ್ಪಾದಕ ತಾಣಗಳ ಮೇಲೆ ದಾಳಿ ಮಾಡಿವೆ. ಭಾರತ ಇಷ್ಟೊಂದು ದೊಡ್ಡ ಹೆಜ್ಜೆಗಳನ್ನು ಇಡುತ್ತದೆ ಎಂದು ಭಯೋತ್ಪಾದಕರು ಕನಸು ಕಂಡಿರಲಿಲ್ಲ. ಭಾರತೀಯ ಕ್ಷಿಪಣಿಗಳು ಮತ್ತು ಡ್ರೋನ್‌ಗಳು ಪಾಕಿಸ್ತಾನದ ಉಗ್ರ ತಾಣಗಳ ಮೇಲೆ ದಾಳಿ ಮಾಡಿದಾಗ, ಅದು ಭಯೋತ್ಪಾದಕರ ಕಟ್ಟಡಗಳ ಮೇಲೆ ಮಾತ್ರವಲ್ಲ, ಅವರ ಧೈರ್ಯವನ್ನು ಮಣ್ಣಾಗಿಸಿದೆ ಎಂದರು. ಭವಾಲ್ಪುರ್ ಮತ್ತು ಮುರಿಡ್ಕೆಯಂತಹ ಭಯೋತ್ಪಾದಕ ತಾಣಗಳು ಜಾಗತಿಕ ಭಯೋತ್ಪಾದನೆಯ ವಿಶ್ವವಿದ್ಯಾಲಯಗಳಾಗಿದ್ದವು. 9/11 ಅಥವಾ ಭಾರತದಲ್ಲಿ ನಡೆದ ದೊಡ್ಡ ಭಯೋತ್ಪಾದಕ ದಾಳಿಗಳು ಸೇರಿದಂತೆ ಜಗತ್ತಿನ ಎಲ್ಲಾ ದೊಡ್ಡ ಭಯೋತ್ಪಾದಕ ದಾಳಿಗಳಿಗೂ ಈ ಭಯೋತ್ಪಾದಕ ತಾಣಗಳಿಗೂ ಸಂಬಂಧಿಸಿವೆ ಎಂದು ಮೋದಿ ಹೇಳಿದರು.

### ಇದು ಶಾಶ್ವತ ಕದನ ವಿರಾಮವಲ್ಲ!

ದೇಶವನ್ನು ಉದ್ದೇಶಿಸಿ ಮಾತನಾಡಿದ ನರೇಂದ್ರ ಮೋದಿ, ಉಗ್ರವಾದದ ವಿರುದ್ಧ ನಮ್ಮ ಹೋರಾಟ ನಿರಂತರ, ಉಗ್ರರು ಮತ್ತು ಉಗ್ರರನ್ನು ಪೋಷಿಸುವವರ ವಿರುದ್ಧ ನಮ್ಮ ಹೋರಾಟ ನಿರಂತರ ಎಂದಿದ್ದಾರೆ. ಮಾತ್ರವಲ್ಲ ಇದು ಶಾಶ್ವತ ಕದನ ವಿರಾಮ ಅಲ್ಲ, ಬದಲಾಗಿ ಇದು ತಾತ್ಕಾಲಿಕ ಕದನ ವಿರಾಮ ಯಾವಾಗ ಬೇಕಾದ್ರೂ ಪಾಕಿಸ್ತಾನದ ವಿರುದ್ಧ ನಾವು ದಾಳಿ ನಡೆಸಬಹುದು ಎಂದಿದ್ದಾರೆ. ಆ ಮೂಲಕ ಶಾಶ್ವತ ಕದನ ವಿರಾಮ ಘೋಷಣೆಯಾಗಿದೆ ಎಂದಿದ್ದ ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಸೈಲೆಂಟ್ ಆಗಿ ಟಾಂಗ್ ನೀಡಿದರು.

### ರಕ್ತ ಮತ್ತು ನೀರು ಒಟ್ಟಿಗೆ ಹರಿಯಲು ಸಾಧ್ಯವಿಲ್ಲ

ರಕ್ತ ಮತ್ತು ನೀರು ಒಟ್ಟಿಗೆ ಹರಿಯಲು ಸಾಧ್ಯವಿಲ್ಲ ಎನ್ನುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರು ಸಿಂಧೂ ನದಿ ನೀರು ಒಪ್ಪಂದ ಕುರಿತು ಪಾಕಿಸ್ತಾನಕ್ಕೆ ಸ್ಪಷ್ಟ ಸಂದೇಶ ರವಾನಿಸಿದ್ದಾರೆ. ಈ ಮೂಲಕ ಪಾಕಿಸ್ತಾನ ಭಯೋತ್ಪಾದನೆ ಬಿಟ್ಟರೆ ಮಾತ್ರವೇ ಸಿಂಧೂ ನದಿ ನೀರು ಹರಿಯುತ್ತದೆ ಎಂದು ಖಡಕ್ ಸಂದೇಶ ರವಾನಿಸಿದ್ದಾರೆ.

ಮುಂದುವರೆದು, "ಭಯೋತ್ಪಾದನೆ ಮತ್ತು ಮಾತುಕತೆ ಒಟ್ಟಿಗೆ ನಡೆಯಲು ಸಾಧ್ಯವಿಲ್ಲ. ಭಯೋತ್ಪಾದನೆ ಮತ್ತು ವ್ಯಾಪಾರವೂ ಒಟ್ಟಿಗೆ ಸಾಗಲು ಸಾಧ್ಯವಿಲ್ಲ. ಇದರೊಂದಿಗೆ ನೀರು ಮತ್ತು ರಕ್ತ ಕೂಡ ಒಟ್ಟಿಗೆ ಹರಿಯಲು ಸಾಧ್ಯವಿಲ್ಲ" ಎನ್ನುವ ಮೂಲಕ ಭಾರತದ ಅಭಿಪ್ರಾಯವು ತುಂಬಾ ಸ್ಪಷ್ಟವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪಾಕಿಸ್ತಾನಕ್ಕೆ ಸ್ಪಷ್ಟ ಮಾತುಗಳಲ್ಲಿ ಹೇಳಿದ್ದಾರೆ.

### ಪಾಕಿಸ್ತಾನ ಭಯೋತ್ಪಾದನೆಯ ವಿಶ್ವವಿದ್ಯಾಲಯ

ಪಾಕಿಸ್ತಾನ ಭಯೋತ್ಪಾದನೆಯ ವಿಶ್ವವಿದ್ಯಾಲಯವಾಗಿದೆ, ಹಾಗಾಗಿ, ಇನ್ಮುಂದೆ ಪಾಕಿಸ್ತಾನದ ಶೆಹಬಾಜ್ ಷರೀಫ್ ಸರ್ಕಾರ ಹಾಗೂ ಉಗ್ರರನ್ನು ಬೇರೆ ಬೇರೆ ಎಂದು ನೋಡುವುದಿಲ್ಲ; ಒಂದಾಗಿ ನೋಡುವ ಮೂಲಕ, ಮತ್ತೊಮ್ಮೆ ಪಾಕ್ ಕಿರಿಕ್ ಮಾಡಿದರೆ ಸುಮ್ಮನಿರುವುದಿಲ್ಲ ಎಂದರು.

ಮುಂದುವರೆದು, ಭಾರತದ ಕ್ಷಿಪಣಿಗಳು ಮತ್ತು ಡ್ರೋನ್‌ಗಳು ಪಾಕಿಸ್ತಾನದೊಳಗೆ ದಾಳಿ ಮಾಡಿದಾಗ, ಭಯೋತ್ಪಾದಕ ಸಂಘಟನೆಗಳು ಮಾತ್ರ ದಾಳಿಗೊಳಗಾಗಲಿಲ್ಲ – ಅವರ ನೈತಿಕ ಸ್ಥೈರ್ಯವೂ ಕುಗ್ಗಿತು ಎಂದರು.

ಪಹಲ್ಗಾಮ್ ದಾಳಿಯನ್ನು ಖಂಡಿಸಿದ ಪ್ರಧಾನಿ ನರೇಂದ್ರ ಮೋದಿ ಅವರು, ಉಗ್ರರ ವಿರುದ್ಧ ಕಾರ್ಯಾಚರಣೆ ನಡೆಸದ ಕುರಿತು ಮಾತನಾಡಿದರು. ಇದರೊಂದಿಗೆ ಉಗ್ರರ ವಿರುದ್ಧ ಸೇನಾ ಕಾರ್ಯಾಚರಣೆ ನಡೆಸಲು, ಅವರನ್ನು ಮಣ್ಣಲ್ಲಿ ಮಣ್ಣಾಗಿಸಲು ಸೇನೆಗೆ ಪರಮಾಧಿಕಾರ ನೀಡಿದೆವು. ಹಾಗಾಗಿ, ಇಂದು ಎಲ್ಲಾ ಭಯೋತ್ಪಾದಕ ಸಂಘಟನೆಗಳಿಗೂ ನಮ್ಮ ದೇಶದ ಹೆಣ್ಣುಮಕ್ಕಳಿಂದ ಸಿಂಧೂರ ತೆಗೆಯುವುದರ ಪರಿಣಾಮವೇನೆಂದು ತಿಳಿದಿದೆ. ಆಪರೇಷನ್ ಸಿಂಧೂರ್ ಕೇವಲ ಹೆಸರಲ್ಲ. ಇದು ದೇಶದ ಕೋಟ್ಯಂತರ ಜನರ ಭಾವನೆಗಳ ಪ್ರತಿಬಿಂಬವಾಗಿದೆ. ಆಪರೇಷನ್ ಸಿಂಧೂರ್ ನ್ಯಾಯದ ಅವಿಚ್ಛಿನ್ನ ಪ್ರತಿಜ್ಞೆಯಾಗಿದೆ.

## ನ್ಯೂಕ್ಲಿಯರ್ ಬ್ಲ್ಯಾಕ್‌ಮೇಲ್‌ಗೆ ನಾವು ಬೆದರಲ್ಲ: ಪಾಕ್‌ಗೆ ಮೋದಿ ಎಚ್ಚರಿಕೆ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮೇ.12:ನಿಮ್ಮ ನ್ಯೂಕ್ಲಿಯರ್ ಬ್ಲ್ಯಾಕ್‌ಮೇಲ್‌ಗೆ ನಾವು ಬೆದರುವುದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಸ್ಪಷ್ಟವಾಗಿ ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಿದ್ದಾರೆ. ದೇಶವನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತ ಯಾವುದೇ ರೀತಿಯ ಪರಮಾಣು ಬೆದರಿಕೆಯನ್ನು ಸಹಿಸುವುದಿಲ್ಲ. ಭಾರತದ ಸರ್ಜಿಕಲ್ ದಾಳಿಗಳು ಪಾಕಿಸ್ತಾನದ ಯುದ್ಧ ಸಿದ್ಧತೆಗಳನ್ನು ಛಿದ್ರಗೊಳಿಸಿವೆ ಎಂದು ಹೇಳಿದರು.

ಪಾಕಿಸ್ತಾನ ಯುದ್ಧಕ್ಕೆ ಸಿದ್ಧವಾಯಿತು. ಆದರೆ ಭಾರತ ಬಹಾವಲ್ಪುರ್ ಮತ್ತು ಮುರಿಡ್ಕೆಯಲ್ಲಿನ ಭಯೋತ್ಪಾದಕ ಕೇಂದ್ರಗಳನ್ನು ನಾಶಮಾಡುವ ಮೂಲಕ ಅವರ ಹೃದಯವನ್ನು ಹೊಡೆದು ಹಾಕಿತು ಎಂದರು.

ಭಾರತ ನಮ್ಮ ಮೇಲೆ ದಾಳಿ ನಡೆಸಿದರೆ ನಾವು ಪರಮಾಣು ಅಸ್ತ್ರ ಬಳಕೆ ಮಾಡುತ್ತೇವೆ ಎಂದು ಪಾಕಿಸ್ತಾನ ಎಚ್ಚರಿಕೆ ನೀಡುತ್ತಿತ್ತು. ಈಗ ಮೋದಿಯವರು ನಿಮ್ಮ ಅಣ್ವಸ್ತ್ರ ಬೆದರಿಕೆಗೆ ನಾವು ಜಗ್ಗಲ್ಲ, ಬಗ್ಗಲ್ಲ. ನಾವು ಯಾವ ರೀತಿ ಪ್ರತಿಕ್ರಿಯೆ ನೀಡಬೇಕೋ ನಾವು ಅದೇ ರೀತಿಯ ಪ್ರತಿಕ್ರಿಯೆ ನೀಡುತ್ತೇವೆ ಎಂದು ಹೇಳುವ ಮೂಲಕ ಭಾರತ ಎಲ್ಲದ್ದಕ್ಕೂ ಸಿದ್ಧವಿದೆ ಎಂಬ ಸಂದೇಶವನ್ನು ಕಳುಹಿಸಿದರು.

ನಾವು ಮೊದಲು ಅಣ್ವಸ್ತ್ರ ಬಳಕೆ ಮಾಡುವುದಿಲ್ಲ. ಆದರೆ ನಮ್ಮ ಮೇಲೆ ದಾಳಿ ನಡೆಸಿದರೆ ನಾವು ಅಣ್ವಸ್ತ್ರ ಬಳಕೆಗೆ ಹಿಂಜರಿಕೆ ಮಾಡುವುದಿಲ್ಲ ಎಂಬ ನೀತಿಯನ್ನು ಭಾರತ ಅಳವಡಿಸಿಕೊಂಡಿದೆ.

## ಭೀಮಾನದಿಯಲ್ಲಿ ಈಜಲು ಹೋದ ಇಬ್ಬರು ಯುವಕರ ಮೃತ್ಯು

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :ಮೇ.12:ಭೀಮಾನದಿಯಲ್ಲಿ ಈಜಲು ಹೋದ ಇಬ್ಬರು ಯುವಕರು ನೀರಿನಲ್ಲಿ ಮುಳುಗಿ ಮೃತಪಟ್ಟಿರುವ ಘಟನೆ ಜಿಲ್ಲೆಯ ವಡಗೇರಾ ತಾಲೂಕಿನ ಗುರುಸಣಗಿ ಬ್ಯಾರೇಜ್ ಮುಂಭಾಗ ಭೀಮ ನದಿಯಲ್ಲಿ ನಡೆದಿದೆ. ಮೃತರನ್ನು ಗುರುಸಣಗಿ ಗ್ರಾಮದ ಶಕೀಲ್ (18) ಮಹಿಬೂಬ್ (20) ಎಂದು ಗುರುತಿಸಲಾಗಿದೆ. ಬೇಸಿಗೆ ಹಿನ್ನೆಲೆ ಸ್ನೇಹಿತರ ಜೊತೆ ಭೀಮಾನದಿಗೆ ಈಜಾಡಲು ಬಂದಿದ್ದರು. ಈ ವೇಳೆ ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ. ಸ್ಥಳೀಯರ ಸಹಾಯದಿಂದ ನೀರಿನಿಂದ ಮೃತದೇಹವನ್ನು ತೆಗೆಯಲಾಗಿದೆ. ಸ್ಥಳಕ್ಕೆ ಯಾದಗಿರಿ ನಗರ ಪೊಲೀಸ್ ಠಾಣೆ ಪಿಎಸ್ಐ ಮತ್ತು ವಡಗೇರಾ ಪಿಎಸ್ಐ ಬೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

ವಡಗೇರಾ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಆಸ್ತಿ ವಿವಾದ-ಇಬ್ಬರ ಬರ್ಬರ ಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.12– ಆಸ್ತಿ ವಿವಾದದ ಹಿನ್ನೆಲೆಯಲ್ಲಿ ವ್ಯಕ್ತಿಯೊಬ್ಬ ತನ್ನ ತಮ್ಮನ ಹೆಂಡತಿ ಮತ್ತು ಮಗನನ್ನು ಬರ್ಬರವಾಗಿ ಹತ್ಯೆಗೈದ ಘಟನೆ ಜಿಲ್ಲೆಯ ಇಲಕಲ್ಲ ತಾಲೂಕಿನ ನಂದವಾಡಗಿ ಗ್ರಾಮದಲ್ಲಿ ಸೋಮವಾರ ನಡೆದಿದೆ.

ಮುಂಜಾನೆ 11 ಗಂಟೆ ಹೊತ್ತಿಗೆ ಈ ಘಟನೆ ನಡೆದಿದ್ದು, ಸಣ್ಣಸೋಮಪ್ಪ ಗೋನಾಳ ಎಂಬ ವ್ಯಕ್ತಿ ಹೊಲದಲ್ಲಿ ಕೆಲಸ ಮಾಡುತ್ತಿದ್ದ ಸಂದರ್ಭದಲ್ಲಿ ತನ್ನ ತಮ್ಮನ ಹೆಂಡತಿ ಸಂಗಮ್ಮ ನಿಂಗಪ್ಪ ಗೋನಾಳ(45) ಹಾಗೂ ಆತನ ಪುತ್ರ ಸೋಮಪ್ಪ ನಿಂಗಪ್ಪ ಗೋನಾಳ(26) ಜೊತೆ ವಾಗ್ವಾದಕ್ಕೆ ಇಳಿದು ಜಗಳ ವಿಕೋಪಕ್ಕೆ ತಿರುಗಿದ್ದರಿಂದ ಸಣ್ಣಸೋಮಪ್ಪ ತನ್ನ ಕೈಯಲ್ಲಿದ್ದ ಕೊಡಲಿಯಿಂದ ಇಬ್ಬರನ್ನೂ ಹತ್ಯೆಗೈದಿದ್ದಾನೆಂದು ಹೇಳಲಾಗಿದೆ.

ಹತ್ಯೆಗೈದ ಸಣ್ಣಸೋಮಪ್ಪ ನಂದವಾಡಗಿ ಹೊರವಲಯ ಪೋಲಿಸ್ ಠಾಣೆಗೆ ಬಂದು ಶರಣಾಗಿದ್ದಾನೆ. ಡಿವೈಎಸ್‌ಪಿ ವಿಶ್ವನಾಥರಾವ್ ಕುಲಕರ್ಣಿ ಹಾಗೂ ಇಳಕಲ್ಲ ಗ್ರಾಮೀಣ ಪೋಲಿಸ್ ಠಾಣೆಯ ಪಿಎಸ್ಐ ಮಲ್ಲಿಕಾರ್ಜುನ ಸತ್ತಿಗೌಡರ ಸ್ಥಳಕ್ಕೆ ಭೇಟಿ ನೀಡಿದ್ದರು. ಪ್ರಕರಣ ಇಳಕಲ್ಲ ಠಾಣೆಯಲ್ಲಿ ದಾಖಲಾಗಿದೆ.

## ಆರ್ಥಿಕ ಸಮಾನತೆಗಾಗಿ ಗ್ಯಾರೆಂಟಿ ಯೋಜನೆ ಜಾರಿ:ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ ಮೈಸೂರು /ಬೆಂಗಳೂರು, ಮೇ 12 :ಯಾರು ಕೂಡ ಹಸಿವಿನಿಂದ ಇರಬಾರದು ಎಂದು ಅನ್ನಭಾಗ್ಯ ಯೋಜನೆಯನ್ನು ಜಾರಿಗೆ ತರಲಾಯಿತು. ಆರ್ಥಿಕ ಸಮಾನತೆಯನ್ನು ತಂದರೆ ಮಾತ್ರ ಅಭಿವೃದ್ಧಿಯನ್ನು ಕಾಣಲು ಸಾಧ್ಯ ಎಂದು ಆರ್ಥಿಕ ಸಮಾನತೆಯನ್ನು ತರಲು ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ಹೆಚ್. ಡಿ ಕೋಟೆ–ಯ ಪದವಿ ಪೂರ್ವ ಕಾಲೇಜಿನ ಮೈದಾನದಲ್ಲಿ ಹಮ್ಮಿಕೊಂಡಿದ್ದ ಅಂಬೇಡ್ಕರ್ ಅವರ 134 ನೇ ಜನ್ಮ ದಿನಾಚರಣೆ, ಪುತ್ಥಳಿ ಅನಾವರಣ,

(2ನೇ ಪುಟ ನೋಡಿ)

## ಗಾಣಗಾಪೂರ :ಸ್ನಾನ ಘಾಟ್ ನಿರ್ಮಾಣಕ್ಕೆ ನಿರ್ಧಾರ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಮೇ.12 ಅಫಜಲಪೂರ ತಾಲೂಕಿನ ಸುಕ್ಷೇತ್ರ ದೇವಲ ಗಾಣಗಾಪೂರದ ಸಂಗಮ ಸ್ಥಳದಲ್ಲಿ ಯಾತ್ರಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಅವಶ್ಯವಿರುವ ಕಡೆ 5 ಕೋಟಿ ರೂ. ವೆಚ್ಚದಲ್ಲಿ ಸ್ನಾನ್ ಘಾಟ್ ನಿರ್ಮಿಸಲಾಗುವುದು ಎಂದು ಜಿಲ್ಲಾಧಿಕಾರಿ ಬಿ.ಫೌ–ಜಿಯಾ ತರನ್ನುಮ್ ತಿಳಿಸಿದ್ದಾರೆ. ಶ್ರೀ ದತ್ತಾತ್ರೇಯನ ದೇವಸ್ಥಾನ ಅಭಿವೃದ್ಧಿ

(2ನೇ ಪುಟ ನೋಡಿ)

## ಕೇಂದ್ರದ ಕದನವಿರಾಮ ನಿರ್ಧಾರ ನಿರಾಸೆ ಮೂಡಿಸಿದೆ: ಸಚಿವ ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ :ಮೇ.12:ಭಯೋತ್ಪಾದಕ ತಾಣಗಳನ್ನು ನಮ್ಮ ಸೈನಿಕರು ಧ್ವಂಸ ಮಾಡಿದ್ದಾರೆ. ಆದರೆ, ಕೇಂದ್ರ ಸರ್ಕಾರ ಕದನ ವಿರಾಮದ ನಿರ್ಧಾರದಿಂದ ಸೇನೆಗೆ ಹಾಗೂ ಭಾರತೀಯ ಸಾಮಾನ್ಯ ನಾಗರಿಕರಿಗೆ ನಿರಾಸೆ ತಂದಿದೆ ಎಂದು ಗಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಕಲಬುರಗಿ ಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡುತ್ತಿದ್ದ ಅವರು ಪಾಕಿಸ್ತಾನ ನಂಬಿಕೆಗೆ ಅರ್ಹ ರಾಷ್ಟ್ರವಲ್ಲ. ನಮ್ಮ ನಾಗರಿಕರ ಮೇಲೆ ದಾಳಿ ಮಾಡಿದ ಭಯೋತ್ಪಾದಕರ ನೆಲೆಗಳ ಮೇಲೆ ಸೈನಿಕರು ದಾಳಿ ಮಾಡಿ ನಾಶ ಮಾಡಿದ್ದಾರೆ. ಆದರೆ, ಕದನ ವಿರಾಮ ಘೋಷಿಸಲಾಗಿದೆ. ಅದನ್ನು ಯಾರು ಘೋಷಿಸಬೇಕು.? ಯಾವ ಮಾನದಂಡಗಳ ಅಡಿಯಲ್ಲಿ ಮಾಡಲಾಗಿದೆ?

ಕದನ ವಿರಾಮ ಉಲ್ಲಂಘನೆ ಮಾಡಿದರೆ ಯಾವ ಕ್ರಮ ಕೈಗೊಳ್ಳಬೇಕು ? ಎನ್ನುವ ಬಗ್ಗೆ ಸರ್ಕಾರ ಅಧಿವೇಶನ ಕರೆದು ರಾಷ್ಟ್ರದ ಜನರಿಗೆ ವಾಸ್ತವ ತಿಳಿಸಲಿ ಎಂದು

ಒತ್ತಾಯಿಸಿದರು."ಕಾಶ್ಮೀರ ವಿಚಾರ ದ್ವಿಪಕ್ಷೀಯ ವಿಷಯವಾಗಿದ್ದು ಪಾಕಿಸ್ತಾನ ಹಾಗೂ ಭಾರತ ನಡುವಿನ ವಿಚಾರವನ್ನು ಈಗ ಅಮೇರಿಕಾ ಮಧ್ಯೆ ಪ್ರವೇಶಿಸುವ ಮೂಲಕ

(2ನೇ ಪುಟ ನೋಡಿ)

## ಧರ್ಮಕ್ಕಿಂತ ದೇಶ ದೊಡ್ಡದು, ಸಂಕಷ್ಟದ ಕಾಲದಲ್ಲಿ ಒಟ್ಟಾಗಿರೋಣ:ಡಾ.ಮಲ್ಲಿಕಾರ್ಜುನ ಖರ್ಗೆ ಕರೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಮೇ.12: ಯುದ್ಧ ಬೇ–ಕೋ ಅಥವಾ ಬುದ್ಧನ ಶಾಂತಿ ಮಂತ್ರ ಬೇಕೋ ಎಂಬ ಸಂಕಷ್ಟದ ಸಮಯದಲ್ಲಿ ಇಂದು ನಾವಿದ್ದೇವೆ. ಸ್ವಾಭಿಮಾನಕ್ಕೆ, ದೇಶದ ಭದ್ರತೆಗೆ ಧಕ್ಕೆಯಾದಾಗ ಜಾತಿ–ಧರ್ಮ ಮೀರಿ ದೇಶ ಪ್ರೇಮ ಮೆರೆಯಬೇಕು. ಧರ್ಮಕ್ಕಿಂತ ದೇಶ ದೊಡ್ಡದು ಎಂದು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ ಹೇಳಿದರು.

ಸೋಮವಾರ ಕಲಬುರಗಿ ನಗರದ ಸೇಡಂ ರಸ್ತೆಯಲ್ಲಿರುವ ಬುದ್ಧ ವಿಹಾರದಲ್ಲಿ ಸಿದ್ದಾರ್ಥ ವಿಹಾರ ಟ್ರಸ್ಟ್‌ನಿಂದ ಆಯೋಜಿಸಿದ 2569ನೇ ವೈಶಾಖ ಬುದ್ಧ ಪೂರ್ಣಿಮಾ

(2ನೇ ಪುಟ ನೋಡಿ)

## ಜಗತ್ತಿಗೆ ಶಾಂತಿ, ಸಮಾನತೆ ಹಾಗೂ ಸರಳತೆಯ ಸಂದೇಶ ನೀಡಿದರು ಗೌತಮಬುದ್ಧ : ಸಚಿವ ಈಶ್ವರ ಬಿ.ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಮೇ 12: ಜಗತ್ತಿಗೆ ಶಾಂತಿ, ಸಮಾನತೆ, ಸರಳತೆಯ ಸಂದೇಶ ನೀಡಿದರು ಗೌತಮಬುದ್ಧರು ಎಂದು ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಅವರು ಹೇಳಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಭಗವಾನ್ ಬುದ್ಧ ಜಯಂತ್ಯುತ್ಸವ ಅಂಗವಾಗಿ ಭಗವಾನ್ ಬುದ್ಧ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಸಮಾಜದಲ್ಲಿ ಮೌಢ್ಯತೆ, ಅಸಮಾನತೆ, ದೌರ್ಜನ್ಯ ಮುಂತಾದ ಅನೇಕ ಅನಿಷ್ಟ ಪದ್ಧತಿಗಳು ಆಚರಣೆಯಲ್ಲಿದ್ದವು. ಇಂತಹವುಗಳ



(2ನೇ ಪುಟ ನೋಡಿ)

ಒಂದನೇ ಪುಟದಿಂದ

## ಒಟ್ಟಾಗಿರೋಣ:ಡಾ.ಮಲ್ಲಿಕಾರ್ಜುನ ಖರ್ಗೆ ಕರೆ

ದಿನಾಚರಣೆ ಕಾರ್ಯಕ್ರಮದಲ್ಲಿ ಬುದ್ಧನ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿದ ನಂತರ ಉಪಾಸಕರು–ಉಪಾಸಕಿಯರು ಹಾಗೂ ಬೌದ್ಧ ಬಿಕ್ಕುಗಳನ್ನು ಉದ್ದೇಶಿಸಿ ಮಾತನಾಡಿದರು.

ದೇಶ ಉಳಿದಲ್ಲಿ ಸಂವಿಧಾನ, ಪ್ರಜಾಪ್ರಭುತ್ವ, ಧರ್ಮ ಉಳಿಯಲು ಸಾಧ್ಯ. ಹೀಗಾಗಿ ಯುದ್ಧೋನ್ಮಾದದ ಈ ಸಂದರ್ಭದಲ್ಲಿ ದೇಶದ ಜನತೆ ಯಾವುದಕ್ಕೂ ಧೃತಿಗೆಡಬಾರದು. ಆತ್ಮಸ್ಥೈರ್ಯ ಕಳೆದುಕೊಳ್ಳಬಾರದು. ಎಲ್ಲರು ಒಂದಾಗಿ ಸಂಕಷ್ಟದ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಬೇಕು ಎಂದು ಕರೆ ನೀಡಿದರು.

ಇತ್ತೀಚೆಗೆ ಜಮ್ಮು ಕಾಶ್ಮೀರ ಪೆಹಲ್ಗಾಂನಲ್ಲಿ ನಡೆದ ಭಯೋತ್ಪಾದಕರ ದುಷ್ಕೃತ್ಯ ಘಟನೆ ನೆನೆದ ಅವರು ಪಾಕಿಸ್ತಾನ ಕಲ್ಕೆರೆದು ಜಗಳ ಮಾಡುತ್ತಿದೆ. ಹಿಂದೆ 2–3 ಯುದ್ದದಲ್ಲಿ ಅವರಿಗೆ ನಾವು ಸೊಲಿಸಿದ್ದೇವೆ. ನಾವು ಶಾಂತಿ ಪ್ರಿಯರು. ಯಾವುದೇ ಯುದ್ದವಾದಲ್ಲಿ ಹಾನಿಕಾರಿಕ ತಪ್ಪಿದಲ್ಲ. ಜನಜೀವನ ತೊಂದರೆ ಅನುಭವಿಸಬೇಕಾಗುತ್ತದೆ. ಕೆಲ ಪರಿಸ್ಥಿತಿಯಲ್ಲಿ ಯುದ್ದ ಅನಿವಾರ್ಯ ಎಂದರೆ ಒಪ್ಪಿಕೊಳ್ಳಲೆಬೇಕಾಗುತ್ತದೆ ಎಂದರು.

ಗಡಿಯಲ್ಲಿ ದೇಶ ಕಾಯುತ್ತಿರುವ ಸೈನಿಕರ ನಿರಂತರ ಹೋರಾಟ, ತ್ಯಾಗ ಕೊಂಡಾಡಿದ ಅವರು ಆರ್ಮಿಗೆ ದೇಶದ ಸಂಪೂರ್ಣ ಬೆಂಬಲ ಇದೆ. ಅವರು ತೆಗೆದುಕೊಳ್ಳುವ ನಿರ್ಧಾರಕ್ಕೆ ದೇಶ ತಲೆಬಾಗುತ್ತದೆ ಎಂದು ಡಾ.ಮಲ್ಲಿಕಾರ್ಜುನ ಖರ್ಗೆ ಪುನರುಚ್ಚಿಸಿ ಸೈನಿಕರ ಕೆಚ್ಚೆದೆಯ ಹೋರಾಟ ಸ್ಮರಿಸಿದರು.

ಇದೇ ಸಂದರ್ಭದಲ್ಲಿ ಗಡಿಯಲ್ಲಿ ದೇಶದ ರಕ್ಷಣೆ ಮಾಡುತ್ತಾ ಹುತಾತ್ಮರಾದ ಸೈನಿಕರು ಮತ್ತು ಪೆಹಲ್ಗಾಂ ಘಟನೆಯಲ್ಲಿ ಜೀವ ಕಳೆದುಕೊಂಡ 26 ಜನರ ಆತ್ಮಕ್ಕೆ ಶಾಂತಿ ಕೋರಿ ಎರಡು ನಿಮಿಷ ಮೌನಾಚರಣೆ ಮಾಡಲಾಯಿತು.

ಬುದ್ದನ ಜನ್ಮ, ಮನೆ ಬಿಟ್ಟು ಹೊರಬಂದ ದಿನ, ಮಹಾಪರಿನಿರ್ವಾಣ ದಿನ ಹಾಗೂ ಜನರಿಗೆ ಬೌದ್ಧ ಧರ್ಮ ಪ್ರವಚನ ನೀಡಿದ್ದು ಇಂದಿನ ದಿನವೇ. ಹೀಗಾಗಿ ಬೌದ್ದ ಉಪಾಸಕರಿಗೆ ಇಂದು ತುಂಬಾ ಮಹತ್ವದ ದಿನವಾಗಿದೆ. ಬೌದ್ಧ ಧರ್ಮದ ಕುರಿತು ವಿದೇಶದಲ್ಲಿ ಹೆಚ್ಚು ಪ್ರಚಾರ ಕಾರ್ಯ ನಡೆದರೆ, ಜನ್ಮ ತಾಳಿದ ಭಾರತದಲ್ಲಿ ಅದು ಹೆಚ್ಚು ಪಸರಿಸುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಇದಕ್ಕು ಮುನ್ನ ಬೆಂಗಳೂರಿನ ಮಹಾಬೋಧಿ ಸಂಸ್ಥೆಯ ಪೂಜ್ಯ ಭಂತೇ ಧಮ್ಮದತ್ತ ಥೇರಾ ಅವರು ಬುದ್ದ ವಂದನೆ ಸಲ್ಲಿಸಿ ಪ್ರವಚನ ನೀಡಿದರು. ಡಾ.ಮಲ್ಲಿಕಾರ್ಜುನ ಖರ್ಗೆ ಮತ್ತು ರಾಧಾಬಾಯಿ ಖರ್ಗೆ ಅವರು ಬೌದ್ಧ ಬಿಕ್ಕುಗಳಿಗೆ ಸತ್ಕರಿಸಿದರು.

ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ, ಶಾಸಕ ಅಲ್ಲಮಪ್ರಭು ಪಾಟೀಲ, ವಿಧಾನ ಪರಿಷತ್ ಶಾಸಕರಾದ ತಿಪ್ಪಣ್ಣಪ್ಪ ಕಮಕನೂರ, ವಸಂತ ಕುಮಾರ, ಎ.ಐ.ಸಿ.ಸಿ ಕಾರ್ಯದರ್ಶಿ ಪ್ರಣವ ಝಾ, ಮಾಜಿ ಸಚಿವ ರೇವುನಾಯಕ ಬೆಳಮಗಿ ಸೇರಿದಂತೆ ಸಾವಿರಾರು ಸಂಖ್ಯೆಯಲ್ಲಿ ಬೌದ್ದ ಉಪಾಸಕರು, ಉಪಾಸಕಿಯರು ಭಾಗವಹಿಸಿದ್ದರು.

## ನೀಡಿದರು ಗೌತಮಬುದ್ಧ : ಸಚಿವ ಈಶ್ವರ ಬಿ.ಖಂಡ್ರೆ

ವಿರುದ್ಧವಾಗಿ ಸಮಾಜದಲ್ಲಿ ಶಾಂತಿ, ಸಹಬಾಳ್ವೆ, ಸಮಾನತೆ, ಪ್ರೀತಿ ವಿಶ್ವಾಸಗಳನ್ನು ಮೂಡಿಸಿದರು ಬುದ್ಧ. ರಾಜಮನೆತನದಲ್ಲಿ ಹುಟ್ಟಿದರು ಕೂಡ ಸರ್ವವೂ ತ್ಯಾಗ ಮಾಡಿ, ಬೋಧಿವೃಕ್ಷದ ಕೆಳಗೆ ತಪಸ್ಸು ಮಾಡಿ ಜ್ಞಾನವನ್ನು ಪಡೆದರು. ದೇಶದ ಹಲವೆಡೆ ಸಂಚಾರ ಕೈಗೊಂಡು ತಮ್ಮ ತತ್ವಗಳನ್ನು ಬೋಧಿಸಿದರು. ಜಗತ್ತಿನಲ್ಲಿ ಏನೇ ಅನಾಹುತ ಆಗಲು ಆಸೆಯೇ ಕಾರಣ, ಆಸೆ ದುಃಖಕ್ಕೆ ಮೂಲ ಕಾರಣವಾಗಿದೆ, ಆಸೆ ಬೀಡುವುದರಿಂದ ದುಃಖ ಕಡಿಮೆಯಾಗುತ್ತದೆ ಹಾಗೂ ಆಸೆ ಹೋಗಬೇಕೆಂದರೆ ಅಷ್ಟಾಂಗ ಮಾರ್ಗ ಪಾಲನೆ ಮಾಡಬೇಕು ಎಂದು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಗೌತಮಬುದ್ಧರ ಭಾವಚಿತ್ರದ ರಥ ಮೆರವಣಿಗೆಗೆ ಸಚಿವರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ, ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

ರಥ ಮೆರವಣಿಗೆಯು ನಗರದ ಪ್ರಮುಖ ರಸ್ತೆಗಳ ಮೂಲಕ ಹಾದು ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರ ತಲುಪಿತು. ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಿತು,

ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್ ಅವರು ಉದ್ಘಾಟಿಸಿ ಮಾತನಾಡಿ, ಭಗವಾನ್ ಬುದ್ಧರು ಸಮಾಜದಲ್ಲಿ ಮಾನವೀಯತೆ, ಸಮಾನತೆ, ಸಹಬಾಳ್ವೆಯಿಂದ ಜನರು ಬದುಕಲು ಮಾರ್ಗ ಹಾಕಿಕೊಟ್ಟಿದ್ದಾರೆ. ನಾವೆಲ್ಲರೂ ಸರಳತೆಯ ಜೀವನವನ್ನು ಅನುಸರಿಸಬೇಕು ಮತ್ತು ಪ್ರೀತಿ ವಿಶ್ವಾಸದಿಂದ ಕೂಡಿ ಬಾಳಬೇಕು. ಬುದ್ಧ,ಬಸವ, ಅಂಬೇಡ್ಕರ್ ಅವರ ಮಾರ್ಗದಲ್ಲಿ ನಡೆದು ಉತ್ತಮವಾದ ಸಮಾಜವನ್ನು ಕಟ್ಟಬೇಕು ಎಂದು ತಿಳಿಸಿದರು.

ನಿವೃತ್ತ ಪ್ರಾಂಶುಪಾಲರು ಹಾಗೂ ಬೀದರ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ವಿಠ್ಠಲದಾಸ ಪ್ಯಾಗೆ ಅವರು ಅತಿಥಿ ಉಪನ್ಯಾಸದಲ್ಲಿ ಮಾತನ್ನಾಡಿ ಬುದ್ಧರ ಜೀವನ ಹಾಗೂ ಬೌದ್ಧ ಧರ್ಮದ ಬಗ್ಗೆ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷರಾದ ಮಹಮ್ಮದ ಗೌಸ, ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ, ಪೂಜ್ಯ ಭಂತೆ ಅಶೋಕ , ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ವಿಜಯಕುಮಾರ ಸೊನಾರೆ, ಮಾರುತಿ ಬೌದ್ಧೆ, ಅನೀಲ ಬೆಲ್ದಾರ, ಬಾಬು ಪಾಸ್ವಾನ್, ಕಾಶಿನಾಥ ಚೆಲುವ,ರಾಜಪ್ಪ ಗೂನಳ್ಳಿ, ತಾನಾಜಿ ಸಗರ, ಶಿವಶರಣಪ್ಪ ಹುಗ್ಗೆ ಪಾಟೀಲ್, ಓಂ ಪ್ರಕಾಶ್ ರೊಟ್ಟೆ, ಚಕ್ರಧರ ಹೊಸಳಿ ಸೇರಿದಂತೆ ಸಮಾಜದ ವಿವಿಧ ಮುಖಂಡರು ಉಪಸ್ಥಿತರಿದ್ದರು.

## ನಿರಾಸೆ ಮೂಡಿಸಿದೆ: ಸಚಿವ ಪ್ರಿಯಾಂಕ್ ಖರ್ಗೆ

ಅಂತರಾಷ್ಟ್ರೀಯ ವಿಚಾರವನ್ನಾಗಿ ಮಾಡಲಾಗಿದೆ. ಕದನ ವಿರಾಮ ಘೋಷಣೆ ಮಾಡಲು ಟ್ರಂಪ್ ಯಾರು ? ಅವರ ಟ್ವಿಟ್ ನಲ್ಲಿರುವ ಅಂಶಗಳನ್ನು ಗಮನಿಸಿದ್ದೀರಾ? ಕಾಮನ್ ಸೆನ್ಸ್ ಎನ್ನುವ ಪದ ಬಳಸಿ, ಭಾರತಕ್ಕೆ ಬುದ್ದಿ ಹೇಳಿರುವ ರೀತಿಯಲ್ಲಿ ಟ್ವಿಟ್ ಮಾಡಿದ್ದಾರೆ. ಈ ಬಗ್ಗೆ ಪ್ರಧಾನಿ, ವಿದೇಶಾಂಗ ಸಚಿವರು ಹಾಗೂ ರಾಷ್ಟ್ರೀಯ ಭದ್ರತೆ ಸಲಹೆಗಾರರು ಕದನ ವಿರಾಮದ ಬಗ್ಗೆ ಯಾಕೆ ಜನರಿಗೆ ವಾಸ್ತವ ತಿಳಿಸುತ್ತಿಲ್ಲ" ಎಂದು ಅಸಮಧಾನ ವ್ಯಕ್ತಪಡಿಸಿದರು.


ವಿದೇಶಾಂಗ ನೀತಿಗಳು ಬಲಿಷ್ಠಗೊಳ್ಳಬೇಕಾದರೆ ಪ್ರಧಾನಿ ಗಳು ಹೊರದೇಶದ ಪ್ರಧಾನ ಮಂತ್ರಿಗಳನ್ನು ಅಪ್ಪಿಕೊಂಡರೆ ಸಾಲದು, ಅವರೊಂದಿಗೆ ಮಾತುಕತೆ ನಡೆಸಬೇಕಾಗುತ್ತದೆ. ಭಯೋತ್ಪಾದಕ ಕೃತ್ಯವನ್ನು ಅಮೇರಿಕಾ ಖಂಡಿಸಿಲ್ಲ. ಚೀನಾ ಹಾಗೂ ಟರ್ಕಿ ಪಾಕಿಸ್ತಾನಕ್ಕೆ ಬೆಂಬಲ ವ್ಯಕ್ತಪಡಿಸಿವೆ. ಈ ನಡುವೆ ಅಂತರಾಷ್ಟ್ರೀಯ ವಿತ್ತೀಯ ನಿಧಿ ( ಐಎಂಎಫ್) ಪಾಕಿಸ್ತಾನಕ್ಕೆ ಸಾಲ ಘೋಷಿಸಿದೆ ಎಂದರೆ ಭಾರತ ಸರ್ಕಾರ ಭಯೋತ್ಪಾದನೆಗೆ ಬೆಂಬಲವಾಗಿರುವ ಪಾಕಿಸ್ತಾನಕ್ಕೆ ಸಾಲ ನೀಡದಂತೆ ಮನವರಿಕೆ ಮಾಡಲು ವಿಫಲವಾಗಿದೆ. ಇದು ವಿದೇಶಾಂಗ ನೀತಿಗಳು ಎಡವುತ್ತಿವೆ ಎನ್ನುವ ಅಭಿಪ್ರಾಯ ಮೂಡುತ್ತಿದೆ.

ಕಾಂಗ್ರೆಸ್ ಪಕ್ಷದ ದೇಶದ ಹಿತಾಸಕ್ತಿ ಕಾಪಾಡಲು ಕೇಂದ್ರ ಸರ್ಕಾರಕ್ಕೆ ಬೆಂಬಲ ಘೋಷಿಸಿದೆ. ಪಹಲ್ಗಾಂ ದಾಳಿಯ ಭಯೋತ್ಪದಾಕರು ಏನಾದರು?; ಈಗ ಎಲ್ಲಿದ್ದಾರೆ ಎಂದು ಪ್ರಶ್ನಿಸಿದ ಸಚಿವರು, ಭಯೋತ್ಪಾದಕ ದಾಳಿ, ಹಾಗೂ ಕದನ ವಿರಾಮದ ಬಗ್ಗೆ ಪ್ರಧಾನಿ ಸಂಸತ್ತಿನ ಅಧಿವೇಶನ ಕರೆದು ದೇಶದ ನಾಗರಿಕರಿಗೆ ತಿಳಿಸಲಿ ಎಂದು ಒತ್ತಾಯಿಸಿದರು.

ಮಾಧ್ಯಮಗಳಲ್ಲಿ ಯುದ್ಧದ ರಂಜನೀಯ ಸುದ್ದಿಗಳನ್ನು ಪ್ರಸಾರ ಮಾಡುತ್ತಿರುವುದಕ್ಕೆ ಅಸಮಧಾನ ವ್ಯಕ್ತಪಡಿಸಿದ ಖರ್ಗೆ, ದೇಶದ ಹಿತಾಸಕ್ತಿ ಹಾಗೂ ವಾಸ್ತವಾಂಶಗಳಿಗಿಂತ ವ್ಯಕ್ತಿಯ ವೈಭವೀಕರಣವಾಗುತ್ತಿದೆ. ಮಾಧ್ಯಮಗಳಲ್ಲಿ ತಪ್ಪು ಮಾಹಿತಿ ಪ್ರಸಾರ ವಾಗುತ್ತಿದೆ. ಪಾನೆಲ್ ಚರ್ಚೆಯಲ್ಲಿ ಭಾಗವಹಿಸುವವರು ಹಾಗೂ ಬಿಜೆಪಿಯ ಬಾಡಿಗೆ ಭಾಷಣಕಾರರು ತಪ್ಪು ಮಾಹಿತಿಯನ್ನೇ ಹೇಳುತ್ತಿದ್ದಾರೆ. ಕರಾಚಿಯನ್ನು ವಶಪಡಿಸಿಕೊಳ್ಳಲಾಗುತ್ತಿದೆ, ಪಾಕಿಸ್ತಾನ ನಾಲ್ಕು ಭಾಗವಾಗುತ್ತದೆ ಎಂದು ಹೇಳಿದ್ದರು ಎಂದರು.

ಜಿಲ್ಲೆಯಲ್ಲಿ ಎಸ್ ಎಸ್ ಎಲ್ ಸಿ ಯ ಫಲಿತಾಂಶ ಕುಸಿಯುತ್ತಿರುವುದಕ್ಕೆ ತಾವು ಹೊಣೆಗಾರರಾಗುವುದಾಗಿ ಹೇಳಿದ ಸಚಿವರು, ಶೈಕ್ಷಣಿಕ ಗುಣಮಟ್ಟ ಅಭಿವೃದ್ದಿ ಪಡಿಸುವ ನಿಟ್ಟಿನಲ್ಲಿ ನೀಲ ನಕ್ಷೆ ತಯಾರಿಸಲಾಗುತ್ತಿದ್ದು ಬೆಂಗಳೂರು ಮೂಲದ ಎರಡು ಎನ್ ಜಿ ಓ ಗಳೊಂದಿಗೆ ಈಗಾಗಲೇ ಚರ್ಚೆ ನಡೆಸಲಾಗಿದೆ. ಇದರ ಫಲಿತಾಂಶ ಮುಂದಿನ ಮಾರ್ಚ್ ತಿಂಗಳಲ್ಲಿ ಗೊತ್ತಾಗಲಿದೆ ಎಂದರು.

## ಬೆಳೆ ವಿಮೆ ಉತ್ತೇಜನಕ್ಕೆ ಅಗತ್ಯ ಕ್ರಮವಹಿಸಲು ಸೂಚನೆ



ಕಲಬುರಗಿ,ಮೇ.12:ರಾಜ್ಯದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಸೋಮವಾರ ಕಲಬುರಗಿ ನಗರದ ಕೃಷಿ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಏರ್ಪಡಿಸಲಾಗಿದ್ದ 2025–26 ರ ಸಾಲಿನ ಮುಂಗಾರು ಹಂಗಾಮಿನ ಪೂರ್ವಸಿದ್ದತೆ ಕಾರ್ಯಾಗಾರದ ಉದ್ಘಾಟನೆ ನೆರವೇರಿಸಿದರು.ಬೆಳೆ ವಿಮೆ ಹೆಚ್ಚಿಸುವ ನಿಟ್ಟಿನಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸಿ ರೈತರಿಗೆ ಬೆಳೆ ವಿಮೆ ಅಗತ್ಯ ಹಾಗೂ ಅನುಕೂಲತೆಗಳ ಬಗ್ಗೆ ಮನವರಿಕೆ ಮಾಡಿಕೊಡಬೇಕು ಎಂದು ಸೂಚಿಸಿದರು. ಇದಕ್ಕೂ ಮುನ್ನ ರೈತರಿಗೆ ವಿವಿಧ ಕೃಷಿ ಯೋಜನೆಗಳು ಕುರಿತು ಅರಿವು ಮೂಡಿಸುವ ಅಭಿಯಾನ ಉದ್ಘಾಟಿಸಿದರು.ಈ ಸಂದರ್ಭದಲ್ಲಿ ಶಾಸಕ ಅಲ್ಲಮಪ್ರಭು ಪಾಟೀಲ, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಶಿಂಧೆ, ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಸೇರಿದಂತೆ ಹಾಜರಿದ್ದರು.

## ಯೋಜನೆ ಜಾರಿ:ಸಿದ್ದರಾಮಯ್ಯ

2569 ನೇ ಬುದ್ಧಪೂರ್ಣಿಮೆ ಭಗವಾನ್ ಬುದ್ಧ

ಜಯಂತಿ ಮಹೋತ್ಸವ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆಯನ್ನು ನೆರವೇರಿಸಿ ಅವರು ಮಾತನಾಡಿದರು. ಇಂದು ಗೌತಮ ಬುದ್ಧ ಅವರ ಜನ್ಮದಿನ, ಸರ್ಕಾರದ ವತಿಯಿಂದ ಬುದ್ಧ ಜಯಂತಿಯನ್ನು ಆಚರಣೆ ಮಾಡುತ್ತಾ ಇದ್ದೇವೆ. ಬುದ್ಧ ಸುಮಾರು 2500 ವರ್ಷಗಳ ಹಿಂದೆ ಭಾರತದಲ್ಲಿ ಜನಿಸಿ ಜೀವಿಸಿದ್ದರು. ಬುದ್ಧ ಅವರು ಆಸೆಯೇ ದುಃಖಕ್ಕೆ ಕಾರಣ ಎಂದು ತಿಳಿಸಿದರು ಎಂದು ಮಾಹಿತಿ ನೀಡಿದರು.

ನಾವು ಇಂದು ಡಾ. ಬಿ ಆರ್ ಅಂಬೇಡ್ಕರ್ ಅವರ 134 ನೇ ಜಯಂತೋತ್ಸವವನ್ನು ಆಚರಣೆ ಮಾಡುತ್ತಾ ಇದ್ದೇವೆ. ಬಸವಣ್ಣ ಅವರು ದಯೆಯೇ ಧರ್ಮದ ಮೂಲವಯ್ಯ ಎಂದು ತಿಳಿಸಿದ್ದಾರೆ. ನಮ್ಮ ದೇಶದಲ್ಲಿ ಹಲವು ಜಾತಿ ಧರ್ಮಗಳ ಜನರು ವಾಸಿಸುತ್ತಿದ್ದೇವೆ. ನಾವು ವೈವಿಧ್ಯತೆಯಲ್ಲಿ ಏಕತೆಯನ್ನು ಕಾಣಬೇಕು. ಬುದ್ಧ ಬಸವ ಅಂಬೇಡ್ಕರ್ ಅವರನ್ನು ಮಾನವತಾ ವಾದಿಗಳು ಎಂದು ಕರೆಯುತ್ತೇವೆ. ಮನುಷ್ಯ ಮನುಷ್ಯನನ್ನು ಪ್ರೀತಿಸಬೇಕು ಎಂದು ತಿಳಿಸಿದರು.

ಪರಿಶಿಷ್ಟ ಜಾತಿಯ ಒಳಮೀಸಲಾತಿ ಜಾರಿಗೆ ನ್ಯಾಯಮೂರ್ತಿ

ಡಾ.ಎಚ್.ಎನ್. ನಾಗಮೋಹನ್ ದಾಸ್ ಅವರ ಏಕ ಸದಸ್ಯ ಆಯೋಗವನ್ನು ರಚಿಸಿ ಸಮೀಕ್ಷೆ ಮಾಡಿಸಲಾಗುತ್ತಿದೆ. ಪ್ರತಿಯೊಬ್ಬರೂ ಶಿಕ್ಷಣವನ್ನು ಪಡೆಯಬೇಕು. ಜನರು ಅಭಿವೃದ್ಧಿ ಹೊಂದಲು ಆರ್ಥಿಕವಾಗಿ ಸಬಲರಾಗಲು ಶಿಕ್ಷಣ ಅತಿ ಮುಖ್ಯ. ನಾವೆಲ್ಲರೂ ಮನುಷ್ಯರಾಗಿ ಬದುಕಬೇಕು. ಆಗ ನಾವು ಬುದ್ಧ ಬಸವ ಅಂಬೇಡ್ಕರ್ ಗಾಂಧಿ ಅವರಿಗೆ ಗೌರವ ನೀಡಿದಂತೆ ಆಗುತ್ತದೆ ಎಂದು ತಿಳಿಸಿದರು.

ನಾವು ಗ್ಯಾರೆಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿಯನ್ನು ಮಾಡುತ್ತಿದ್ದೇವೆ. ನಮ್ಮ ಸರ್ಕಾರ ಆರ್ಥಿಕವಾಗಿ ಸಬಲವಾಗಿದೆ. ಗ್ಯಾರೆಂಟಿ ಯೋಜನೆಗಳಿಗೆ ಕಳೆದ ವರ್ಷ 52 ಸಾವಿರ ಕೋಟಿ ಹಾಗೂ 1 ಲಕ್ಷದ 34 ಸಾವಿರ ಕೋಟಿಯನ್ನು ಅಭಿವೃದ್ಧಿ ಕಾರ್ಯಗಳಿಗೆ ಖರ್ಚು ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಹಸಿವು ಮುಕ್ತ ಮಾಡಲು ಅನ್ನಭಾಗ್ಯ ಯೋಜನೆ, ರಾಜ್ಯದ 1.2 ಕೋಟಿ ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆಯಡಿ ಮಾಸಿಕ

2000, ಗೃಹ ಜ್ಯೋತಿ ಯೋಜನೆಯಡಿ 200 ಯುನಿಟ್ ವರೆಗೆ ಉಚಿತ ವಿದ್ಯುತ್, ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಹಾಗೂ ಯುವನಿಧಿ ಯೋಜನೆಯಡಿ ಪದವಿ ಪಡೆದ ನಿರುದ್ಯೋಗಿಗಳಿಗೆ 3000 ಹಾಗೂ ಡಿಪ್ಲಮೋ ಪಡೆದ ನಿರುದ್ಯೋಗಿಗಳಿಗೆ 1500 ರೂ ನಿರುದ್ಯೋಗ ಭತ್ಯೆ ನೀಡಲಾಗುತ್ತಿದೆ ಎಂದು ತಿಳಿಸಿದರು.

## ಸ್ನಾನ ಘಾಟ್ ನಿರ್ಮಾಣಕ್ಕೆ ನಿರ್ಧಾರ

ಕುರಿತಂತೆ ಇತ್ತೀಚೆಗೆ ಅಫಜಲಪೂರ ಶಾಸಕ ಎಂ.ವೈ.ಪಾಟೀಲ ಮತ್ತು ಸಂಬಂಧಿತ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಕರ್ನಾಟಕ ನೀರಾವರಿ ನಿಗಮದಿಂದ ಅನುದಾನ ಪಡೆದು ಸ್ನಾನ್ ಘಾಟ್ ನಿರ್ಮಿಸಲಾಗುವುದು ಎಂದರು.ಇನ್ನು ಸ್ನಾನ ಘಾಟ್ ದಲ್ಲಿ ಭಕ್ತರು ತೀರ್ಥ ಸ್ನಾನದ ನಂತರ ಸಂಗಮದಲ್ಲಿ ಬಟ್ಟೆ ಬಿಡುತ್ತಿದ್ದು, ಇದು ಜಲ ಮಾಲಿನ್ಯಕ್ಕೆ ಕಾರಣವಾಗುತ್ತಿದೆ. ಹೀಗಾಗಿ ಜಲ ಮಲೀನವಾಗುವುದನ್ನು ತಡೆಗಟ್ಟಲು ಸದರಿ ಬಟ್ಟೆಗಳನ್ನು ವೈಜ್ಞಾನಿಕವಾಗಿ ಬರ್ನ್ ಮಾಡಲು ಯಂತ್ರ ಖರೀದಿಗೆ ಡಿ.ಸಿ. ಸೂಚಿಸಿದರು.

ದೇವಸ್ಥಾನಕ್ಕೆ ಬರುವ ಭಕ್ತಾದಿಗಳಿಗೆ ಪ್ರಸಾದ ವಿತರಣೆಗೆ ದಾಸೋಹ ಭವನ ತೆರೆಯಬೇಕು. ಇದಕ್ಕಾಗಿ ದಾನಿಗಳ ನೆರವು ಪಡೆಯಲು ಮತ್ತು ಪ್ರತ್ಯೇಕ ಬ್ಯಾಂಕ್ ಖಾತೆ ತೆರೆಯುವಂತೆ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಡಿ.ಸಿ. ಅವರು, ಸಾರತವಜನಿಕರು

ಇದಲ್ಲದೆ "ಪ್ರಸಾದ" ಯೋಜನೆಯಡಿ ದೇವಸ್ಥಾನ ಅಭಿವೃದ್ಧಿಗೆ 83.52 ಕೋಟಿ ರೂ. ಮೊತ್ತದ ಕ್ರಿಯಾ ಯೋಜನೆಜಯನ್ನು ರೂಪಿಸಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು ಸಲ್ಲಿಸಿದ್ದು, ಇದು ಅನುಮೋದನೆಯಾಗಿ ನುದಾನ ಬಿಡುಗಡೆಯಾದಲ್ಲಿ ದೇವಸ್ಥಾನ ಮತ್ತು ಗಾಣಗಾಪೂರದ ಅಭಿವೃದ್ಧಿಗೆ ಶುಕ್ರದೆಸೆ ಬರಲಿದೆ ಎಂದರು.

ಸಭೆಯಲ್ಲಿ ಪ್ರವಾಸೋದ್ಯಮ ಇಲಾಖೆಯ ಪ್ರಭಾರಿ ಉಪನಿರ್ದೇಶಕಿ ಅನುಸುಯಾ ಹೂಗಾರ, ಆಫಜಲಪೂರ ತಹಶೀಲ್ದಾರ ಸಂಜೀವಕುಮಾರ ದಾಸರ್, ಲೊಕೋಪಯೋಗಿ ಇಲಾಖೆಯ ಎ.ಇ.ಇ ಲಕ್ಷ್ಮಿ ಕಾಂತ ನಾಯಕ್, ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಶಿವಕಾಂತಮ್ಮ ಸೇರಿದಂತೆ ಅನೇಕ ಅಧಿಕಾರಿಗಳು ಭಾಗವಹಿಸಿದ್ದರು.

## ಇಂದಿನಿಂದ ಕೊಪ್ಪಳ ಮಾವು ಪ್ರದರ್ಶನ ಹಾಗೂ ಮಾರಾಟ ಮೇಳ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮೇ.12: ನೈಸರ್ಗಿಕವಾಗಿ ಮತ್ತು ವೈಜ್ಞಾನಿಕವಾಗಿ ಮಾಗಿಸಿದ ವಿವಿಧ ತಳಿಗಳ ಮಾವಿನ ಹಣ್ಣುಗಳನ್ನು ರೈತರಿಂದ ನೇರವಾಗಿ ಗ್ರಾಹಕರಿಗೆ,ರೈತ–ರಿಂದ ಖರೀದಿಸಿ ರೈತರನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಕೊಪ್ಪಳ ತೋಟಗಾರಿಕೆ ಇಲಾಖೆ ವತಿಯಿಂದ "ಕೊಪ್ಪಳ ಮಾವು ಮೇಳ–2025" ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಮೇ 13 ರಿಂದ 22ರ ವರೆಗೆ ನಗರದ ತೋಟಗಾರಿಕೆ ಉಪನಿರ್ದೇಶಕರ ಕಚೇರಿ ಆವರಣದಲ್ಲಿ ಏರ್ಪಡಿಸಲಾಗಿದ್ದು, ಉದ್ಘಾಟನಾ ಕಾರ್ಯಕ್ರಮ ಮೇ 13ರ ಬೆಳಗ್ಗೆ 10.30 ಗಂಟೆಗೆ ನಡೆಯಲಿದೆ.

ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ ಅವರು ಕಾರ್ಯಕ್ರಮ ಉದ್ಘಾಟಿಸುವರು. ತೋಟಗಾರಿಕೆ ಮತ್ತು ಗಣಿ ಹಾಗೂ ಭೂ ವಿಜ್ಞಾನ ಇಲಾಖೆಯ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ, ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ಶಾಸಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ ಮತ್ತು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಘನ ಉಪಸ್ಥಿತಿ ವಹಿಸುವರು. ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಅಧ್ಯಕ್ಷತೆ ವಹಿಸುವರು.

## ಪ್ರಬುದ್ಧ ಭಾರತದ ಕನಸುಗಾರನ 134ನೇ ಜಯಂತಿ ಸಂಭ್ರಮ ಆಚರಣೆ



ಅಫಜಲಪುರ:ಮೇ.12:ಇಂದು ಪಟ್ಟಣದ ನ್ಯಾಷನಲ್ ಫಂಕ್ಷನ್ ಹಾಲನಲ್ಲಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ 134 ನೇ ವರ್ಷದ ಜಯಂತ್ಯೋತ್ಸವ ಕಾರ್ಯಕ್ರಮದ ಪ್ರಯುಕ್ತ ಬೃಹತ್ ಬಹಿರಂಗ ಸಭೆ ಜರುಗಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಎಮ್.ವೈ.ಪಾಟೀಲರು ಒಳ್ಳೆಯ ದಿನದಂದು ಒಳ್ಳೆಯ ವ್ಯಕ್ತಿಯ ಜಯಂತ್ಯೋತ್ಸವ ಮಾಡುತ್ತಿರುವುದು ಬಹಳ ಸಂತೋಷಕರ ಸಂಗತಿಯಾಗಿದೆ.ಬುದ್ಧ ಪೂರ್ಣಿಮೆಯ ದಿನದಂದು ವಿಶ್ವಜ್ಞಾನಿಯ ಜಯಂತ್ಯೋತ್ಸವ ಮಾಡುತ್ತಿರುವುದು ನಮ್ಮ ಅದೃಷ್ಟದ ಸಂಗತಿಯಾಗಿದೆ. ಪ್ರಜಾಪ್ರಭುತ್ವದಲ್ಲಿ ಎಲ್ಲರಿಗೂ ಸಮಾನ ಅವಕಾಶ ಮಾಡಿಕೊಟ್ಟ ಮಹಾತ್ಮ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರು.ಪ್ರತಿವರ್ಷವೂ ಜಯಂತಿ ಮಾಡುತ್ತಿದ್ದೆವೆ.ಆದರೆ ಅವರ ಆದರ್ಶಗಳು ಎಷ್ಟು ಜನರಿಗೆ ಪರಿಣಾಮಕಾರಿಯಾಗಿ ಮುಟ್ಟಿದೆ ಎನ್ನುವುದು ಬಹಳ ಮುಖ್ಯವಾಗಿದೆ.ನಾವು ಕುಣಿದು ಕುಪ್ಪಳಿಸುವ ಸಲುವಾಗಿ ಜಯಂತಿ ಮಾಡುವುದಲ್ಲ. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯುವ ಕೆಲಸ ನಾವು ನಿವೆಲ್ಲರೂ ಮಾಡಬೇಕು. ಕಾರ್ಯಕ್ರಮ ಅಚ್ಚುಕಟ್ಟಾಗಿ ಮಾಡಿದ್ದಕ್ಕೆ ಸಂಘಟಕರಿಗೆ ಧನ್ಯವಾದಗಳನ್ನು ತಿಳಿಸುತ್ತೆನೆ. ಮುಂಬರುವ ವರ್ಷದಲ್ಲಿ ಬದಲಾವಣೆ ಬಯಸುವ ಆಶಯ ಎಲ್ಲರಲ್ಲಿ ಬರಬೇಕು.ಸರ್ವೆ ಜನ ಸುಖಿನೋಭವದ ಜೊತೆಗೆ ಸರ್ವೆ ಜನ ಶಿಕ್ಷಣೋಭವ ಎನ್ನುವ ನಿಟ್ಟಿನಲ್ಲಿ ಎಲ್ಲರಿಗೂ ಶಿಕ್ಷಣ ದೊರಕುವಂತ ಕೆಲಸವಾದಾಗ ಅಂಬೇಡ್ಕರ್ ಅವರ ಕನಸು ನನಸಾಗುತ್ತದೆ. ಅಂಬೇಡ್ಕರ್ ಅವರ ಸಂವಿಧಾನವನ್ನೆ ಬದಲು ಮಾಡುತ್ತೆನೆ ಎನ್ನುವ ಕೆಟ್ಟ ಮನಸ್ಸಿನ ವ್ಯಕ್ತಿಗಳು ಈ ದೇಶದಲ್ಲಿದ್ದಾರೆ.ಅವರು ಬರೆದ ಸಂವಿಧಾನಕ್ಕೆ ಧಕ್ಕೆಯಾದರೆ ಆಂತರಿಕ ಕ್ರಾಂತಿಯಾದಿತ್ತು ಎಂದು ಎಚ್ಚರಿಕೆ ನೀಡಿದರು.

ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ವಿಶ್ವರಾಧ್ಯ ಮಳೇಂದ್ರ ಶಿವಾಚಾರ್ಯರು ವಿಶೇಷವಾದ

ಕಾರ್ಯಕ್ರಮವನ್ನು ವಿಶೇಷವಾದ ವ್ಯಕ್ತಿಗಳು ಆಯೋಜಿಸಿದ್ದಾರೆ. ಇಂದು ನಮ್ಮ ಬಾಬಾಸಾಹೇಬ್ ಅಂಬೇಡ್ಕರ್ ಅವರ ಜಯಂತಿಯನ್ನು ಯುವಕರು ಮಾಡುತ್ತಿರುವುದು ವಿಶೇಷ ಸಂಗತಿಯಾಗಿದೆ. ಪುಸ್ತಕದ ಜ್ಞಾನ ಮನುಷ್ಯನ ಜೀವನದ ದಿಕ್ಕನ್ನು ಬದಲಿಸುತ್ತದೆ. ಜ್ಞಾನ ಸಂಗ್ರಹ ಜಗತ್ತನ ಆಳುತ್ತದೆ ಹೊರತು ಸಂಪತ್ತು ಅಧಿಕಾರದಿಂದಲ್ಲ ಎಂದು ಹೇಳಿದವರು ಅಂಬೇಡ್ಕರರು. ದೇಶದ ಪ್ರತಿಯೊಬ್ಬ ವ್ಯಕ್ತಿಗೂ ಅವನದ್ದೆ ಆದ ಸ್ವಾತಂತ್ರ್ಯ ಸಿಗಲು ಅವಕಾಶ ನೀಡಿದವರು ಬಾಬಾಸಾಹೇಬರು.ಎಲ್ಲರೂ ಅವರ ಜೀವನದ ಅಲ್ಪ ಜ್ಞಾನವನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಅವರಿಗೆ ಸತ್ಕಾರ ನಿಡಿದಂತಾಗುತ್ತದೆ ಸಂವಿಧಾನಕ್ಕೆ ನಿಜವಾದ ಗೌರವ ತೊರಿದಂತಾಗುತ್ತದೆ ಎಂದರು.

ನಂತರ ಮಾತನಾಡಿದ ಮಾಜಿ ಜಿಲ್ಲಾ ಪಂಚಾಯತ ಅಧ್ಯಕ್ಷರಾದ ನಿತೀನ್ ಗುತೆ–ೇದಾರ ಬಾಬಾಸಾಹೇಬ್ ಅಂಬೇಡ್ಕರ್ ಅವರು ಮನುಷ್ಯನ ಅಂಗಾಂಗಗಳಿದ್ದಂತೆ.ಅವುಗಳಿಲ್ಲ ಎಂದರೆ ಮನುಷ್ಯನ ಜೀವನವೇ ಇರುವುದಿಲ್ಲ.ಹಾಗೆ ಅಂಬೇಡ್ಕರ್ ಸಂವಿಧಾನವಿಲ್ಲ ಎಂದಾದ–ರೆ ನಾವು ನೀವುಗಳ್ಯಾರು ಇರುವುದಿಲ್ಲ.ಬಾಬಾಸಾಹೇಬರ ಕನಸು ನನಸಾಗಬೇಕಾದರೆ ನಾವು ನೀವುಗಳೆಲ್ಲರೂ ಶಿಕ್ಷಣವಂತರಾಗಬೇಕು. ದೇಶಕ್ಕೆ ನಮ್ಮದೆ ಆದ ಕೊಡುಗೆ ನೀಡಬೇಕು. ಪ್ರತಿಯೊಬ್ಬರಿಗೂ ಸಮಾನ ಅಧಿಕಾರ ಮತ್ತು ಎಲ್ಲರಿಗೂ ಒಂದೇ ರೀತಿಯ ಸ್ವಾತಂತ್ರ್ಯ ನೀಡಿದ್ದು ನಮ್ಮ ಸಂವಿಧಾನ. ಅದನ್ನು ಬರೆದು ದೇಶದ ಪ್ರಜಾಪ್ರಭುತ್ವಕ್ಕೆ ಸೂಕ್ತ ಬೆಲೆ ನೀಡಿದ ಮಹಾನೀಯ ಡಾ.ಬಾಬಾಸಾಹೇಬ್ ಅಂಬೇಡ್ಕರವರು ಎಂದರು.

ಇದೆ ಸಂದರ್ಭದಲ್ಲಿ ದಿವ್ಯ ಸಾನಿಧ್ಯವನ್ನು ವಿಶ್ವರಾಧ್ಯ ಮಳೇಂದ್ರಶಿವಾಚಾರ್ಯರು, ಯೋಗಿರಾಜಶಾಸ್ತ್ರಿಗಳು ವಹಿಸಿದರೆ ಶಾಸಕರಾದ ಎಮ್.ವೈ.ಪಾಟೀಲ, ತಹಶೀಲ್ದಾರ ಸಂಜುಕುಮಾರ ದಾಸರ, ಅಧ್ಯಕ್ಷತೆ ಅರವಿಂದ ಗುತ್ತೇದಾರ, ಮಾಜಿ ಜಿಲ್ಲಾ ಪಂಚಾಯತ ಸದಸ್ಯರಾದ ನಿತೀನ್ ಗುತ್ತೇದಾರ, ಪ್ರಬುದ್ಧ ಭಾರತದ ಕನಸುಗಾರನ 134ನೇ ಜಯಂತಿ ಸಂಭ್ರಮ

ಅಫಜಲಪುರ,:ಮೇ–12ರಂದು ಪಟ್ಟಣದ ನ್ಯಾಷನಲ್ ಫಂಕ್ಷನ್ ಹಾಲನಲ್ಲಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ 134 ನೇ ವರ್ಷದ ಜಯಂತ್ಯೋತ್ಸವ ಕಾರ್ಯಕ್ರಮದ ಪ್ರಯುಕ್ತ ಬೃಹತ್ ಬಹಿರಂಗ ಸಭೆ ಜರುಗಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಎಮ್.ವೈ.ಪಾಟೀಲರು ಒಳ್ಳೆಯ ದಿನದಂದು ಒಳ್ಳೆಯ ವ್ಯಕ್ತಿಯ ಜಯಂತ್ಯೋತ್ಸವ ಮಾಡುತ್ತಿರುವುದು ಬಹಳ ಸಂತೋಷಕರ ಸಂಗತಿಯಾಗಿದೆ.ಬುದ್ಧ ಪೂರ್ಣಿಮೆಯ ದಿನದಂದು ವಿಶ್ವಜ್ಞಾನಿಯ ಜಯಂತ್ಯೋತ್ಸವ ಮಾಡುತ್ತಿರುವುದು ನಮ್ಮ ಅದೃಷ್ಟದ ಸಂಗತಿಯಾಗಿದೆ. ಪ್ರಜಾಪ್ರಭುತ್ವದಲ್ಲಿ ಎಲ್ಲರಿಗೂ ಸಮಾನ ಅವಕಾಶ ಮಾಡಿಕೊಟ್ಟ ಮಹಾತ್ಮ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರು.ಪ್ರತಿವರ್ಷವೂ ಜಯಂತಿ ಮಾಡುತ್ತಿದ್ದೆವೆ.ಆದರೆ ಅವರ ಆದರ್ಶಗಳು ಎಷ್ಟು ಜನರಿಗೆ ಪರಿಣಾಮಕಾರಿಯಾಗಿ ಮುಟ್ಟಿದೆ ಎನ್ನುವುದು ಬಹಳ ಮುಖ್ಯವಾಗಿದೆ.ನಾವು ಕುಣಿದು ಕುಪ್ಪಳಿಸುವ ಸಲುವಾಗಿ ಜಯಂತಿ ಮಾಡುವುದಲ್ಲ. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯುವ ಕೆಲಸ ನಾವು ನಿವೆಲ್ಲರೂ ಮಾಡಬೇಕು. ಕಾರ್ಯಕ್ರಮ ಅಚ್ಚುಕಟ್ಟಾಗಿ ಮಾಡಿದ್ದಕ್ಕೆ ಸಂಘಟಕರಿಗೆ ಧನ್ಯವಾದಗಳನ್ನು ತಿಳಿಸುತ್ತೆನೆ. ಮುಂಬರುವ ವರ್ಷದಲ್ಲಿ ಬದಲಾವಣೆ ಬಯಸುವ ಆಶಯ ಎಲ್ಲರಲ್ಲಿ ಬರಬೇಕು.ಸರ್ವೆ ಜನ ಸುಖಿನೋಭವದ ಜೊತೆಗೆ ಸರ್ವೆ ಜನ ಶಿಕ್ಷಣೋಭವ ಎನ್ನುವ ನಿಟ್ಟಿನಲ್ಲಿ ಎಲ್ಲರಿಗೂ ಶಿಕ್ಷಣ ದೊರಕುವಂತ ಕೆಲಸವಾದಾಗ ಅಂಬೇಡ್ಕರ್ ಅವರ ಕನಸು ನನಸಾಗುತ್ತದೆ. ಅಂಬೇಡ್ಕರ್ ಅವರ ಸಂವಿಧಾನವನ್ನೆ ಬದಲು ಮಾಡುತ್ತೆನೆ ಎನ್ನುವ ಕೆಟ್ಟ ಮನಸ್ಸಿನ ವ್ಯಕ್ತಿಗಳು ಈ ದೇಶದಲ್ಲಿದ್ದಾರೆ.ಅವರು ಬರೆದ ಸಂವಿಧಾನಕ್ಕೆ ಧಕ್ಕೆಯಾದರೆ ಆಂತರಿಕ ಕ್ರಾಂತಿಯಾದಿತ್ತು ಎಂದು ಎಚ್ಚರಿಕೆ ನೀಡಿದರು.

ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ವಿಶ್ವರಾಧ್ಯ ಮಳೇಂದ್ರಶಿವಾಚಾರ್ಯರು ವಿಶೇಷವಾದ

ಕಾರ್ಯಕ್ರಮವನ್ನು ವಿಶೇಷವಾದ ವ್ಯಕ್ತಿಗಳು ಆಯೋಜಿಸಿದ್ದಾರೆ. ಇಂದು ನಮ್ಮ ಬಾಬಾಸಾಹೇಬ್ ಅಂಬೇಡ್ಕರ್ ಅವರ ಜಯಂತಿಯನ್ನು ಯುವಕರು ಮಾಡುತ್ತಿರುವುದು ವಿಶೇಷ ಸಂಗತಿಯಾಗಿದೆ. ಪುಸ್ತಕದ ಜ್ಞಾನ ಮನುಷ್ಯನ ಜೀವನದ ದಿಕ್ಕನ್ನು ಬದಲಿಸುತ್ತದೆ. ಜ್ಞಾನ ಸಂಗ್ರಹ ಜಗತ್ತನ ಆಳುತ್ತದೆ ಹೊರತು ಸಂಪತ್ತು ಅಧಿಕಾರದಿಂದಲ್ಲ ಎಂದು ಹೇಳಿದವರು ಅಂಬೇಡ್ಕರರು. ದೇಶದ ಪ್ರತಿಯೊಬ್ಬ ವ್ಯಕ್ತಿಗೂ ಅವನದ್ದೆ ಆದ ಸ್ವಾತಂತ್ರ್ಯ ಸಿಗಲು ಅವಕಾಶ ನೀಡಿದವರು ಬಾಬಾಸಾಹೇಬರು.ಎಲ್ಲರೂ ಅವರ ಜೀವನದ ಅಲ್ಪ ಜ್ಞಾನವನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಅವರಿಗೆ ಸತ್ಕಾರ ನಿಡಿದಂತಾಗುತ್ತದೆ ಸಂವಿಧಾನಕ್ಕೆ ನಿಜವಾದ ಗೌರವ ತೊರಿದಂತಾಗುತ್ತದೆ ಎಂದರು.

ನಂತರ ಮಾತನಾಡಿದ ಮಾಜಿ ಜಿಲ್ಲಾ ಪಂಚಾಯತ ಅಧ್ಯಕ್ಷರಾದ ನಿತೀನ್ ಗುತೆ–ೇದಾರ ಬಾಬಾಸಾಹೇಬ್ ಅಂಬೇಡ್ಕರ್ ಅವರು ಮನುಷ್ಯನ ಅಂಗಾಂಗಗಳಿದ್ದಂತೆ.ಅವುಗಳಿಲ್ಲ ಎಂದರೆ ಮನುಷ್ಯನ ಜೀವನವೇ ಇರುವುದಿಲ್ಲ.ಹಾಗೆ ಅಂಬೇಡ್ಕರ್ ಸಂವಿಧಾನವಿಲ್ಲ ಎಂದಾದ–ರೆ ನಾವು ನೀವುಗಳ್ಯಾರು ಇರುವುದಿಲ್ಲ.ಬಾಬಾಸಾಹೇಬರ ಕನಸು ನನಸಾಗಬೇಕಾದರೆ ನಾವು ನೀವುಗಳೆಲ್ಲರೂ ಶಿಕ್ಷಣವಂತರಾಗಬೇಕು. ದೇಶಕ್ಕೆ ನಮ್ಮದೆ ಆದ ಕೊಡುಗೆ ನೀಡಬೇಕು. ಪ್ರತಿಯೊಬ್ಬರಿಗೂ ಸಮಾನ ಅಧಿಕಾರ ಮತ್ತು ಎಲ್ಲರಿಗೂ ಒಂದೇ ರೀತಿಯ ಸ್ವಾತಂತ್ರ್ಯ ನೀಡಿದ್ದು ನಮ್ಮ ಸಂವಿಧಾನ. ಅದನ್ನು ಬರೆದು ದೇಶದ ಪ್ರಜಾಪ್ರಭುತ್ವಕ್ಕೆ ಸೂಕ್ತ ಬೆಲೆ ನೀಡಿದ ಮಹಾನೀಯ ಡಾ.ಬಾಬಾಸಾಹೇಬ್ ಅಂಬೇಡ್ಕರವರು ಎಂದರು.

ಇದೆ ಸಂದರ್ಭದಲ್ಲಿ ದಿವ್ಯ ಸಾನಿಧ್ಯವನ್ನು ವಿಶ್ವರಾಧ್ಯ ಮಳೇಂದ್ರಶಿವಾಚಾರ್ಯರು, ಯೋಗಿರಾಜ ಶಾಸ್ತ್ರಿಗಳು ವಹಿಸಿದರೆ ಶಾಸಕರಾದ ಎಮ್.ವೈ.ಪಾಟೀಲ, ಸಂಜುಕುಮಾರ ದಾಸರ, ಅಧ್ಯಕ್ಷತೆ ಅರವಿಂದ ಗುತ್ತೇದಾರ, ಮಾಜಿ ಜಿಲ್ಲಾ ಪಂಚಾಯತ ಸದಸ್ಯರಾದ ನಿತೀನ್ ಗುತ್ತೇದಾರ,

ಭಾವಚಿತ್ರ ಪೂಜೆಯನ್ನು ಕೆಪಿಸಿಸಿ ಸದಸ್ಯರಾದ ಪಪ್ಪು ಪಟೇಲ್ ಸಲ್ಲಿಸಿದರು ಆಯುಧ ಬಾನಿಶಾಲಿ, ಅಧ್ಯಕ್ಷರಾದ ಕುಮಾರ ಕೋಳಿಗೇರಿ, ಪುರಸಭೆ ಅಧ್ಯಕ್ಷರಾದ ಸುಹಾಸಿನಿ ಖೇಳಗಿ,ಮತೀನ ಪಟೇಲ, ಪಪ್ಪು ಪಟೇಲ, ದಯಾನಂದ ದೊಡ್ಡನಿ, ವಿಜಯ ಕುಮಾರ ಸಾಲಿಮನಿ, ಸಂಜುಕುಮಾರ ಬಗಲಿ, ಚಂದ್ರಶೇಖರ ಕರಜಗಿ, ಪ್ರಭಾವತಿ ಮೇತ್ರೆ,ಎಸ್.ಎಸ್.ಪಾಟೀಲ, ಭೀಮರಾವ್ ಗೌರ, ವಿಶ್ವನಾಥ ಕಾರ್ನಾಡ್, ಧಾನು ಪತಾಟೆ,ದುಂಡು ಜಮಾದಾರ, ಶಿವಾನಂದ ಗಾಡಿಸಾವಕಾರ, ಸುರೇಶ ಅವಟೆ,ಸಂತೋಷ ಥಲವಾದಿ, ಅನಸೂಯಾ ಸುಲೇಕಾರ, ನಾಗೇಶ ಕೊಳ್ಳಿ, ಶಂಕರ ಮ್ಯಾಕೇರಿ, ರಾಜುಗೌಡ ಅವರಳ್ಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ರೇಕುಳಗಿ ಮೌಂಟನ ಅನಾಥ ಪಿಂಡಕ ಬುದ್ಧ ವಿಹಾರದಲ್ಲಿ ಬುದ್ಧ ಪೂರ್ಣಿಮೆ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ತಾಲೂಕಿನ ಮನ್ನಾಎಖ್ಖೇಳ್ಳಿಗ್ರಾಮದಹತ್ತಿರದ ರೇಕುಳಗಿ ಮೌಂಟನ ಅನಾಥ ಪಿಂಡಕ ಬುದ್ಧ ವಿಹಾರದಲ್ಲಿ 2569ನೇ ವೈಶಾಖ ಬುದ್ಧ ಪೂರ್ಣಿಮೆ ಆಚರಿಸಲಾಯಿತು. ಬುದ್ಧಪೂರ್ಣಿಮೆ ನಿಮಿತ್ತವಾಗಿ ಬೆಳಿಗ್ಗೆ ಧಮ್ಮ ಧ್ವಜಾರೋಹಣ, ಭೋಧಿವೃಕ್ಷವಂದನೆ ಸೇರಿದಂತೆ ನಾನಾಧಾರ್ಮಿಕಕಾರ್ಯಕ್ರಮಗಳು ನಡೆದವು. ಮಧ್ಯಾಹ್ನ ಭಂತೆ ರೇವತ್, ಭಂತೆ ಧರ್ಮಪಾಲ,



ಭಿಕ್ಕು ಪ್ರಜಾಪತಿ ಅವರಿಂದ ಸಾಮೂಹಿಕ ಬುದ್ಧ ವಂದನೆ ಹಾಗೂಧಮ್ಮಪ್ರವಚನಸೇರಿದಂತೆ ನಾನಾ ಕಾರ್ಯಕ್ರಮಗಳು ನಡೆದವು. ಪ್ರಮುಖರಾದ ಕೆ ಪುಂಡಲಿಕರಾವ, ಪ್ರೇಮಸಾಗರ ದಾಂಡೇಕರ, ರಾಘವೇಂದ್ರಕಿರಣ, ನಾಗೇಂದ್ರ ದಂಡೆ, ವೀರಶೆಟ್ಟಿ ದಿನೆ ಸೇರಿದಂತೆ ಪ್ರಮುಖರು ಭಕ್ತಾದಿಗಳು ಉಪಸ್ಥಿತರಿದ್ದರು.



ಹುಮನಾಬಾದ:ತಾಳ್ಮೆ, ಸಹನೆಯ ಸ್ಫೂರ್ತಿಯಾಗಿದ್ದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿ ಆಚರಣೆಯನ್ನು ಪಟ್ಟಣದ ಶಿವಪೂರ ಬಡಾವಣೆಯಲ್ಲಿ ಮಾಡಲಾಯಿತು. ಈ ಸಂದರ್ಭದಲ್ಲಿ ವಂಸಂತರೆಡ್ಡಿ ಸುಪುತ್ರಿ ಸೋನಾಕ್ಷಿ ಹೇಮರೆಡ್ಡಿ ಮಲ್ಲಮ್ಮನವರ ದರ್ಶನ ಪಡೆದಳು. ಹಾಗೂ ಹೇಮರೆಡ್ಡಿಯವರ ವೇಷಧರಿಸಿ ಎಲ್ಲರ ಕಣ್ಮನ ಸೆಳೆದಳು. (ಮಲ್ಲಮ್ಮ ನುಡಿ ಚಿತ್ರ)

# ಬೆಳೆ ಸಮೀಕ್ಷೆದಾರರ ಸಂಘಕ್ಕೆ ಪದಾಧಿಕಾರಿಗಳ ಆಯ್ಕೆ
# ತಾಲುಕಾಧ್ಯಕ್ಷರಾಗಿ ವಿನೋದಕುಮಾರ ಉಡಬಾಳ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ : ಕರ್ನಾಟಕ ಬೆಳೆ ಸಮೀಕ್ಷೆದಾರರ ಸಂಘದ ತಾಲೂಕ ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ಸಂಘದ ಸಂಸ್ಥಾಪಕರ ಆದೇಶದ ಮೇರೆಗೆ ಹಾಗೂ ರಾಜ್ಯ ಸಂಘಟನಾ ಕಾರ್ಯದರ್ಶಿ ಸುಂದರ ರಾಜಪ್ಪ ಹಲಗೆಹಾಗೂಜಿಲ್ಲಾಧ್ಯಕ್ಷಮೋಹನ ಮಾನೆ. ನೇತೃತ್ವದಲ್ಲಿ ನೇಮಕ ಮಾಡಲಾಗಿದೆ.ತಾಲುಕಾಧ್ಯಕ್ಷರಾಗಿ ವಿನೋದಕುಮಾರ್ ಉಡಬಾಳ, ಗೌರವಾಧ್ಯಕ್ಷರಾಗಿ ಬಸವರಾಜ ನಿರ್ಣಾ, ಉಪಾಧ್ಯಕ್ಷರಾಗಿ ರಾಜಕುಮಾರಮುದನಾಳ,ಪ್ರಧಾನ ಕಾರ್ಯದರ್ಶಿಯಾಗಿ ರಮೇಶ ಪೂಜಾರಿ ಬಾದಲಾಪುರ್, ಸಹ



ಕಾರ್ಯದರ್ಶಿಯಾಗಿ ಲೋಕೇಶ ನಿರ್ಣಾ, ಕಾರ್ಯದರ್ಶಿಯಾಗಿ ಶ್ರೀನಿವಾಸ ಯಾದವ ಮುತ್ತಂಗಿ, ಖಜಾಂಚಿ ಸಂತೋಷಕುಮಾರ್ ಮುತ್ತಂಗಿ, ಸಂಚಾಲಕರಾಗಿ ಬಸವರಾಜ ಬೇಮಳಖೇಡ,



ಸದಸ್ಯರಾಗಿ ಬಾಬು ಮಾಡಗೋಳ, ಮಡೇಪ್ಪವಳಖಂಡಿ,ಶ್ರೀಮಂತರೆಡ್ಡಿ ಮುಸ್ತರಿವಾಡಿ, ಮಹೇಂದ್ರ ದೇವಗಿರಿ. ಅವರನ್ನು ನೇಮಕ ಮಾಡಲಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೌತಮ ಬುದ್ಧ ಪೂರ್ಣಿಮೆ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪಟ್ಟಣದ ಪುರಸಭೆ ಕಾರ್ಯಾಲಯದಲ್ಲಿ ಬುದ್ಧ ಪೂರ್ಣಿಮಾ ಜಯಂತಿ ತಥಾಗತ ಗೌತಮ್ ಬುದ್ಧರವರ ಭಾವಚಿತ್ರಕ್ಕೆ ಪುರಸಭೆಯ ಮುಖ್ಯಾಧಿಕಾರಿ ಹುಸಾಮುದ್ದಿನ್ ಬಾಬಾ, ಪುರಸಭೆ ಸದಸ್ಯರಾದ ದಿಲೀಪಕುಮಾರ ಬಗ್ದಲಕರ್, ರಹೇಮಾನ ಪಾಶ, ನಸೀರ ಖಾನ್, ವಿಶಾಲ ಬೊರಳೆ ರವರು ಪೂಜೆ ಸಲ್ಲಿಸಿದ್ದರು. ಪೂಜೆಕಾರ್ಯಕ್ರಮದಲ್ಲಿಪಟ್ಟಣದ ಪ್ರಮುಖರಾದ ಅಶೋಕ ಸ್ವಾಮಿ,



ಕಲ್ಯಾಣರಾವ ಜಾಬಾ, ಶ್ರೀಕಾಂತ ಫುಲೆ, ವಿಜಯಕುಮಾರ ಕಲ್ಲೂರ್, ಭಾಸ್ಕರ ಪುರಸಭೆ ಸಿಬ್ಬಂದಿಗಳಾದ ಪೂಜಾ ಪಾನಶೆಟ್ಟಿ, ವಿಜಯಕುಮಾರ, ಚಿದಾನಂದ ಪತ್ರಿ, ರಾಜಕುಮಾರ ಗುತ್ತೆದಾರ್, ಎಂಡಿ ತಾಹೇರ, ಕವಿತಾ, ಸರೋಜನಿ, ಆನಂದ, ಸಂತೋಷಕುಮಾರ, ಬಸವರಾಜ ಬಿರಾದರ, ನಥಾನಿಯೇಲ್, ಸಚಿನ, ಅಶ್ವಿನಿ, ಮಂಜುಳಾ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಒಳ ಮೀಸಲಾತಿ ಸಮೀಕ್ಷೆ: ಲೋಪದೋಷ ಸರಿಪಡಿಸಲು ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:-ಮೆ12 ಪರಿಶಿಷ್ಟ ಜಾತಿಗಳ ಸಮೀಕ್ಷೆಯ ಗಣತಿ ತಂತ್ರಾಂಶದಲ್ಲಿಲೋಪದೋಷಗಳಿದ್ದು, ಕಡಿಮೆ ವೇಗದ ನೆಟ್ ಬಳಸಿ ಸರ್ವೆ ಮಾಡುವುದಕ್ಕೆಸಮಯ ಹಿಡಿಯುತ್ತಿದೆ.ಅದನ್ನುಸರಿಪಡಿಸಿ ವೇಗದನೆಟ್‌ವ್ಯವಸ್ಥೆಮಾಡಬೇಕು. ಇಲ್ಲದಿದ್ದರೆ ಅನೇಕ ಮನೆಗಳ ಸದಸ್ಯರು ಗಣತಿಯಿಂದ ಹೊರಗುಳಿಯುವ ಸಾಧ್ಯತೆ ಇದೆ' ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಬಸವಕಲ್ಯಾಣ ತಾಲೂಕಾ ಸಂಚಾಲಕ ಪಿಂಟು ಕಾಂಬಳೆ ಹೇಳಿದರು.



ರೇಷನ್ ಕಾರ್ಡ್‌ನಲ್ಲಿಯ ವಿವರ ಕೈಬಿಟ್ಟು ಇತರ ದಾಖಲೆಗಳ ಆಧಾರದ ಮೇಲೆ ಗಣತಿ ನಡೆಯುವಂತೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ರಾಜ್ಯಸರ್ಕಾರನ್ಯಾಯಮೂರ್ತಿ ಎಚ್.ಎನ್.ನಾಗಮೋಹನದಾಸ್ ಏಕಸದಸ್ಯ ವಿಚಾರಣಾ ಆಯೋಗವು ಪರಿಶಿಷ್ಟ ಜಾತಿ ಒಳಮೀಸಲಾತಿ ವರ್ಗೀಕರಣ ಸಂಬಂಧ ರಾಜ್ಯದ ಪರಿಶಿಷ್ಟ ಜಾತಿಯಲ್ಲಿರುವ 101 ಜಾತಿಯ ಕುಟುಂಬಗಳ ಮನೆಗಳಿಗೆ ತೆರಳಿ ಗಣತಿ ಮಾಡಲಾಗುತ್ತಿದೆ. ಪರಿಶಿಷ್ಟ ಜಾತಿಯಲ್ಲಿಯ ಉಪಜಾತಿಗಳ ಜನಸಂಖ್ಯೆ, ಕುಟುಂಬಗಳ ಸಂಖ್ಯೆ, ಅವರ ಶಿಕ್ಷಣ, ವೃತ್ತಿ, ವಾಸಿಸುತ್ತಿರುವ ಪ್ರದೇಶ, ಮನೆಯ ಆದಾಯ, ಭೂಮಿಯ ಒಡೆತನ, ಸರ್ಕಾರದಿಂದ ಪಡೆಯುತ್ತಿರುವ ಸೌಲಭ್ಯಗಳು, ರಾಜಕೀಯಪ್ರಾತಿನಿಧ್ಯ ಇತ್ಯಾದಿ ವಿಷಯಗಳ ಕುರಿತು ದಾಖಲಿಸಬೇಕಿದೆ' ಎಂದು ಹೇಳಿದರು.

ಗಣತಿ ಕಾರ್ಯವನ್ನು ಸರ್ಕಾರ ಮೊಬೈಲ್ ಆ್ಯಪ್ ಮೂಲಕ ಮಾಡುತ್ತಿದ್ದು, ಸದರಿ ಆ್ಯಪ್‌ನಲ್ಲಿ ತಾಂತ್ರಿಕ ದೋಷಗಳಿಂದ, ವೇಗದ ಇಂಟರ್‌ನೆಟ್ ಇರದೇ ಗಣತಿ-ದಾರರು ಕಾಯುತ್ತಾ ಕುಳಿತುಕೊಳ್ಳುವ ಪ್ರಸಂಗಗಳು ನಡೆಯುತ್ತಿವೆ. ಗಣತಿ ಸಂದರ್ಭದಲ್ಲಿ ಪರಿಶಿಷ್ಟ ಜಾತಿ ಕುಟುಂಬವನ್ನು ಆಯ್ಕೆ ಮಾಡಿಕೊಂಡಲ್ಲಿ ಸಮಗ್ರಮಾಹಿತಿ ಒದಗಿಸಬೇಕಾಗಿರುತ್ತದೆ. ರೇಷನ್ ಕಾರ್ಡ್‌ನ ಆಧಾರದ ಮೇಲೆ ನಮೂದಿಸುವುದು ಸರಿಯಲ್ಲ. ರಾಜ್ಯದಲ್ಲಿ ಅನೇಕರು ಹೊಸ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿರುವ ಕಾರಣ ಅವರ ಹೆಸರುಗಳನ್ನು ಪಡಿತರ ಚೀಟಿಯಿಂದ ತೆಗೆಯಲಾಗಿದೆ. ಸಮೀಕ್ಷೆಮಾಡುವಾಗ ಮೊಬೈಲ್ ಆ್ಯಪ್‌ನಲ್ಲಿ ಪಡಿತರ ಚೀಟಿಯಲ್ಲಿ ಹೆಸರು ಇರದವರ ಕೇವಲ ಇಬ್ಬರ ಸದಸ್ಯರ ಹೆಸರುಗಳನ್ನು ಮಾತ್ರ ಸೇರಿಸಬಹುದು ಅಂತ ಸಮೀಕ್ಷೆದಾರರು ಹೇಳುತ್ತಿದ್ದಾರೆ. ಹಾಗೂ ಅನೇಕ ಜನರ ಜಾತಿ ಪ್ರಮಾಣ ಪತ್ರಗಳು ಅವರ ಪಡಿತರ ಚೀಟಿಗಳಿಗೆ ಲಿಂಕ್ ಇಲ್ಲದಿರುವುದರಿಂದ ಸಮೀಕ್ಷೆ ಮೊಬೈಲ್ ಆ್ಯಪ್‌ನಲ್ಲಿ ಅವರ ಜಾತಿ ಹೆಸರು ತೋರಿಸುತ್ತಿಲ್ಲ. ಹಾಗೂ ಇನ್ನೂ ಕೆಲವರ ಪಡಿತರ ಚೀಟಿ ಸಂಖ್ಯೆ ನಮೂದಿಸಿದಾಗ ಕೆಲವು ಸದಸ್ಯರ ವಯಸ್ಸು "0" ಅಂತ ಬರ್ತಾ ಇದೆ ಅಂತ ಸಮೀಕ್ಷೆದಾರರು ಹೇಳುತ್ತಿದ್ದಾರೆ.

ಆದ್ದರಿಂದ ಮೊಬೈಲ್ ಆ್ಯಪ್‌ನಲ್ಲಿ ಇಂತಹ ಅನೇಕ ಲೋಪದೋಷಗಳಿರುವ ಕಾರಣ ಪರಿಶಿಷ್ಟ ಜಾತಿಯ ಬಹಳಷ್ಟು ಕುಟುಂಬಗಳು ಗಣತಿಯಿಂದ ದೂರ ಉಳಿಯುವ ಸಾಧ್ಯತೆಯಿದೆ. ಇದರಿಂದ ಗಣತಿ ಉದ್ದೇಶವೇ ಈಡೇರದು. ನೆಟ್ ಹಾಗೂ ಮೊಬೈಲ್ ಆ್ಯಪ್ ಗಣತಿ ವಿಳಂಬಕ್ಕೆ ಕಾರಣವಾಗಿದೆ' ಎಂದರು.

ಪರಿಶಿಷ್ಟ ಜಾತಿಯಲ್ಲಿ ಬರುವ ಎಲ್ಲಾ ಉಪ ಜಾತಿಯ ಜನರು ಜಾತಿ ಸಮೀಕ್ಷೆ ಸರಿಯಾಗಿ ನಡೆ-ಯುತ್ತಿದೆಯೇ ಅಂತ ನಿಗಾ ವಹಿಸಿ ತಮ್ಮ ತಮ್ಮ ಸಮುದಾಯಗಳು ಸಮೀಕ್ಷೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು. ಹಾಗೂ ಸರ್ಕಾರ ತಕ್ಷಣವೇ ಜಾತಿಗಣತಿ ಸಮೀಕ್ಷೆಯ ಮೊಬೈಲ್ ಆ್ಯಪ್‌ನಲ್ಲಿರುವ ಲೋಪದೋಷಗಳನ್ನು ಸರಿಪಡಿಸಬೇಕು. ವೇಗದ ನೆಟ್ ವ್ಯವಸ್ಥೆ ಮಾಡಬೇಕು ಹಾಗೂ ರೇಷನ್ ಕಾರ್ಡ್‌ನಲ್ಲಿಯ ವಿವರಗಳ ಆಧಾರದ ಮೇಲೆ ಜಾತಿ ಸಮೀಕ್ಷೆ ಮಾಡುವುದನ್ನು ಕೈಬಿಟ್ಟು ಇತರ ದಾಖಲೆಗಳ ಆಧಾರದ ಮೇಲೆ ಜಾತಿ ಗಣತಿ ನಡೆಯುವಂತೆ ಮಾಡಬೇಕು ಎಂದು ಮನವಿಯ ಮೂಲಕ ಒತ್ತಾಯಿಸಿದ್ದಾರೆ.



ಹುಮನಾಬಾದ:ತಾಲ್ಲೂಕಿನ ಇಸ್ಲಾಂಪೂರ ಗ್ರಾಮದಲ್ಲಿ ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮರವರ 603ನೇ ಜಯಂತ್ಯೋತ್ಸವದ ನಿಮಿತ್ತ ಪ್ರಮುಖ ರಸ್ತೆಗಳ ಮುಖಾಂತರ ಹೇಮರೆಡ್ಡಿಯವರ ಭಾವಚಿತ್ರದ ರಥದ ವಾಹನದಲ್ಲಿ ಆದ್ದೂರಿಯಾಗಿ ಮೆರವಣಿಗೆ ಜರುಗಿತು. ಈ ಸಂದರ್ಭದಲ್ಲಿ ಶ್ರೀಕಾಂತರೆಡ್ಡಿ ಮಂಠಾಳಕರ್ ಅಧ್ಯಕ್ಷರು, ನಂದಕಿಶೋರ ರೆಡ್ಡಿ ಬೆಳಮಕುಂದ ಉಪಾಧ್ಯಕ್ಷ, ಬಸವರಾಜ ರೆಡ್ಡಿ ದೇಶಮಿ, ಕಾರ್ಯದರ್ಶಿ, ವಿಶಾಲ ರೆಡ್ಡಿ ಗಡವಂತಿಲೆಕ್ಕಾಧಿಕಾರಿ, ರಾಮಲಿಂಗ್‌ರೆಡ್ಡಿ ಬೆಳಮಕುಂದಾ, ವೀರಾರೆಡ್ಡಿ ಗಡವಂತಿ, ಭೀಮರೆಡ್ಡಿ ಮಟ್ಟಾ, ನವೀನ್ ರೆಡ್ಡಿ ಗಡವಂತಿ, ಪವನ್ ಪುಟ್ಟ, ಬಸವರಾಜ ಬಯ್ಯನ, ಪ್ರಭು ರೆಡ್ಡಿ ಕೌಡಳೆ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಅತ್ಯಧಿಕ ಆಮ್ಲಜನಕ ಬಿಡುಗಡೆ ಮಾಡುವ ಅರಳಿ ಬೇವು ಬೃಹತ್ ಪ್ರಮಾಣದಲ್ಲಿ ಬೆಳೆಸಿ

ಮಲ್ಲಮ್ಮ ನುಡಿ ವಾರ್ತೆ

ಹುಮ್ನಾಬಾದ್:ಅತ್ಯಧಿಕಆಮ್ಲಜನಕ ಬಿಡುಗಡೆ ಮಾಡುವ ಅರಳಿ ಬೇವು ಬೃಹತ ಪ್ರಮಾಣದಲ್ಲಿ ನೆಟ್ಟಿ ಸಂರಕ್ಷಿಸಬೇಕೆಂದು ಪರಿಸರವಾದಿ ಶೈಲೇಂದ್ರ ಕಾವಡಿ ಪಟ್ಟಣದ ಶ್ರೀ ವೀರಭದ್ರೇಶ್ವರ ಡಿಗ್ರಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮದಲ್ಲಿ ಪರಿಸರ ಸಂರಕ್ಷಣೆಯಲ್ಲಿ ವಿದ್ಯಾರ್ಥಿಗಳ ಪಾತ್ರ ಕುರಿತು ಮಾತನಾಡುತ್ತಾ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಅರಳಿ ಮರ ಬುದ್ಧನಿಗೆಜ್ಞಾನೋದಯಕೊಟ್ಟಂತ ಪವಿತ್ರವಾದ ಮರವಾಗಿದೆ 365 ದಿವಸಗಳಲ್ಲಿ ಮಾನವನಿಗೆ ಉಸಿರಾಟಕ್ಕೆ ಬೇಕಾಗುವಂತ ಶುದ್ಧವಾದಗಾಳಿ ಅರಳಿಮರದಿಂದ ದೊರಕುತ್ತದೆ ಎಂದರು, ಇಂಧನಬರ ಹೋಗಲಾಡಿಸಲು ಜೈವಿಕ ಇಂಧನ ಉತ್ಪಾದಿಸ ಉತ್ಪಾದಿಸಬೇಕಾದರೆ ಜೈವಿಕ ಇಂಧನದ ಗಿಡಮರಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಬೆಳೆಸಬೇಕೆಂದು ತಿಳಿಸಿದರು ಹೊಂಗೆ, ಬೇವು, ಕಾಡುಔಡಲು, ಮರ-ಗಿಡಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಉತ್ಪಾದಿಸಲು ಸಹಾಯವಾಗುತ್ತದೆ ಎಂದರು



ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ 150 ಗಿಡಗಳನ್ನು ಬಂಜರು ಭೂಮಿಯ ಬಂಗಾರ ಗಿಡ ಹಿಂದಿನ ಸರ್ಕಾರ ನಾಮಕರಣ ಮಾಡಿದೆ ಎಂದರು. ರೈತರು ತಮ್ಮ ಬಂಜಾರಭೂಮಿಯಲ್ಲಿ ಸುತ್ತಮುತ್ತ ಜೈವಿಕ ಇಂಧನ ಗಿಡಮರಗಳು ಬೆಳೆಸಿ ಇಂಧನ ಉತ್ಪಾದನೆಗೆ ಸಹಾಯ ಮಾಡಬೇಕೆಂದು ಮನವಿ ಮಾಡಿದರು. ವಿದ್ಯಾರ್ಥಿಗಳು ಕಡ್ಡಾಯವಾಗಿ ತಮ್ಮ ಮನೆ ಅಂಗಳದಲ್ಲಿ ಔಷಧಿ ಸಸ್ಯಗಳಾದ ತುಳಸಿ, ನೆಲ್ಲಿ, ಅಮೃತಬಳ್ಳಿ ಸಸಿ ನೆಡಲು ಮನವಿ ಮಾಡಿದರು. ಪರಿಸರಸಮತೋಲನಕಾಪಾಡುವಲ್ಲಿ ಪ್ರಾಣಿ ಪಕ್ಷಿಗಳ ಪಾತ್ರ ತುಂಬಾ ಅದ್ಭುತವಾಗಿದೆ. ಪ್ರಾಣಿ ಪಕ್ಷಿಗಳು ನಮ್ಮ ದೇಶದ ಸಂಪತ್ತು ಸಂರಕ್ಷಿಸಿ ಉಳಿಸಿ ಬೆಳೆಸಲು ಕರೆ ನೀಡಿದರು. ಕಾಲೇಜಿನಪ್ರಭಾರಿಪ್ರಾಚಾರ್ಯರಾದ ಸಂಗ್ರಾಮ ರೆಡ್ಡಿ, ಅಧ್ಯಕ್ಷತೆ ವಹಿಸಿ ಮಾತನಾಡಿ ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆಗೆ ವಿಶೇಷ ಕಳವಹಿಸಲು ತಿಳಿಸಿದರು. ರೈತರು ತಮ್ಮ ಮಣ್ಣನ್ನು ಕಡ್ಡಾಯವಾಗಿ ಪ್ರತಿ ವರ್ಷ ಪರೀಕ್ಷೆ ಮಾಡಲು ಕೂಡ ತಿಳಿಸಿದರು. ಈ ಕಾರ್ಯಕ್ರಮದಲ್ಲಿ ರಾಷ್ಟಸೇವಾ ಯೋಜನೆ ಅಧಿಕಾರಿ ಪ್ರವೀಣ್ ಕಲಬುರ್ಗಿ ಸ್ವಾಗತಿಸಿ ಮಾತನಾಡಿದರು. ಡಾ. ವಿಕಾಸ ಮೋಸ್ಥಾರ, ದೀಪಕ ಕಲಬುರಗಿ, ಕ್ರಾಂತಿಕುಮಾರ, ಅರವಿಂದ ರಾಠೋಡ, ವಿದ್ಯಾರ್ಥಿನಿ ಭವಾನಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಕಮಲನಗರ ಮಿನಿ ವಿಧಾನಸೌಧ,ರಸ್ತೆ ಪಕ್ಕದಲ್ಲಿ ಕಾಮಗಾರಿ ಶಿಘ್ರ ಪ್ರಾರಂಭ: ಗುರುನಾಥ ವಡ್ಡೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ : ಕಮಲನಗರ ಮಿನಿ ವಿಧಾನಸೌಧ (ತಾಲೂಕು ಆಡಳಿತ ಭವನ) 15 ಕೋಟಿ ವೆಚ್ಚದಲ್ಲಿನ ಕಾಮಗಾರಿ ಶಿಘ್ರದಲ್ಲಿಯೆ ಖತಗಾಂವ ರಸ್ತೆ ಸಮೀಪ ರಾಜಕುಮಾರ ಪೋಲಿಸ ಪಾಟೀಲ ಕಮಲನಗರ ಇವರು ನೀಡಿದ ಜಮೀನು ಸರ್ವೆ ನಂ 79/*/6 ರಲ್ಲಿ 2 ಎಕರೆ 20 ಗುಂಟೆ ಜಮೀನಿನಲ್ಲಿ ಶಿಘ್ರದಲ್ಲಿಯೆ ಕರ್ನಾಟಕ ಹೌಸಿಂಗ ಬೋರ್ಡದಿಂದ ಕಾಮಗಾರಿ ಪ್ರಾರಂಭವಾಗಲಿದೆ ಎಂದು ಸಮಾಜ ಸೇವಕ ಗುರುನಾಥ ವಡ್ಡೆ ಪತ್ರಿಕಾ ಪ್ರಕಟಣೆ ಮುಖಾಂತರ ತಿಳಿಸಿದ್ದಾರೆ.

ದಿನಾಂಕ:12/09/2024ರಂದು ಕರ್ನಾಟಕ ಲೋಕಾಯುಕ್ತ-ಕ್ಕೆ ಗುರುನಾಥ ವಡ್ಡೆಯವರು ಕಮಲನಗರದ ಮಿನಿ ವಿಧಾನಸೌಧ ಖತಗಾಂವ ರಸ್ತೆ ಪಕ್ಕದಲ್ಲಿ ರಾಜಕುಮಾರ ಪೋಲಿಸ ಪಾಟೀಲ ಇವರು ನೀಡಿದ ಜಮೀನಿನಲ್ಲಿ ಮಿನಿ ವಿಧಾನಸೌಧ ಕಾಮಗಾರಿ ಕೈಗೊಳ್ಳಬೇಕು ಎಂದು ದೂರು ಸಲ್ಲಿಸಿದ್ದರು.

ದೂರು ಸಂಖ್ಯೆ/13209/2024 ಇರುತ್ತದೆ.

ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ ನಂತರ ಬೀದರ



ಜಿಲ್ಲಾಧಿಕಾರಿಗಳು ಕರ್ನಾಟಕ ಲೋಕಾಯುಕ್ತಕ್ಕೆ ವರದಿ ಸಲ್ಲಿಸಿ ವರದಿಯಲ್ಲಿ ರಾಜಕುಮಾರ ಪೋಲಿಸ ಪಾಟೀಲ ಇವರು ಕಮಲನಗರ ತಾಲೂಕು ಆಡಳಿತ ಕಛೇರಿ ನಿರ್ಮಾಣಕ್ಕಾಗಿ ತಮ್ಮ ಕಮಲನಗರ ಗ್ರಾಮದ ಜಮೀನಿನ ಸರ್ವೆ ನಂ 79/*/6 ರಲ್ಲಿ 2ಎ-20 ಗುಂಟೆ ಜಮೀನು ಸರ್ಕಾರಕ್ಕೆ ಬರೆದು ಕೊಟ್ಟಿರುತ್ತಾರೆ ಅದರಂತೆ ಪಹಣಿಯಲ್ಲಿ ಕಾಲಂ ನಂ 9 ರಲ್ಲಿ ಮಿನಿ ವಿಧಾನಸೌಧ ತಹಶೀಲ್ದಾರರ ಕಛೇರಿ ಕಮಲನಗರ ಎಂದು ನಮೋದಾಗಿರುತ್ತದೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿವತಿಯಿಂದ 2023-24ನೇ ಸಾಲಿಗೆ ಪ್ರಾದೇಶಿಕ ನಿಧಿ ಯೋಜನೆ ಅಡಿಯಲ್ಲಿ 15 ಕೋಟಿ ವೆಚ್ಚದಲ್ಲಿ ನೂತನ ತಾಲೂಕಾ ಆಡಳಿತ ಭವನ (ಮಿನಿ ವಿಧಾನಸೌಧ) ನಿರ್ಮಿಸಲು ಅನುಮೋದನೆ ನೀಡಿರುತ್ತಾರೆ, ಅನುದಾನವೂ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ 50% ಹಾಗೂ ಕಂದಾಯ ಇಲಾಖೆಯಿಂದ 50% ರಂತೆ ಅನುಷ್ಠಾನಕ್ಕಾಗಿ ಕಂದಾಯ ಇಲಾಖೆಗೆ ವಹಿಸಿ ಅದೇಶಿಸಿರುತ್ತಾರೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿರುತ್ತಾರೆ.

ಈ ಬಗ್ಗೆ ಯೋಜನೆ ಅನುಷ್ಠಾನಗೊಳಿಸಿರುತ್ತಿರುವ ಕರ್ನಾಟಕ ಹೌಸಿಂಗ ಬೋರ್ಡ ನವರು ಈಗಾಗಲೇ ಟೆಂಡರ ಪೂರ್ಣಗೊಳಿಸಿರುತ್ತಾರೆ, ಶಿಘ್ರದಲ್ಲಿಯೆ ಕಾಮಗಾರಿ ಪ್ರಾರಂಭವಾಗಲಿದೆ ಎಂದು ವಡ್ಡೆಯವರು ತಿಳಿಸಿರುತ್ತಾರೆ.

09/01/2019 ರಿಂದ ಸರ್ಕಾರದ ಮಟ್ಟದಲ್ಲಿ ಕಮಲನಗರ ಮಿನಿ ವಿಧಾನಸೌಧಾ ನಿರ್ಮಿಸುವ ಬಗ್ಗೆ ಹೋರಾಟ ಪ್ರಾರಂಭಿಸಲಾಗಿತ್ತು ಕೊನೆಗೂ ತಮ್ಮ ಹೋರಾಟಕ್ಕೆ ಜಯ ಸಿಕ್ಕಿದೆ, ಅಲ್ಲದೆ ಅನೇಕ ಸಂಘ ಸಂಸ್ಥೆಗಳು ಹಾಗೂ ಹೋರಾಟಗಾರರು ಈ ಬಗ್ಗೆ ನಿರಂತರ ಹೋರಾಟ ಮಾಡಿರುತ್ತಾರೆ ಈ ರೀತಿಯಾಗಿ ಎಲ್ಲರ ಹೋರಾಟಕ್ಕೆ ಪ್ರತಿಫಲವಾಗಿ ಇಂದು ಖತಗಾಂವ ರಸ್ತೆ ಪಕ್ಕದಲ್ಲಿ ಮಿನಿ ವಿಧಾನಸೌಧ ನಿರ್ಮಾಣವಾಗುತ್ತಿದೆ ಎಂದು ಸಮಾಜ ಸೇವಕ ಗುರುನಾಥ ವಡ್ಡೆಯವರು ಹರ್ಷವ್ಯಕ್ತಪಡಿಸಿದರು.

# ಕಮಲನಗರ ಬುದ್ಧ ಪೂರ್ಣಿಮಾ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಪಟ್ಟಣದ ತಹಶೀಲ ಕಛೇರಿಯಲ್ಲಿ ಭಗವಾನ್ ಬುದ್ಧ ಜಯಂತಿ ನಿಮಿತ್ಯ ಬುದ್ಧ ಪೂರ್ಣಿಮಾ ಕಾರ್ಯಕ್ರಮದಲ್ಲಿ ತಹಶೀಲ್ದಾರರಾದ ಅಮಿತಕುಮಾರ ಕುಲಕರ್ಣಿ ಅವರು ಭಗವಾನ್ ಬುದ್ಧರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಗ್ರೇಡ 2 ತಹಶೀಲ್ದಾರ ರಮೇಶ ಪೆದ್ದೆ,



ಸೀರೆಸ್ತುದಾರ ಅಶ್ವಿನಕುಮಾರ ಪಾಟೀಲ, ಕಂದಾಯ ನಿರೀಕ್ಷೆದಾರ ಪ್ರವೀಣ ಬಿರಾದಾರ, ಎಫ್. ಡಿ. ಪ್ರಶಾಂತ, ಎಕೆನಾಥ ಸೇರಿದಂತೆ ಕಛೇರಿಯ ಎಲ್ಲ ಸಿಬ್ಬಂದಿಗಳು ಮತ್ತು ಸಾರ್ವಜನಿಕ ಉಪಸ್ಥಿತರಿದ್ದರು.

# ಸಾವಳಿ ಹರಿನಾಮ ಸಪ್ತಾಹದಲ್ಲಿ ಶಾಸಕ ಪ್ರಭು ಚವ್ಹಾಣ ಭಾಗಿ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ತಾಲೂಕಿನ ಸಾವಳಿ ಗ್ರಾಮದಲ್ಲಿ ಏರ್ಪಡಿಸಿದ್ದ ಅಖಂಡ ಹರಿನಾಮ ಸಪ್ತಾಹ ಕಾರ್ಯಕ್ರಮದಲ್ಲಿ ಶಾಸಕರಾದ ಪ್ರಭು ಬಿ.ಚವ್ಹಾಣ ಭಾಗವಹಿಸಿ ಕಾರ್ಯಕ್ರಮದ ಮೆರಗು ಹೆಚ್ಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಆಧುನಿಕತೆಯ ಹೆಸರಿನಲ್ಲಿ ಜನತೆ ನಮ್ಮ ಸಂಸ್ಕೃತಿ, ಪರಂಪರೆಯನ್ನು ಮರೆಯುತ್ತಿದ್ದಾರೆ. ಅಖಂಡ ಹರಿನಾಮ ಸಪ್ತಾಹ ಸನಾತನ ಧರ್ಮವನ್ನು ಉಳಿಸಲು ಮತ್ತು ನಮ್ಮ ಸಂಸ್ಕೃತಿ, ಪರಂಪರೆಯನ್ನು ಮುಂದುವರೆಸಿಕೊಂಡು ಹೋಗಲು ಸಹಕಾರಿಯಾಗಿವೆ ಎಂದರು.

ಕಾಲ ಕ್ರಮೇಣ ಜನತೆ ಸುಖ, ಶಾಂತಿ, ನೆಮ್ಮದಿಯನ್ನು ಕಳೆದುಕೊಳ್ಳುತ್ತಿದ್ದಾರೆ. ಹರಿನಾಮ ಸಪ್ತಾಹ ಜೀವನದಲ್ಲಿ ಸಕಾರಾತ್ಮಕತೆಯನ್ನು ಪ್ರೇರೇಪಿಸಿ, ಜೀವನ ಉಜ್ವಲಗೊಳಿಸುತ್ತದೆ. ಬಹಳಷ್ಟು ಜನರನ್ನು ಕಾಡುವ ಕುಡಿತ, ಗುಟಕಾ ಸೇವನೆ, ಜೂಜಾಟ, ಸುಳ್ಳು, ಮೋಸದಂತಹ ದುರ್ಗುಣಗಳನ್ನು ದೂರವಾಗಿಸುತ್ತದೆ. ಹಾಗಾಗಿ ಇಂತಹ ಕಾರ್ಯಕ್ರಮಗಳು ಅತ್ಯಂತ ಅವಶ್ಯಕ ಎಂದು ತಿಳಿಸಿದರು.

ಪೂಜ್ಯ ಸಂತೋಷ ಮಹಾರಾಜ ವನವೆ ಅವರು ಕೀರ್ತನೆ ಕಾರ್ಯಕ್ರಮ




ನಡೆಸಿಕೊಟ್ಟರು. ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಶಿವರಾಜ ಅಲ್ಮಾಜೆ, ಪ್ರವೀಣ ಕಾರಬಾರಿ, ಭರತ ಕದಂ, ಬಳಿರಾಮ ಕಾಳೆ, ಅನೀಲ ತಮಗಾಳೆ, ಭೀಮ ಜಗದಂಡೆ, ವಿಜಯ ಬಿರಾದಾರ, ಜ್ಞಾನೇಶ್ವರ ಪಂಚಾವರೆ, ಮಹೇಶ ಬಾವಗೆ ಸೇರಿದಂತೆ ಇತರರಿದ್ದರು. ಇದಕ್ಕೂ ಮುನ್ನ ಶಾಸಕರು ಮಹಾಡೋಣಗಾಂವ ಗ್ರಾಮದಲ್ಲಿ ಏರ್ಪಡಿಸಿದ್ದ ಅಖಂಡ ಹರಿನಾಮ ಸಪ್ತಾಹದಲ್ಲಿ ಭಾಗವಹಿಸಿದರು.

# ಹಸುಗೂಸಿಗೆ ಮುತ್ತಿಟ್ಟು ಭಾರತಾಂಬೆಯ ರಕ್ಷಣೆಗೆ ವೀರಯೋಧ ಪ್ರತಾಪ್ ಕೆರೂರ!

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜಿಲ್ಲೆಯ ಆಳಂದ ತಾಲೂಕಿನ ಮಾದನಹಿಪ್ಪರಗಾ ಗ್ರಾಮದ ವೀರ ಯೋಧ ಪ್ರತಾಪ್ ಶಾಂತಮಲ್ಲ ಕೆರೂರ ಭಾರತೀಯ ಸೇನೆಯಲ್ಲಿ 13 ನೇ ವರ್ಷ ಸೇವೆ ಸಲ್ಲಿಸುತ್ತಿದ್ದು, ತನ್ನ ಕುಟುಂಬಕ್ಕೆ ವಿಶೇಷ ಅತಿಥಿಯಾಗಿ ತನ್ನ ಮಗಳು ಹುಟ್ಟಿದ್ದಾನೆ. ಮಗನನ್ನು ನೋಡಲು ವಾರದ ಹಿಂದೆ ದೆಹಲಿ ಗಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ವೀರ ಯೋಧ ಪ್ರತಾಪ್ ಕೆರೂರ ಅವರನ್ನು ತುರ್ತು ಕರೆ ಮಾಡಿ ಮರಳಿ ಬರುವಂತೆ ಸೇನಾಧಿಕಾರಿಗಳು ತಿಳಿಸಿದ ಬೆನ್ನಲ್ಲೇ. ಮಗ ಹುಟ್ಟಿದ ಕೇವಲ 11 ದಿನಗಳ ಒಳಗಾಗಿ ಭಾರತಾಂಭೆಯ ರಕ್ಷಣೆಗೆ ಜಮ್ಮು ಕಾಶ್ಮೀರ ಗಡಿಯಲ್ಲಿ ಯುದ್ಧ



ಮಾಡಲು ಹೋಗಿರುವುದು ಭಾರತೀಯರಲ್ಲಿ ಉತ್ಸಾಹದ ಜೊತೆಗೆ ದೇಶ ಭಕ್ತಿಯ ಪ್ರತೀಕ ಕಾಣುತ್ತಿದೆ. ಮಗ ಹುಟ್ಟಿದ ಕೆಲವೇ ದಿನಗಳಲ್ಲಿ ದೇಶದ ರಕ್ಷಣೆಗೆ ಹೊರಡುವ ಮುನ್ನ ಮಗನಿಗೆ ಮುತ್ತಿಟ್ಟು ಕುಟುಂಬಕ್ಕೆ ಬಾಯ್ ಬಾಯ್ ಹೇಳಿ ದೇಶದ ಗಡಿ ಕಾಯಲು ತುರ್ತು ಹೋಗಿರುವುದು ಭಾರತೀಯ ಯೋಧನಿಗಲ್ಲದೇ ಬೇರಿನ್ನಾರಿಗೂ ಬರುವುದಿಲ್ಲ. ಗಡಿ ಕಾಯಲು ಹೊರಟ ವೀರ ಯೋಧರ ಪತ್ನಿ ಮಧು ಪ್ರತಾಪ್ ಕೆರೂರ ಮಾತನಾಡಿ ನನ್ನ ಪತಿ ಕೇವಲ ನನ್ನ ಕುಟುಂಬ ಕಾಯುವುದಷ್ಟೆ ನನಗಿಷ್ಟವಿಲ್ಲ. ನನ್ನ ಹಾಗೂ ನನ್ನ ಕುಟುಂಬಕ್ಕಿಂತ ಭಾರತಾಂಭೆಯ ರಕ್ಷಣೆ ಬಹುಮುಖ್ಯ. ನನ್ನ ಗಂಡ ಯುದ್ಧ ಭೂಮಿಗೆ ಹೋರಾಡಲು ಹೋಗುವುದು ಖುಷಿಯ ಸಂಗತಿಯಾದರೂ ಇನ್ನೊಂದು ಕಡೆ ಹೆಮ್ಮೆ ಎನಿಸುತ್ತಿದೆ. ಭಾರತ ಗೆದ್ದು ಬರಲಿ ನನ್ನ ಪತಿ ಅಷ್ಟೇ ಅಲ್ಲದೇ ನಮ್ಮ ಭಾರತೀಯ ಸೈನ್ಯಕ್ಕೆ ಜಯವಾಗಲಿ ಎಂದು ಕಣ್ಣಂಚ್ಚಿನಲ್ಲಿ ನೀರು ತಂದು ಧೈರ್ಯದಿಂದ ಗಂಡನಿಗೆ ಬಿಳ್ಕೊಟ್ಟರು. ಇದೆ ಸಂದರ್ಭದಲ್ಲಿ ಕುಟುಂಬಸ್ಥರಾದ ಸೈಬಣ್ಣಾ ಅಣ್ಣೆನವರ, ಸುಜಾತಾ ಅಣ್ಣೆನವರ, ಮಂಜುನಾಥ ಸೇರಿದಂತೆ ಹಲವಾರು ಉಪಸ್ಥಿತರಿದ್ದರು.




ಬೀದರ: ಓಡವಾಡದಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಶಿಬಿರದ ಎರಡನೇ ದಿನವಾದ ಭಾನುವಾರ ನಡೆದ ಕಾರ್ಯಕ್ರಮದಲ್ಲಿ ವಕೀಲ ಬಸವರಾಜ ಪವಾರ್ ಮಹಿಳೆಯರಿಗೆ ಕಾನೂನು ಅರಿವು ಅಗತ್ಯತೆ ಕುರಿತು ಮಾತನಾಡಿದರು. ಪ್ರಾಚಾರ್ಯ ಮನೋಜಕುಮಾರ, ಸಂಚಿ ಹೊನ್ನಮ್ಮ ತಂಡದ ನಾಯಕಿ ತಬಸ್ಸುಮ್, ಕಾಲೇಜಿನ ಎನ್ ಎಸ್‌ಎಸ್ ಕಾರ್ಯಕ್ರಮ ಅಧಿಕಾರಿಗಳಾದ ಶ್ರೀನಿವಾಸ್ ರೆಡ್ಡಿ, ಡಾ. ವಿದ್ಯಾ ಪಾಟೀಲ ಇದ್ದರು.

## ಮಕ್ಕಳು ದೇಶದ ಆಶಾಕಿರಣವಾಗಲಿ : ಮಾಜಿ ಸೈನಿಕ ಬಕ್ಕಪ್ಪ



ಮಲ್ಲಮ್ಮನುಡಿವಾರ್ತೆ ಬೀದರ. ಮೇ. 12 : ಮಕ್ಕಳು ಎಸ್‌ಎಸ ್‌ಎಲ್‌ಸಿಯಲ್ಲಿ ಉತ್ತಮ ಅಂಕ ಗಳಿಸಿದ್ದಾರೆ ಮುಂದೆ ಉನ್ನತ ಶಿಕ್ಷಣ ಪಡೆದು ದೇಶದ ಆಶಾಕಿರಣವಾಗಲಿ ಎಂದು ಮಾಜಿ ಸೈನಿಕರಾದ ಬಕ್ಕಪ್ಪ ತಿಳಿಸಿದರು. ಬೀದರ ತಾಲೂಕಿನ ತಡಪಳ್ಳಿ ಗ್ರಾಮದಲ್ಲಿ ತಥಾಗತ್ ಗೌತಮ್ ಬುದ್ಧ ಪೂರ್ಣಿಮೆಯ ಶುಭದಿನದಂದು ಗ್ರಾಮಸ್ಥರ ಸಮ್ಮುಖದಲ್ಲಿ ಬುದ್ಧ ಪೂಜೆಯನ್ನು ಅಚ್ಚುಕಟ್ಟಾಗಿ ನೆರವೇರಿಸುವ ಮೂಲಕ ತಡಪಳ್ಳಿ ಗ್ರಾಮದಲ್ಲಿ ಎಸ್.ಎಸ್.ಎಲ್.ಸಿ. ಯಲ್ಲಿ ಉತ್ತೀರ್ಣರಾಗಿ ತಾಲೂಕ ಮಟ್ಟದಲ್ಲಿ ಪ್ರಥಮ ಸ್ಥಾನಪಡೆದು ನಮ್ಮೂರಿಗೆ ಹೆಮ್ಮೆತಂದುಕೊಟ್ಟ ವಿದ್ಯಾರ್ಥಿನಿಗೆ ಮತ್ತು ಎಲ್ಲಾ ವಿದ್ಯಾರ್ಥಿಗಳಿಗೆ ಮಾಜಿ ಸೈನಿಕರಾದ ಬಕ್ಕಪ್ಪ ಅವರ ವತಿಯಿಂದ ಗ್ರಾಮ ಪಂಚಾಯತ್ ಸದಸ್ಯರ ಮತ್ತು ಗ್ರಾಮದ ಮುಖಂಡರ ನೇತೃತ್ವದಲ್ಲಿ ಸನ್ಮಾನಿಸಿದ್ದರು. ಎಲ್ಲ ವಿದ್ಯಾರ್ಥಿಗಳಿಗೆ ಶುಭಾಶಯಗಳನ್ನು ಕೋರುತ್ತ ಇವರ ಮುಂದಿನ ಕನಸುಗಳು ನನಸಾಗಲಿ ಮತ್ತು ದೊಡ್ಡ ದೊಡ್ಡ ಹುದ್ದೆಗಳಲ್ಲಿ ಸೇರಿ ದೇಶಸೇವೆಯಲ್ಲಿ ತೊಡಗಿಸಿಕೊಳ್ಳಲಿ ಎಂದು ಶುಭ ಕೋರಿದರು. ಇದೇ ವೇಳೆ ಗ್ರಾಮ ಪಂಚಾಯತ್ ಸದಸ್ಯರು ಮಾತನಾಡಿದರು. ಗ್ರಾಮದಲ್ಲಿ ಬುದ್ಧ ಪೂರ್ಣಿಮೆಯನ್ನು ವಿ ಜೃ ಂ ಭ ' ಣೆ ' ಯಿ ಂ ದ ಅನ್ನದಾಸೋಹದೊಂದಿಗೆ ಆಚರಣೆ ಮಾಡಲಾಯಿತು. ಈ ಸಮಾರಂಭದಲ್ಲಿ ಮಾಜಿ ಸೈನಿಕರಾದ ಬಕ್ಕಪ್ಪ ಮತ್ತು ಸಿಂಧೋಲ ಗ್ರಾಮ ಪಂಚಾಯತನ ಅಧ್ಯಕ್ಷರಾದ ಸುಭದ್ರಾಬಾಯಿ ರಾಮು ರಾಥೋಡ್, ಗ್ರಾಮ ಪಂಚಾಯತ್ ಸದಸ್ಯರಾದ ಶಂಕರ್ ಮುಸ್ತರಿ, ರಾಜಕುಮಾರ್ ಬಂಕುಲ್, ಜಾವೀದ್ ಮಿಯಾ, ರಾಜಪ್ಪ, ಮತ್ತು ದಲಿತ ಮುಖಂಡರಾದ ಫಾಳೆಪ್ಪ ಭಂಗೂರೆ, ಬಸವರಾಜ್ ಬೆಳ್ಳುರೆ ಶಿಕ್ಷಕರು, ಭಾಸ್ಕರ್ ರೆಡ್ಡಿ, ಸಂಜುಕುಮಾರ್, ಪಂಡಿತ್ ಭಂಗೂರೆ ಹಾಗೂ ಗ್ರಾಮದ ಹಿರಿಯ ಮುಖಂಡರು ಉಪಸ್ಥಿತರಿದ್ದರು.

## ಕಬ್ಬಿನ ಹಣ ರೈತರ ಖಾತೆಗೆ ಪ್ರತಿ ಟನ್‌ಗೆ ರೂ. 2700 ರಂತೆ ಜಮೆ ಮಾಡುವಂತೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 12 : ಜಿಲ್ಲೆಯ ರೈತರಿಗೆ ಹಲವಾರು ಸಮಸ್ಯೆಗಳಿದ್ದು, ಅದರಲ್ಲಿ ಪ್ರಮುಖವಾದಂತಹ ಸಕ್ಕರೆ ಕಾರ್ಖಾನೆಗಳಿಗೆ ರೈತರು ಸರಬರಾಜು ಮಾಡಿರುವ ಕಬ್ಬಿನ ಬಿಲ್ಲು ಪಾವತಿ ಮಾಡದ ಕಾರಣ ದಿನಾಂಕ: 19–04–2025 ರಂದು ಜಿಲ್ಲಾಧಿಕಾರಿಗಳ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ಮಾಡುವುದಾಗಿ ರೈತ ಸಂಘದ ವತಿಯಿಂದ ನಿರ್ಣಯ ಕೈಗೊಳ್ಳಲಾಗಿತ್ತು. ಆದರೆ ತಾವುಗಳು ಬರುವ ಮೇ ತಿಂಗಳಿನ ಮೊದಲನೇ ವಾರದಲ್ಲಿ ಕಾರ್ಖಾನೆಗೆ ಸರಬರಾಜು ಮಾಡಿರುವ ಎಲ್ಲಾ ರೈತರ ಕಬ್ಬಿನ ಬಿಲ್ಲು ಪಾವತಿ ಮಾಡಲಾಗುವುದು ಎಂದು ತಾವು ಆಶ್ವಾಸನೆ ನೀಡಿದ್ದೀರಿ. ಆದಕಾರಣ ತಮ್ಮ ಆಶ್ವಾಸನೆಯಂತೆ ನಾವುಗಳು ಜಿಲ್ಲಾಧಿಕಾರಿಗಳ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ಹಿಂಪಡೆದಿರುತ್ತೇವೆ. ಆದರೆ ತಾವು ತಿಳಿಸಿರುವ ಪ್ರಕಾರ ತಿಂಗಳ ಮೊದಲನೇ ವಾರ ಮುಗಿದು ಎರಡನೇ ವಾರ ಮುಗಿಯುತ್ತಾ ಬಂದಿದೆ. ಆದರೆ ತಾವು ಕೊಟ್ಟ ಆಶ್ವಾಸನೆ ಉಳಿಸಿಕೊಂಡಿಲ್ಲ. ಅದಲ್ಲದೇ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ತಮ್ಮ ನೇತೃತ್ವದ ಸಭೆಯಲ್ಲಿ ಪ್ರತಿ ಟನ್ ಕಬ್ಬಿಗೆ ರೂ. 2700/– ಕೊಡಬೇಕೆಂದು ನಿರ್ಣಯ ತೆಗೆದುಕೊಂಡಿದ್ದೀರಿ. ಆದರೆ ಇಲ್ಲಿಯವರೆಗೆ ಯಾವ ಕಾರ್ಖಾನೆಯವರು ಕೂಡ ಪ್ರತಿ ಟನ್‌ಗೆ ರೂ. 2700/– ಪಾವತಿ ಮಾಡಿರುವುದಿಲ್ಲ.

ಆದಕಾರಣ ತಾವುಗಳು ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿರುವ ಎಲ್ಲಾ ರೈತರ ಖಾತೆಗೆ ಪ್ರತಿ ಟನ್ ಕಬ್ಬಿಗೆ ರೂ. 2700/– ರಂತೆ ಮೇ ತಿಂಗಳು ಮುಗಿಯುವವರೆಗೆ ಜಮೆ ಮಾಡಬೇಕು. ಇಲ್ಲದಿದ್ದಲ್ಲಿ ಮುಂಬರುವ ದಿನಗಳಲ್ಲಿ ತಮ್ಮನ್ನು ಘೇರಾವ್ ಹಾಕಿ, ಪ್ರತಿಭಟನೆ ಮಾಡಲಾಗುವುದು. ಮುಂದಾಗುವ ಯಾವುದೇ ಅಹಿತಕರ ಘಟನೆಗಳಿಗೆ ತಾವೇ ಜವಾಬ್ದಾರರು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ಬೀದರ ಜಿಲ್ಲಾ ಘಟಕದ ವತಿಯಿಂದ ಇಂದು ಜಿಲ್ಲಾಧಿಕಾರಿಗಳ ಮುಖಾಂತರ ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷರಾದ ಸಿದ್ರಾಮಪ್ಪಾ,

ಆಣದೂರೆ, ಜಿಲ್ಲಾ ಕಾರ್ಯಾಧ್ಯಕ್ಷರಾದ ಶ್ರೀಮಂತ ಬಿರಾದಾರ, ಜಿಲ್ಲಾ ಪ್ರ.ಕಾರ್ಯದರ್ಶಿ ದಯಾನಂದ ಸ್ವಾಮಿ ಸಿರ್ಸಿ, ರಾಜಕುಮಾರ ಪಾಟೀಲ,

ಬಾಬುರಾವ ಜೋಳದಾಬಕಾ, ಚಂದ್ರಶೇಖರ ಜಮಖಂಡಿ, ನೀಲಕಂಠ ಬುಯ್ಯಾ, ವಿಶ್ವನಾಥ ಧರಣೆ,. ಶಿವರಾಜ ಡೊಂಗರಗಾಂವ ಹಾಗೂ ಇತರರು ಉಪಸ್ಥಿತರಿದ್ದರು.

## ಕ ಕಾ ಪ ಧ್ವನಿಯ 3ನೇ ರಾಜ್ಯ ಸಮ್ಮೇಳನ ಪತ್ರಕರ್ತರ ಹಬ್ಬದಂದು ಉಪಸ್ಥಿತರಾಗಲು ಪತ್ರಕರ್ತರಲ್ಲಿ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 12 : ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿಯ 3ನೇ ರಾಜ್ಯ ಸಮ್ಮೇಳನ ಪತ್ರಕರ್ತರ ಹಬ್ಬವನ್ನು ದಿನಾಂಕ: 24–05–2025 ರಂದು ಸಾಯಂಕಾಲ 4 ಗಂಟೆಗೆ ರವೀಂದ್ರ ಕಲಾಕ್ಷೇತ್ರ ಬೆಂಗಳೂರನಲ್ಲಿ ಆಯೋಜಿಸಲಾಗುತ್ತಿದೆ. ಈ ಕಾರ್ಯಕ್ರಮದಲ್ಲಿ ಪೂಜ್ಯರು, ಸಚಿವರು, ಚುನಾಯಿತ ಪ್ರತಿನಿಧಿಗಳು ಆಗಮಿಸುತಲಿದ್ದಾರೆ.

ಆದುದರಿಂದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿಯ ರಾಜ್ಯ, ಜಿಲ್ಲಾ ಮಟ್ಟದ ಪದಾಧಿಕಾರಿಗಳು, ಸಾಹಿತಿಗಳು, ಚಿಂತಕರು ಉಪಸ್ಥಿತರಾಗಿ ಕಾರ್ಯಕ್ರಮ ಯಶಸ್ವಿಗೊಳಿಸಲು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆ ರಾಜ್ಯ ಕಾರ್ಯದರ್ಶಿಯಾದ ಜಾನಸನ ಘೋಡೆ ಮನವಿ ಮಾಡಿದ್ದಾರೆ.

## ಕನ್ನಡ ಸಾಹಿತ್ಯ ಪರಿಷತ್ ಕನ್ನಡದ ಅಸ್ಮಿತೆ



ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 12 : ಕನ್ನಡ ಸಾಹಿತ್ಯ ಪರಿಷತ್ ಕನ್ನಡ ನಾಡು ಹಾಗೂ ನುಡಿಯ ಅಸ್ಮಿತೆಯಾಗಿದೆ ಎಂದು ಭಾರತೀಯ ಬಸವ ಬಳಗದ ರಾಜ್ಯ ಅಧ್ಯಕ್ಷ ಬಾಬುವಾಲಿ ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ವತಿಯಿಂದ ನಗರದ ಬಸವ ಕೇಂದ್ರದಲ್ಲಿ ಈಚೆಗೆ ನಡೆದ ಕನ್ನಡ ಸಾಹಿತ್ಯ ಪರಿಷತ್ತಿನ 111ನೇ ಸಂಸ್ಥಾಪನಾ ದಿನ, ಬುದ್ಧ, ಬಸವ ಹಾಗೂ ಅಂಬೇಡ್ಕರ್ ಜಯಂತಿ ಆಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪರಿಷತ್ ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ, ನೆಲ, ಜಲದ ಸಮೃದ್ಧಿಗೆ ಶ್ರಮಿಸುತ್ತಿರುವ ಸಂಸ್ಥೆಯಾಗಿದೆ ಎಂದು ಬಣ್ಣಿಸಿದರು.

ಅಧ್ಯಕ್ಷತೆ ವಹಿಸಿದ್ದ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ಮಾತನಾಡಿ, ಪರಿಷತ್ ಸಂಶೋಧನೆ, ಪ್ರಕಟಣೆ, ಸಮ್ಮೇಳನ, ಸಮಾವೇಶ, ವಿಚಾರ ಸಂಕಿರಣಗಳ ಮೂಲಕ ರಾಜ್ಯದಲ್ಲಿ ನುಡಿ ಸಂವರ್ಧನೆಗೆ ಟೊಂಕ ಕಟ್ಟಿ ನಿಂತಿದೆ. ರಾಜ್ಯದಲ್ಲಿ ಪರಿಷತ್ ಅಜೀವ ಸದಸ್ಯರ ಸಂಖ್ಯೆ 4 ಲಕ್ಷ ದಾಟಿದೆ ಎಂದು ಹೇಳಿದರು. ಪರಿಷತ್ ರಾಜ್ಯ ಅಧ್ಯಕ್ಷ ಡಾ. ಮಹೇಶ ಜೋಶಿ ಅವರು ಪರಿಷತ್ ಅನ್ನು ಜನಸಾಮಾನ್ಯರ ಪರಿಷತ್ ಆಗಿಸಲು ಹಾಗೂ ಸದಸ್ಯರ ಸಂಖ್ಯೆ ಹೆಚ್ಚಿಸಲು ಶ್ರಮಿಸುತ್ತಿದ್ದಾರೆ ಎಂದು ತಿಳಿಸಿದರು. ಈಚೆಗೆ ಮಂಡ್ಯ ಸಮ್ಮೇಳನದಲ್ಲಿ ಆದ ಕೆಲ ಗೊಂದಲ, ಚುನಾಯಿತ ಅಧ್ಯಕ್ಷರ ನಿಧನ, ರಾಜೀನಾಮೆ, ಅನರ್ಹತೆ ಸಂದರ್ಭದಲ್ಲಿ ಆ ಹುದ್ದೆಗಳನ್ನು ತುಂಬಲು ಯಾರಿಗೆ ಅಧಿಕಾರ ನೀಡಬೇಕು ಎಂಬ ವಿಷಯಗಳನ್ನು ನಿಬಂಧನೆಗಳಲ್ಲಿ ಸೇರಿಸುವ ಉದ್ದೇಶದಿಂದ ಬೈಲಾ ತಿದ್ದುಪಡಿಗೆ ಮುಂದಾಗಿದ್ದು, ಕಾರ್ಯಕಾರಿ ಸಮಿತಿ ಸಭೆಯಲ್ಲಿ ಚರ್ಚಿಸಿಯೇ ಅದನ್ನು ವಿಶೇಷ ಸಾಮಾನ್ಯ ಸಭೆಗೆ ಒಯ್ಯಲಾಗುತ್ತಿದೆ. ಕೆಲವರು ಇದನ್ನೇ ಸರ್ವಾಧಿಕಾರಿ ಧೋರಣೆ ಎಂದು ಬಿಂಬಿಸುತ್ತಿರುವುದು ಸರಿಯಲ್ಲ ಎಂದು ತಿಳಿಸಿದರು.

ಕೆಲವರು ಉದ್ದೇಶಪೂರ್ವಕವಾಗಿ ಮಹೇಶ ಜೋಶಿ ಅವರನ್ನು ವಿರೋಧಿಸುತ್ತಿದ್ದಾರೆ. ಜೋಶಿ ಅವರು ಪರಿಷತ್ ಜಿಲ್ಲಾ ಘಟಕಗಳ ಅಭಿಪ್ರಾಯ ಕ್ರೋಢೀಕರಿಸಿಯೇ ನಿರ್ಣಯ ತೆಗೆದುಕೊಳ್ಳಲಿದ್ದಾರೆ ಎಂದು ಹೇಳಿದರು. ಬೆಲ್ದಾಳ ಸಿದ್ಧರಾಮ ಶರಣರು ಸಾನಿಧ್ಯ ವಹಿಸಿದ್ದರು. ಬಸವ ಕೇಂದ್ರದ ಜಿಲ್ಲಾ ಘಟಕದ ಅಧ್ಯಕ್ಷ ಶರಣಪ್ಪ ಮಿಠಾರೆ, ಕಲಬುರಗಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಸಿದ್ದಪ್ಪ ಮೂಲಗೆ, ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷೆ ಭಾರತಿ ವಸ್ತ್ರದ್, ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷ ಜೈರಾಜ ಖಂಡ್ರೆ, ನಿವೃತ್ತ ಪ್ರಾಚಾರ್ಯ ಶಿವಶರಣಪ್ಪ ಹುಗ್ಗಿ ಪಾಟೀಲ, ಮಹಿಳಾ ಬಸವ

ಕೇಂದ್ರದ ಲಿಂಗಾರತಿ ನಾವದಗೇರೆ ಉಪಸ್ಥಿತರಿದ್ದರು. ಬಾಬುರಾವ್ ದಾನಿ ಸ್ವಾಗತಿಸಿದರು. ಧರ್ಮವೀರ ಬಿರಾದಾರ ನಿರೂಪಿಸಿದರು. ಸಿದ್ಧಾರೂಢ ಭಾಲ್ಕೆ ವಂದಿಸಿದರು.

## ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ಶಿಬಿರ




ಮಲ್ಲಮ್ಮ ನುಡಿ ವಾರ್ತೆ ಬೀದರ : ಮೇ.12 : ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ಶಿಬಿರದಲ್ಲಿ ಶಿಬಿರಾರ್ಥಿಗಳಿಗೆ ತೋಟಗಾರಿಕೆ ಬೆಳೆಗಳ ಮಹತ್ವ, ಬೇಸಿಗೆಯಲ್ಲಿ ಆರೋಗ್ಯ ಕಾಪಾಡಿಕೊಳ್ಳುವ ಕ್ರಮದ ಬಗ್ಗೆ ಹಾಗೂ ಎಲ್ಲಾ ಶಿಬಿರಾರ್ಥಿಗಳನ್ನು ತಮ್ಮ ಮಕ್ಕಳಂತೆ ಭಾವಿಷಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಬೀದರ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ.ಎಸ್.ವಿ.ಪಾಟೀಲ ಹೇಳಿದರು.

ಅವರು ರವಿವಾರದಂದು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟ ಅಡಿಯಲ್ಲಿ ಬರುವ ತೋಟಗಾರಿಕೆ ಮಹಾವಿದ್ಯಾಲಯ ಬೀದರನಿಂದ ಚಟ್ನಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಹಮ್ಮಿಕೊಂಡಿದ್ದ ಏಳು ದಿನದ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಡಾ. ವಿಜಯಮಹಾಂತೇಶ, ಸಹಾಯಕ ಪ್ರಾಧ್ಯಾಪಕರು, ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿಗಳು, ತೋಟಗಾರಿಕೆ ಮಹಾವಿದ್ಯಾಲಯ, ಬೀದರ ಇವರು ತಮ್ಮ ಪ್ರಾಸ್ತಾವಿಕ ನುಡಿಯಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಇತಿಹಾಸ, ಮಹತ್ವ, ಮತ್ತು ಲಾಭ ಮತ್ತು ಒಂದು ವಾರದ ಶಿಬಿರದ ವೇಳಾಪಟ್ಟಿ ಹಾಗೂ ಆಯೋಜಿಸಿದ ವಿವಿಧ ಕಾರ್ಯಕ್ರಮಗಳ ಕುರಿತು ಸಂಕ್ಷಿಪ್ತವಾಗಿ ವಿವರಿಸಿದರು.

ಈ ಸಂದರ್ಭದಲ್ಲಿ ಚಟ್ನಳ್ಳಿ ಗ್ರಾಮ ಪಂಚಾಯತ ಅಧ್ಯಕ್ಷ ಮಹಾದೇವಿ ಮಲ್ಲಪ್ಪ, ಚಟ್ನಳ್ಳಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಯರಾದ ವಾಚುಸಿಂಗ್, ಡಾ. ಎಸ್. ಎಂ. ಪ್ರಸನ್ನ, ಸಹಾಯಕ ಪ್ರಾಧ್ಯಾಪಕರು, ಡಾ. ದುಷಂತ ಓಲೇಕಾರ, ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿಗಳು ತೋ. ಮ.ವಿ., ಬೀದರ ಮತ್ತು ಚಟ್ನಳ್ಳಿ ಗ್ರಾಮದ ಮುಖಂಡರಾದ ಶಂಕ್ರಪ್ಪಾ ಬಿರಾದಾರ, ನಾಗೇಶ, ಫಾಳೆಪ್ಪಾ ಚಟ್ನಳ್ಳಿ, ಓಂಕಾರ, ಅಧ್ಯಕ್ಷರು, ಎಸ್.ಡಿ.ಎಮ್.ಸಿ., ಛೋಟುಮಿಯಾ ಹಾಗೂ ಗ್ರಾ. ಪಂ. ಸದಸ್ಯರುಗಳಾದ ವೀರಶೆಟ್ಟಿ ಪಾಟೀಲ, ಶರಣಪ್ಪಾ ಮುದ್ದಾ ಹಾಗೂ ಇತರರು ಉಪಸ್ಥಿತರಿದ್ದರು.

ಸ್ವಯಂಸೇವಕಿ ಭವಾನಿ ಅವರು ಕಾರ್ಯಕ್ರಮ ನಿರೂಪಣೆಯನ್ನು ನಡೆಸಿಕೊಟ್ಟರು, ಅಶ್ವಿನಿ ಇವರು ಎಲ್ಲಾ ಸಭಿಕರನ್ನು ಸ್ವಾಗತಿಸಿದರು. ಅಲೋಕ ಪಾಟೀಲ ಇವರು ವಂದಿಸಿದರು.

## ಸರ್ವರು-ಸಮಾನರು ಎಂಬ ಸಂದೇಶ ನೀಡಿದ ಮಹಾನ ವ್ಯಕ್ತಿ ಬುದ್ಧ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಮೇ.12 : ಬುದ್ಧನು ಶಾಂತಿಯ ಸಂದೇಶದ ಮೂಲಕ ಸಾಮಾಜಿಕ ಧಾರ್ಮಿಕ ವಿಚಾರಗಳ ಮುಖಾಂತರ ಸಮಾಜದಲ್ಲಿ ಸರ್ವರು ಸಮಾನರು ಎಂಬ ಸಂದೇಶವನ್ನು ನೀಡಿದ ಮಹಾನ ವ್ಯಕ್ತಿ ಗೌತಮ ಬುದ್ದ ಎಂದು ದಕ್ಷಿಣ ಮತಕ್ಷೇತ್ರದ ಶಾಸಕರಾದ ಅಲ್ಲಮಪ್ರಭು ಪಾಟೀಲ ಅವರು ಹ ೇ ಳಿ ದ ರು. ಸೋಮವಾರದಂದು ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಕಲಬುರಗಿ ಇವರುಗಳ ಸಂಯುಕ್ತಾಶ್ರಯದಲ್ಲಿ ಕಲಬುರಗಿಯ ಜಗತ್ ವೃತ್ತದ ಡಾ. ಬಿ.ಆರ್. ಅಂಬೇಡ್ಕರ ಪ್ರತಿಮೆ ಎದುರಗಡೆ ಬಿ. ಶ್ಯಾಮಸುಂದರ ರಸ್ತೆಯ ಲುಂಬಿನ ಉದ್ಯಾನ ವನದಲ್ಲಿ 2569 ನೇ ವೈಶಾಖ ಬುದ್ಧ ಪೂರ್ಣಿಮೆ ದಿನದಂದು ಬುದ್ಧ ಪ್ರತಿಮೆಗೆ ಪುಷ್ಪ ಸುಗಂಧ ಅರ್ಪಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಆಸೆಯೇ ದು:ಖಕ್ಕೆ ಮೂಲ ಎಂಬುದರ ಆಶಯದಂತೆ ರಾಜಮನೆತನದ ಎಲ್ಲ ವೈಭೋಗಗಳನ್ನು ತ್ಯಾಗ ಮಾಡಿ ಸಮಾಜದಲ್ಲಿ ಸರ್ವೋನ್ನತ್ತರ ಒಳ್ಳಿತಿಗಾಗಿ ಶ್ರಮಿಸಿ ಮಹಾನ ವ್ಯಕ್ತಿ ಗೌತಮ್ ಬುದ್ಧ ವಿಶ್ವ–ಕ್ಕೆ ಶಾಂತಿಯ ಮೂಲಕ ಸಮಾನತೆಯ ಸಂದೇಶವನ್ನು ನೀಡಿದ ಬುದ್ದ ಜಯಂತಿ ಸರ್ಕಾರವು ಪ್ರಥಮ ಬಾರಿಗೆ ವಿಜೃಂಭಣೆಯಿಂದ ಆಚರಣೆಯನ್ನು ಮಾಡುತ್ತಿದ್ದು ಸಂತೋಷದ ವಿಷಯ ಎಂದರು.

ನಮ್ಮ ಸಂವಿಧಾನ ನೀಡಿದ ಡಾ.ಬಾಬ ಸಾಹೇಬ ಅಂಬೇಡ್ಕರರವರು ಶಾಂತಿಯುತವಾದ ಬೌದ್ಧಧರ್ಮವನ್ನು ತಮ್ಮ ಲಕ್ಷಾಂತರ ಅನುಯಾಯಿಗಳೊಂದಿಗೆ ಸ್ವೀಕಾರ ಮಾಡಿದರು. ಈ ಕಾರಣದಿಂದಾಗಿ ಭೌದ್ದ ಧರ್ಮ ಈಡೀ ವಿಶ್ವದಲ್ಲಿಯೇ ಪ್ರಸಿದ್ದಿ ಪಡೆಯಲು ಸಾಧ್ಯವಾಯಿತು

ಈ ಭಾಗದ ರಾಜಕೀಯ ಮುತ್ಸದ್ದಿ ಎ.ಐ.ಸಿ.ಸಿ. ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ 371 ಜೆ ಕಲಂ ಜಾರಿಗೆ ತಂದು ಕಲ್ಯಾಣ ಕರ್ನಾಟಕ ಭಾಗವನ್ನು ಅವಿರತವಾಗಿ ಶ್ರಮಿಸಿದ್ದಾರೆ. ಅ ದ ೇ ರೀತಿ ಕಲಬುರಗಿಯಲ್ಲಿ ಬುದ್ದ ವಿಹಾರ ಸ್ಥಾಪನೆ ಮಾಡುವುದು ಮುಖಾಂತರ ಪ್ರತಿದಿನ ಸಾವಿರಾರು ಜನ ವೀಕ್ಷಣೆ ಮಾಡುತ್ತಿದ್ದು, ಬೌದ್ಧ ಧರ್ಮದ ಪ್ರಸಾರಕ್ಕೆ ಪ್ರಮುಖ ಕಾರಣವಾಗಿದೆ ಎಂದರು.

ಪ್ರತಿಯೊಬ್ಬರು ಗೌತಮ್ ಬುದ್ಧನ ವಿಚಾರಗಳು ಮತ್ತು ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಂಡು ಇಂತಹ ಮಹಾನ ವ್ಯಕ್ತಿಗಳ ಜೀವನ ಎಲ್ಲರಿಗೂ ಆದರ್ಶವಾಗಬೇಕೆಂದು ಹೇಳಿದರು.

ಬುದ್ದಿಸ್ಟ್ ವರ್ಲ್ಸ್ ಅಲೆಯನ್ಸ್ ಉಪಾಧ್ಯಕ್ಷರಾದ ಡಾ. ಪೂಜ್ಯ ಭಂತೆ ಧಮ್ಮನಾಗ ಮಾಹಥೇರೋ ಬುದ್ದ ಜಯಂತಿ ಉದ್ದೇಶಿಸಿ ಪ್ರವಚನ ನೀಡಿ ಮಾತನಾಡಿ, ಶಾಂತಿ ಮೂಲಕ ಇಡೀ ವಿಶ್ವಕ್ಕೆ ಆದರ್ಶ ಪ್ರಾಯವಾದ ವ್ಯಕ್ತಿ ಗೌತಮ್ಮ ಬುದ್ಧರು ಅದಕ್ಕಾಗಿ ಇಡೀ ವಿಶ್ವ ಗೌತಮ ಬುದ್ಧರ ಜಯಂತಿ ಆಚರಣೆ ಮಾಡುತ್ತಿದೆ. ಬುದ್ಧ, ಅಶೋಕ ಚಕ್ರವರ್ತಿ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ ರವರು ಇಡೀ ವಿಶ್ವಕ್ಕೆ ಬೌದ್ಧ ಧರ್ಮವನ್ನು ಪ್ರಸಾರ ಆಗುವಂತೆ ಮಾಡಿದರು.

## ಧುಮ್ಮನಸೂರ್‌ನಲ್ಲಿ ನಮ್ಮೂರ ಗ್ರಂಥಾಲಯ ಸ್ಥಾಪನೆ



ಬೀದರ. ಮೇ. 12 : ಹುಮನಾಬಾದ ಗ್ರಾಮೀಣ ಭಾಗದ ಜನರಲ್ಲಿ ಅಕ್ಷರ ಪ್ರೀತಿ ಬೆಳೆಸಲು ತಾಲ್ಲೂಕಿನ ಧುಮ್ಮನಸೂರ್ ಗ್ರಾಮ ಪಂಚಾಯಿತಿ ವ್ಯಾಪ್ತಿಯಲೊಂದು ನಮ್ಮೂರ ಸಮುದಾಯ ಗ್ರಂಥಾಲಯ ಸ್ಥಾಪಿಸಲಾಗಿದೆ.

ಗ್ರಾಮ ಪಂಚಾಯಿತಿ ವತಿಯಿಂದ ಸ್ಥಾಪನೆ ಮಾಡಲಾದ ಈ ಗ್ರಂಥಾಲಯದಲ್ಲಿ ಹಲವು ಬಗೆಯ ಪುಸ್ತಕಗಳು ಲಭ್ಯವಿದ್ದು. ಓದುಗರನ್ನು ಕೈಬಿಸಿ ಕರೆ–ಯುತ್ತಿದೆ.

ಧುಮ್ಮನಸೂರ್ ಗ್ರಾಮದ ಮುಖ್ಯದ್ವಾರದಲ್ಲಿನ ರಾಷ್ಟೀಯ ಹೆದ್ದಾರಿ 55 ಪಕ್ಕದಲ್ಲಿ ಗ್ರಾಮ ಪಂಚಾಯಿತಿಯ 15ನೇ ಹಣಕಾಸಿನ 90 ಸಾವಿರ ವೆಚ್ಚದಲ್ಲಿ ಈ ಸುಂದರ ಗ್ರಂಥಾಲಯ ನಿರ್ಮಾಣ ಮಾಡಲಾಗಿದೆ.

'ನಮ್ಮೂರ ಗ್ರಂಥಾಲಯ ಕೇಂದ್ರದಲ್ಲಿ ಬುದ್ಧ, ಬಸವ ಅಂಬೇಡ್ಕರ್ ಬಗೆಗಿನ ಪುಸ್ತಕಗಳು ಕತೆ, ಕಾದಂಬರಿ, ಸ್ಪರ್ಧಾತ್ಮಕ ಪರೀಕ್ಷೆಗೆ ಸಂಬಂಧಿಸಿದ ಪುಸ್ತಕಗಳು ಸೇರಿದಂತೆ 200ಕ್ಕು ಹೆಚ್ಚು ಪುಸ್ತಕಗಳನ್ನು ಇಡಲಾಗಿದೆ. ಗ್ರಾಮಸ್ಥರು ಪುಸ್ತಕಗಳನ್ನು ದೇಣಿಗೆ ರೂಪದಲ್ಲಿ ಕೊಡಬಹುದು. ವಿದ್ಯಾರ್ಥಿಗಳು, ಪ್ರಯಾಣಿಕರು ಬಿಡುವಿನ ವೇಳೆ ಗ್ರಂಥಾಲಯದಲ್ಲಿ ಇರುವ ಪುಸ್ತಕಗಳನ್ನು ಓದಿ, ಇಡಬಹುದು. ಸಾರ್ವಜನಿಕರೂ ಇದರ ಪ್ರಯೋಜನ ಪಡೆಯಬಹುದು' ಎಂದು ಪಿಡಿಒ ಮಲ್ಲಿಕಾರ್ಜುನ ತಿಳಿಸಿದರು.

ಗ್ರಂಥಾಲಯದಲ್ಲಿ ಬಗೆ ಬಗೆಯ ಬಣ್ಣದ ಬ್ಯಾನರ್ ಅಳವಡಿಸಲಾಗಿದ್ದು, ಅವುಗಳ ಮೇಲೆ ಮಹನೀಯರ ಸಂದೇಶ ಬರೆಯಲಾಗಿದೆ. ಪುಸ್ತಕ ಇಡಲು ಕಪಾಟುಗಳನ್ನು ಸಹ ಅಳವಡಿಸಲಾಗಿದೆ.

ಜಿಲ್ಲಾ ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ್ ಬದೋಲೆ ಅವರು ಧುಮ್ಮನಸೂರ್ ಗ್ರಾಮದಲ್ಲಿನ ನೂತನ ನಮ್ಮೂರ ಗ್ರಂಥಾಲಯವನ್ನು ಗುರುವಾರ ಉದ್ಘಾಟಿಸಿ ಮಾತನಾಡಿ, 'ಜಿಲ್ಲೆಯಲ್ಲಿ ಮೊದಲ ಬಾರಿಗೆ ಧುಮ್ಮನಸೂರ್ ಗ್ರಾಮ ಪಂಚಾಯಿತಿ ಅವರು ಈ ನಮ್ಮೂರ ಗ್ರಂಥಾಲಯ ಸ್ಥಾಪನೆ ಮಾಡಿರುವುದು ಶ್ಲಾಘನೀಯವಾಗಿದೆ. ಬಿಡುವಿನ ವೇಳೆಯಲ್ಲಿ ಗ್ರಾಮಸ್ಥರು ಈ ಸುಂದರ ಕೆರೆಯ ಸುತ್ತಲೂ ವಾಯು ವಿಹಾರಕ್ಕೆ ಬಂದ ಸಂದರ್ಭದಲ್ಲಿ ಈ ಗ್ರಂಥಾಲಯಕ್ಕೆ ಭೇಟಿ ನೀಡಿ ದಿನ ಪತ್ರಿಕೆಗಳು ಸೇರಿದಂತೆ ಮಹಾತ್ಮರ ಆದರ್ಶ ಪುಸ್ತಕಗಳು ಲಭ್ಯವಿದ್ದು ಇದರ ಸದುಪಯೋಗಪಡೆದುಕೊಳ್ಳಬೇಕು. ಅಲ್ಲದೆ ಇದರ ನಿವಾರಣೆಗಾಗಿ ಗ್ರಾಮದ ಎಲ್ಲ ಜನರು ಸ್ವಯಂ ಪ್ರೇರಿತರಾಗಿ ಗ್ರಂಥಾಲಯ ಸಂರಕ್ಷಣೆ ಮಾಡಬೇಕು' ಎಂದರು.

ಹುಮನಾಬಾದ್ ತಾಲ್ಲೂಕಿನ ಧುಮ್ಮನಸೂರ್ ಗ್ರಾಮದಲ್ಲಿನ ನಮ್ಮೂರ ಗ್ರಂಥಾಲಯವನ್ನು ಜಿಲ್ಲಾ ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ ಉದ್ಘಾಟಿಸಿದರು.–

ಡಾ.ಗಿರೀಶ್ ಬದೋಲೆ, ಜಿ.ಪಂ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲೆಯಲ್ಲೇ ಮೊದಲನೇ ನಮ್ಮೂರು ಗ್ರಂಥಾಲಯ ಇದ್ದಾಗಿದೆ. ಈ ಗ್ರಂಥಾಲಯ ರಾಷ್ಟೀಯ ಹೆದ್ದಾರಿ ಪಕ್ಕದಲ್ಲಿ ಇರುವುದರಿಂದಾಗಿ ಪ್ರಯಾಣಿಕರಿಗೆ ಮತ್ತು ಗ್ರಾಮಸ್ಥರಿಗೆ ಇದರ ಅನುಕೂಲ ಆಗಲಿದೆ.–ದೀಪಿಕಾ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಗ್ರಾಮೀಣ ಪ್ರದೇಶದ ಜನರಲ್ಲಿ ಪುಸ್ತಕ ಓದುವ ಅಭಿರುಚಿ ಬೆಳೆಸುವುದು ಈ ಗ್ರಂಥಾಲಯ ಸ್ಥಾಪನೆಯ ಉದ್ದೇಶವಾಗಿದೆ. ಧುಮ್ಮನಸೂರ್ ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಪಿಡಿಒ ಅವರ ಸಹಕಾರದಿಂದ ಸುಂದರ ಗ್ರಂಥಾಲಯ ಸ್ಥಾಪನೆ ಮಾಡಲಾಗಿದೆ.–ವೀರಪ್ಪ ಧುಮ್ಮನಸೂರ್, ಗ್ರಾ.ಪಂ ಅಧ್ಯಕ್ಷ ಸ್ಪರ್ಧಾತ್ಮಕ ಪರೀಕ್ಷೆ ದಿನ ಪತ್ರಿಕೆಗಳು ಕಾದಂಬರಿ ಶರಣರ ವಚನಗಳ ಸೇರಿದಂತೆ ಎಲ್ಲ ರೀತಿಯ ಪುಸ್ತಕಗಳು ಗ್ರಂಥಾಲಯದಲ್ಲಿ ಲಭ್ಯವಿವೆ. ಗ್ರಾಮದ ವಿದ್ಯಾರ್ಥಿಗಳು ಹಿರಿಯರು ಇದರ ಸದುಪಯೋಗ ಪಡೆದುಕೊಳ್ಳಬೇಕು.

# ಪತ್ರಕರ್ತರಗಾಗಿ ಶ್ರಮಿಸುತ್ತಿರುವ ಮಲ್ಲಿಕಾರ್ಜುನ ಬಂಗ್ಲೆ-ಮಹೇಶ ಕಲ್ಮಠ




ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ಪತ್ರಕರ್ತರಿಗೆ ಭದ್ರತೆ ಹಾಗೂ ವಿವಿಧ ಸೌಲಭ್ಯಗಳನ್ನು ಕಲ್ಪಿಸಲು ಹಗಲಿರುಳು ಶ್ರಮಿಸುತ್ತಿರುವ ಕರ್ನಾಟಕದ ಏಕೈಕ ವ್ಯಕ್ತಿ ಮಲ್ಲಿಕಾರ್ಜುನ ಬಂಗ್ಲೆ ಎಂದು ಕೊಪ್ಪಳ ಜಿಲ್ಲೆಯ ಕುಕನೂರು ತಾಲೂಕಕಾರ್ಯನಿರತಪತ್ರಕರ್ತರ ಧ್ವನಿ ಸಂಘಟನೆ ತಾಲೂಕಘಟಕದ ಗೌರವ ಅಧ್ಯಕ್ಷ ಮಹೇಶ ಕಲ್ಮಠ ಹೇಳಿದರು.

ಜಿಲ್ಲೆಯ ಕುಕನೂರು ಪಟ್ಟಣದಕಾರ್ಯನಿರತಪತ್ರಕರ್ತರ ಧ್ವನಿ ಕುಕನೂರು ತಾಲೂಕ ಘಟಕದ ಕಾರ್ಯಾಲಯದಲ್ಲಿ ಸದಸ್ಯರಿಗೆ 2025-26ನೇ ಸಾಲಿನ ಸದಸ್ಯತ ನೊಂದಣಿ ಗುರುತಿನ ಚೀಟಿ ವಿತರಿಸಿ ಮಹೇಶ್ ಕಲ್ಮಠ ಮಾತನಾಡುತ್ತಾ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಬಂಗ್ಲೆ ಅವರ ನೇತೃತ್ವದಲ್ಲಿ ಇದೆ ಮೇ.24ರಂದು ಪತ್ರಕರ್ತರ ಚಾರಿ ಟೇಬಲ್ ಟ್ರಸ್ಟ್ ನೋಂದಣಿಯಾಗಿದ್ದು ಪತ್ರಕರ್ತರಿಂದ ಪತ್ರಕರ್ತರಿಗಾಗಿ ನೋಂದಣಿಯಾಗಿರುವ ಟ್ರಸ್ಟ್ ಇದಾಗಿದ್ದು ಈ ಟ್ರಸ್ಟ್ ನಲ್ಲಿ ಜಮಾವಣೆಗೊಳ್ಳುವ ಮೊತ್ತವನ್ನು ಪತ್ರಕರ್ತರ ತುರ್ತು ಆರೋಗ್ಯ ಪರಿಸ್ಥಿತಿಯ ಔಷಧೋಪಚಾರ ಸೇರಿದಂತೆ ತುರ್ತು ಪರಿಸ್ಥಿತಿಯ ಅವಶ್ಯಕತೆಗಳಿಗೆ ಸಹಾಯ ಮಾಡುವ ನಿಟ್ಟಿನಲ್ಲಿ ಮತ್ತು ಅಕಾಲಿಕ ಮೃತ ಹೊಂದಿದ ಪತ್ರಕರ್ತರ ಕುಟುಂಬಕ್ಕೆ

# ಮಕ್ಕಳು ಬಿಸಿಲಲ್ಲಿ ಓಡಾಡದೆ ಬಿಸಿಲಿನ ತಾಪಮಾನ ಹೆಚ್ಚಿರುವುದರಿಂದ ಮಕ್ಕಳು ಇಂತಹ ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 10: ಜಿಲ್ಲೆಯಲ್ಲಿ 5 ರಿಂದ 16ರ ವರ್ಷದ ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ ಉಚಿತ ಬೇಸಿಗೆ ಶಿಬಿರವನ್ನು ಮಕ್ಕಳಿಗೆ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಾದ ಚಿತ್ರಕಲೆ, ಕರಕುಶಲ, ನಾಟಕ, ನೃತ್ಯ, ಯೋಗ, ಕರಾಟೆ, ಪ್ರಕೃತಿ ಪರಿಸರ, ಓದುವ ಕೌಶಲ್ಯ ಕುರಿತು 15 ದಿನದ ಶಿಬಿರವನ್ನು ಹಮ್ಮಿಕೊಳ್ಳಲಾಯಿತು ಎಂದು ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವದ್ದಿ ಇಲಾಖೆ ಉಪ ನಿರ್ದೇಶಕರಾದ ವೀರನಗೌಡ ಪಾಟೀಲ್ ಅವರು ಹೇಳಿದರು.

ಯಾದಗಿರಿ ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಇತ್ತೀಚಿನ ನಡೆದ ಬೆಂಗಳೂರು ರಾಜ್ಯ ಬಾಲ ಭವನ ಸೊಸೈಟಿ, ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯಾದಗಿರಿ ಜಿಲ್ಲಾ ಬಾಲ ಭವನ ಸೊಸೈಟಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉಚಿತ ಬೇಸಿಗೆ ಶಿಬಿರ ಕಾರ್ಯಕ್ರಮವನ್ನು ಉದ್ಘಾಟಿಸಿ



ಅವರು ಮಾತನಾಡಿದರು.

ಯಾದಗಿರಿ ಜಿಲ್ಲೆಯಲ್ಲಿ ಬೇಸಿಗೆ ಕಾಲದ ಕುರಿತು ಮಕ್ಕಳು ಬಿಸಿಲಲ್ಲಿ ಓಡಾಡದೆ ಬಿಸಿಲಿನ ತಾಪಮಾನ ಹೆಚ್ಚಿರುವುದರಿಂದ ಮಕ್ಕಳು ಇಂತಹ ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸಿ ಈ ಒಂದು ಉಚಿತ ಬೇಸಿಗೆ ಶಿಬಿರ 15 ದಿನದ ತರಬೇತಿಯಲ್ಲಿ ತರಬೇತಿದಾರರು ಹೇಳಿಕೊಡುವ ಚಟುವಟಿಕೆಗಳನ್ನು ಕಲಿಯಬೇಕೆಂದು ಮಕ್ಕಳಿಗೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ಯಾದಗಿರ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು ದಿನೇಶ್ ಕುಮಾರ ಅವರು ಮಾತನಾಡಿ ಪ್ರತಿಯೊಂದು ಮಕ್ಕಳಲ್ಲಿ ಕೌಶಲ್ಯ ಬೆಳವಣಿಗೆ ಇರುತ್ತದೆ. ಆದರೆ ಮಕ್ಕಳಿಗೆ ಸರಿಯಾದ ವೇದಿಕೆ ಕಲ್ಪಿಸಿರುವುದಿಲ್ಲಾ. ಆದ್ದರಿಂದ ಇಂತಹ ಶಿಬಿರದಲ್ಲಿ ಪಾಲ್ಗೊಂಡು ಶಿಬಿರದ ಚಡುವಡಿಕೆಗಳನ್ನು ಪರಿಪೂರ್ಣ ಕಲಿತುಕೊಂಡು ವಿದ್ಯಾಭ್ಯಾಸದ ಜೊತೆಗೆ ಪಠ್ಯೇತರ ಚಟುವಟಿಕೆಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಮಕ್ಕಳಿಗೆ ತಿಳಿಸಿದರು. ಯಾದಗಿರಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರು ರುದ್ರಸ್ವಾಮಿ ಚಿಕ್ಕಮಠ ಮಾತನಾಡಿ, ಬೇಸಿಗೆ ಶಿಬಿರದಲ್ಲಿ ಈ ಹಿಂದೆ ನಾನು ಕೂಡ ಬಾಲ ಭವನದ ವತಿಯಿಂದ ಏರ್ಪಡಿಸಿರುವ ವಿವಿಧ ಕಾರ್ಯಕ್ರಮಗಳಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದೇನೆ. ಆದರೆ ಇವಾಗ ನಾನು ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯನಾಗಿ ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಬಂದಿರುವುದು ನನಗೆ ತುಂಬ ಖುಷಿಯಾಗಿದೆ.

ಪ್ರತಿ ವರ್ಷವು ಬಾಲ ಭವನವು ಪ್ರತಿಯೊಂದು ಮಕ್ಕಳಲ್ಲಿರುವ ಪ್ರತಿಯೊಂದು ಪ್ರತಿಭೆಯನ್ನು ಹೊರತರುವ ಕೆಲಸ ಮಾಡುತ್ತಿದೆ ಎಂದು ಖುಷಿ ಪಟ್ಟರು.

ಜಿಲ್ಲಾ ಕಾರ್ಯಕ್ರಮ ಸಂಯೋಜಕರು ಅನೀಲ್ ಕುಮಾರ ಮಾತನಾಡಿ, ಬೇಸಿಗೆ ಶಿಬಿರವನ್ನು 2025ರ ಮೇ 22ರ ವರೆಗೆ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿದ್ದು, ಈ ಒಂದು ಶಿಬಿರದಲ್ಲಿ ಸುಮಾರು 80 ಮಕ್ಕಳು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರು ಕುಮಾರಿ ಮಂಜುಳಾ, ಯಾದಗಿರಿ ಸರಕಾರಿ ಬಾಲಕಿಯರ ಬಾಲ ಮಂದಿರ ಅಧೀಕ್ಷಕರು ಶ್ರೀಮತಿ ನಾಗಮ್ಮ ಹಿರೇಮಠ, ಮಕ್ಕಳ ಜಾಗೃತಿ ಸಂಪನ್ಮೂಲ ವ್ಯಕ್ತಿ ದೇವಪ್ಪ, ನೃತ್ಯ ಶಿಕ್ಷಕರು ಮಧುಕುಮಾರ ಶಿಕ್ಷಕರು ವಿಶ್ವನಾಥ ಜಿಲ್ಲಾ ಕಾರ್ಯಕ್ರಮ ಸಹಾಯಕರು ಪ್ರಶಾಂತಕುಮಾರ ಉಪಸ್ಥಿತರಿದ್ದರು.

# ಶಿಕ್ಷಣದಿಂದ ಮಾತ್ರ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ; ಡಾ. ಕರಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಪ್ರಸಕ್ತ ದಿನಗಳಲ್ಲಿ ನಾವೂ ಎಲ್ಲಾ ಕ್ಷೇತ್ರಗಳಲ್ಲಿ ತೀವ್ರ ಸ್ಪರ್ಧೆಗಳನ್ನು ಕಾಣುತ್ತಿದ್ದೇವೆ, ಕಾರಣ ಪೋಷಕರು ತಮ್ಮ ಹೆಣ್ಣು ಮಕ್ಕಳಿಗೆ ತಪ್ಪದೇ ಶಿಕ್ಷಣ ಒದಗಿಸಲು ಪ್ರಯತ್ನಿಸಿ, ಅದರಿಂದ ಮಾತ್ರ ನಾವೂ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ಅಖಿಲ ಕರ್ನಾಟಕ ಹೇಮರಡ್ಡಿ ಮಲ್ಲಮ್ಮ ಮಹಿಳಾ ಅಭಿವೃದ್ಧಿ ಸಂಸ್ಥೆ ಕಲಬುರಗಿ ಅಧ್ಯಕ್ಷರಾದ ಡಾ. ವಿಶಾಲಾಕ್ಷಿ ಕರಡ್ಡಿ ಹೇಳಿದರು.

ಕಲಬುರಗಿಯ ಜೆಮಶೆಟ್ಟಿ ಕಾಲೋನಿಯಲ್ಲಿ ಜಿಲ್ಲಾ ರಡ್ಡಿ ಸಮಾಜದ ವತಿಯಿಂದ ಪದವಿ ಅಭ್ಯಾಸಮಾಡುವವಿಧ್ಯಾರ್ಥಿನಿಯರಿಗೆ ಅನುಕೂಲವಾಗುವ ದೃಷ್ಟಿಯಿಂದ ಅಂದಾಜು 3 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಿರುವ ಹೇಮರಡ್ಡಿ ಮಲ್ಲಮ್ಮ ಮಹಿಳಾ ವಸತಿ ನಿಲಯ ವಾಸ್ತು ಪೂಜೆ ಹಾಗೂ ಮಲ್ಲಮ್ಮಳ ಜಯಂತಿ ಸಮಾರಂಭದಲ್ಲಿ ಮಾತನಾಡಿದರು.

ಇಂದು ವಿಶ್ವದಲ್ಲಿ ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಪುರಷರಿಗಿಂತ ಮೇಲಾಗಿ ತಮ್ಮ ಜ್ಞಾನ, ಕೌಶಲ್ಯ ಪ್ರದರ್ಶಿಸುವ ಮೂಲಕ ಎಲ್ಲಾ ಗಮನ ಸೆಳೆಯುತ್ತಿದ್ದಾರೆ, ಜಿಲ್ಲೆಯಲ್ಲಿ ವಸತಿ ನಿಲಯ ಆರಂಭದಿಂದ ಗ್ರಾಮೀಣ ಭಾಗದ ವಿಧ್ಯಾರ್ಥಿನಿಯರಿಗೆ ಎಸ್‌ಎಸ್‌ಎಲ್‌ಸಿ ಅಭ್ಯಾಸದ ನಂತರ ಕಲಬುರಗಿ ನಗರದಲ್ಲಿ ಪಿಯುಸಿ, ಪದವಿ ಅಭ್ಯಾಸ ಮಾಡಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಭಾರತಿ ಶರಣಬಸಪ್ಪಗೌಡ ದರ್ಶನಾಪೂರ ಮಾತನಾಡಿ, ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಸ್ತ್ರೀ ಕುಲದ ಅನರ್ಘ್ಯ ರತ್ನವಾಗಿದ್ದಾಳೆ, ಲೌಕಿಕ ಜೀವನದಲ್ಲಿ ಸಾರ್ಥಕ ಬದುಕು ಸಾಗಿಸಿ, ಮೋಕ್ಷದ ಮಾರ್ಗ ತೋರಿ, ಇನ್ನೂ ಎಲ್ಲರ ಮನಸ್ಸಿನಲ್ಲಿ ಶಾಸ್ವತವಾಗಿ ಉಳಿದುಕೊಂಡು, ಪೂಜಿಸಿಕೊಳ್ಳುತ್ತಿದ್ದಾರೆ, ಅವಳು ಸಮಾಜಕ್ಕೆ ಮಾನವೀಯ ಮೌಲ್ಯ ಸಂದೇಶಗಳನ್ನು ನೀಡಿದ್ದಾಳೆ, ಎಲ್ಲರೂ ಬದುಕಿನಲ್ಲಿ ಅಳವಡಿಸಿಕೊಂಡು ಬದಲಾವಣೆ ಸಾಧಿಸಬೇಕೆಂದು ಸಲಹೆ ನೀಡಿದರು.

ಸಮಾರಂಭದಲ್ಲಿ ರಾಜ್ಯ ಸಣ್ಣ ಕೈಗಾರಿಕೆ ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪಗೌಡ ದರ್ಶನಾಪೂರ, ಯಾದಗಿರಿ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ, ಕಲಬುರಗಿ ಜಿಲ್ಲಾ ರಡ್ಡಿ ಸಮಾಜದ ಜಿಲ್ಲಾಧ್ಯಕ್ಷ ಡಾ.ಎಸ್.ಬಿ ಕಾಮರಡ್ಡಿ, ಲಿಂಗಾರಡ್ಡಿ ಬಾಸರಡ್ಡಿ, ಡಾ. ವೀರಭದ್ರಪ್ಪ ಪಾಟೀಲ್, ಡಾ. ವಿಶ್ವನಾಥರಡ್ಡಿ ಪಾಟೀಲ್, ಡಾ. ವಿಕ್ರಮ್ ಸಿದ್ದಾರಡ್ಡಿ, ಶಾಂತರಡ್ಡಿ ವನಕೇರಿ, ಗೀತಾ ಚನ್ನಾರಡ್ಡಿ ಪಾಟೀಲ್, ಡಾ. ಶೈಲಜಾ ಬಾಗೇವಾಡಿ, ಡಾ. ಪ್ರತಿಮಾ ಎಸ್. ಕಾಮರಡ್ಡಿ, ಶರಣಮ್ಮ ಪಾಟೀಲ್, ಭಾಗಣಗೌಡ ಸಂಕನೂರ, ವೀರಣಗೌಡ ಪರಸರಡ್ಡಿ, ರಮೇಶ ರಬ್ಬನಳ್ಳಿ, ಶಿವಲಿಂಗರಡ್ಡಿ ಬೆನಕನಳ್ಳಿ, ಡಾ. ರಾಜಶ್ರೀ ವಿಶ್ವನಾಥರಡ್ಡಿ ಪಾಟೀಲ್, ಚನ್ನಾರಡ್ಡಿ ಪಾಟೀಲ್ ಕುರಕುಂದಿ, ವೀರಾರಡ್ಡಿ ಪಾಟೀಲ್ ಬಟಗೇರಾ, ಶೈಲಜಾ ಪಾಟೀಲ್, ಶಂಕರಗೌಡ ಪಾಟೀಲ್ ನೀಡಗಿ, ಬಂಡೇಶರಡ್ಡಿ ಮರಕಲ್, ಅಂಬಿಕಾ ಪಾಟೀಲ್, ಸೀಮಾ ಶಶಿ ಶೇಖರರಡ್ಡಿ, ಸರೋಜಾ ಜಾಕರಡ್ಡಿ, ಪ್ರಭಾವತಿ ದಾಮೋದರರಡ್ಡಿ, ಬಿ.ಎಸ್ ದೇಸಾಯಿ, ವಿಶ್ವನಾಥರಡ್ಡಿ ಇಟಗಿ ಸೇರಿದಂತೆ ಸಮಾಜದ ಬಂದುಗಳು ಉಪಸ್ಥಿತರಿದ್ದರು.

# ಮಲ್ಲಮ್ಮ ಸಮಾಜಕ್ಕೆ ಮಾನವೀಯ ಮೌಲ್ಯಗಳನ್ನು ನೀಡಿದ್ದಾಳೆ : ನಂದಿಪುರ ಮಠ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಈ ಭರತ ಭೂಮಿ ಆಧ್ಯಾತ್ಮಿಕ ನಾಡು, ಇಲ್ಲಿ ಅನಾದಿ ಕಾಲದಿಂದ ಶರಣರು, ಶರಣೆಯರು ತಮ್ಮ ಜ್ಞಾನ-ಆಧ್ಯಾತ್ಮಿಕ ಶಕ್ತಿಯಿಂದ ನಾಡಿನ ಐಕ್ಯತೆಗೆ, ಸಾಮರಸ್ಯ ಸಮಾಜ ನಿರ್ಮಾಣಕ್ಕೆ ಶ್ರಮಿಸಿ, ಮೂಡ ನಂಬಿಕೆಗಳನ್ನು ದೂರ ಮಾಡಿ, ಜನರಲ್ಲಿ ಆತ್ಮ ಜಾಗೃತಿ ಮೂಡಿಸಿದ್ದಾರೆ, ಅವರ ಸಾಲಿನಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರು ಒಬ್ಬರಾಗಿದ್ದಾರೆ, ಲೌಕಿಕ ಲೋಕದಲ್ಲಿನ ಬದುಕಿನ ಜೊತೆಗೆ ಎಲ್ಲರಿಗೂ ಮೋಕ್ಷದ ಮಾರ್ಗ ತೋರಿ, ಮಾನವೀಯ ಮೌಲ್ಯಗಳನ್ನು ನೀಡಿದ್ದಾಳೆ ಎಂದು ಶ್ರೀಶೈಲಂ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದ ಮುಖ್ಯ ಅರ್ಚಕರಾದ ಓಂಕಾರಯ್ಯಸ್ವಾಮಿ ನಂದಿಪುರ ಮಠ ನುಡಿದರು.

ಶನಿವಾರ ಇಲ್ಲಿಗೆ ಸಮೀಪದ ಶ್ರೀಶೈಲಂನ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ ಮಲ್ಲಮ್ಮರ 603ನೇ ಜಯಂತಿ ಸರಳವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ಮಲ್ಲಮ್ಮ ಶ್ರೀಶೈಲಂನ ಅವಿಭಾಜ್ಯ



ಅಂಗವಾಗಿದ್ದಾಳೆ, ತನ್ನ ಆಧ್ಯಾತ್ಮಿಕ ಶಕ್ತಿಯಿಂದ ಭೂ ಕೈಲಾಸದ ಒಡೆಯನಾದ ಪರಶಿವ ಮಲ್ಲಿಕಾರ್ಜುನನ ಕೃಪೆಗೆ ಪಾತ್ರರಾಗಿ ನಾಡಿನ ಒಳಿತಿಗಾಗಿ ವರ ಪಡೆದು ಲೋಕ ಉದ್ದಾರ ಮಾಡಿ, ಎಲ್ಲರ ಮನಸ್ಸಿನಲ್ಲಿ ಶಾಸ್ವತವಾಗಿ ಉಳಿದುಕೊಂಡು ಪೂಜಿಸಿಕೊಳ್ಳುತ್ತಿದ್ದಾಳೆ ಎಂದು ಹೇಳಿದರು.

ಇಂದು ಜಯಂತಿ ನಿಮಿತ್ಯ ದೇವಸ್ಥಾನಕ್ಕೆ ದೇಶದ ನಾನಾ ಭಾಗಗಳಿಂದ ಮಲ್ಲಮ್ಮಳ ಭಕ್ತರು ಆಗಮಿಸಿದ್ದಾರೆ, ಇದು ಅವರ ಮೇಲೆ ಇಟ್ಟಿರುವ ಭಕ್ತಿ-ಭಾವ ವ್ಯಕ್ತವಾಗುತ್ತದೆ, ಮಲ್ಲಮ್ಮ ಕರ್ಮಭೂಮಿ ಶ್ರೀಶೈಲಂ ಕ್ಷೇತ್ರದ ಅಭಿವೃದ್ಧಿಗೆ ಕನ್ನಡಿಗರು ನೀಡಿರುವ ಕೊಡುಗೆ ಅಪಾರ, ಎಲ್ಲರೂ ಮಲ್ಲಮ್ಮಳ ಸಂದೇಶಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡು ಸಾರ್ಥಕ ಧರ್ಮದ ಹಾದಿಯಲ್ಲಿ ಬದುಕು ಸಾಗಿಸಿ, ಅಂದಾಗ ಮಾತ್ರ ನೀವೆಲ್ಲರೂ ಶಾಂತಿ, ನೆಮ್ಮದಿ, ಸಮೃದ್ಧಿಯಿಂದ ಚೈತನ್ಯ ಜೀವನ ಅನುಭವಿಸಿ ಎಂದು ತಿಳಿಸಿ, ಅವರು ಬದುಕು, ಸಾಧನೆ ವಿವರಿಸಿದರು.

ಬೆಳಿಗ್ಗೆ ದೇವಸ್ಥಾನದಲ್ಲಿ ಮಲ್ಲಮ್ಮಳ ಮೂರ್ತಿಗೆ ಹಾಗೂ ಆನಂದಭಾಷ್ಪ ಉಗಮ ಸ್ಥಾನಕ್ಕೆ ವಿಶೇಷ ಪೂಜೆ ಕೈಂಕರ್ಯಗಳು ಜರುಗಿದವು.

ಮದ್ಯಾಹ್ನ 1 ಗಂಟೆಗೆ ಅಲ್ಲಿ ನೆರೆದಿದ್ದ ಸಹಸ್ರಾರು ಭಕ್ತರಿಗೆ ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು, ಈ ಸಂದರ್ಭದಲ್ಲಿ ಮಾತೆ ಅನ್ನಪೂರ್ಣ, ಹಿರಿಯ ಅರ್ಚಕರಾದ ಗುರುಪಾದಯ್ಯಸ್ವಾಮಿ ಹಾಗೂ ಪ್ರಮುಖರು ಉಪಸ್ಥಿತರಿದ್ದರು.

# ಸೈನ್ಯ ಅಧಿಕಾರಿಗಳ ಕರೆ ಮೇರೆಗೆ ಕರ್ತವ್ಯಕ್ಕೆ ತೆರಳಿದ ಸೈನಿಕನಿಗೆ ಬಿಳ್ಕೋಡಿಗೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಕೆಲ ದಿನಗಳ ಹಿಂದೆ ಮೃತಪಟ್ಟ ಸಹೋದರನ ಅಂತ್ಯಕ್ರೀಯೆಯಲ್ಲಿ ಭಾಗವಹಿಸಲು ಸ್ವಗ್ರಾಮಕ್ಕೆ ಆಗಮಿಸಿದ್ದ, ದೇಶದ ಭೂಸೇನಾದಲ್ಲಿ ಸೈನಿಕನಾಗಿ ಸೇವೆ ಸಲ್ಲಿಸುತ್ತಿರುವ ಬಸವರಾಜ ಅಲ್ಲೂರ್(ಕೆ) ಅವರಿಗೆ ದೇಶದಲ್ಲಿ ಈಗಾಗಲೇ ಭಾರತ-ಪಾಕಿಸ್ತಾನ ಮಧ್ಯೆ ಯುದ್ದದ ಕಾರ್ಮೋಡ ಸೃಷ್ಟಿಯಾಗಿದ್ದು, ಮೇಲಾಧಿಕಾರಿಗಳ ತುರ್ತು ಕರೆ ಬಂದ ಹಿನ್ನಲೆಯಲ್ಲಿ ಕರ್ತವ್ಯಕ್ಕೆ ಹಾಜರಾಗಲು ರವಿವಾರ ಜಮ್ಮು ಮತ್ತು ಕಾಶ್ಮೀರ ರಾಜ್ಯಕ್ಕೆ ತೆರಳುತ್ತಿರುವ ಅವರನ್ನು ತಾಲೂಕಿನ ಹತ್ತಿಕುಣಿ ಗ್ರಾಮದಲ್ಲಿ ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಮಲ್ಲಣ್ಣಗೌಡ ಮಾಲಿ ಪಾಟೀಲ್ ಹಾಗೂ ಗ್ರಾಮಸ್ಥರು ಅವರ ನಿವಾಸದಲ್ಲಿ ಸನ್ಮಾನಿಸಿ ಆತ್ಮೀಯವಾಗಿ ಬಿಳ್ಕೊಟ್ಟರು.

ಕಲಬುರಗಿ ಜಿಲ್ಲೆಯ ಚಿತ್ತಾಪೂರ ತಾಲೂಕಿನ ಅಲ್ಲೂರ (ಕೆ), ಗ್ರಾಮದ ಯುವ ಸೈನಿಕರಾಗಿರುವ ಬಸವರಾಜ ಕೊರಳ್ಳಿ ಅವರು ಜಮ್ಮು ಮತ್ತು ಕಾಶ್ಮೀರದ ಉದಂಪೂರ ಜಿಲ್ಲೆಯಲ್ಲಿ ಸೈನಿಕರಾಗಿ ಕೆಲಸ ಮಾಡುತ್ತಿದ್ದಾರೆ. ಅವರ ತಾಯಿ ಹತ್ತಿಕುಣಿ ಗ್ರಾಮದವರಾಗಿದ್ದು, ಕರ್ತವ್ಯಕ್ಕೆ ತೆರಳುವ ಮೋದಲು ಬಂದು ಬಳಗದವರನ್ನು ಭೇಟಿಯಾಗಲು ಹತ್ತಿಕುಣಿಗೆ ಆಗಮಿಸಿದ ಸಂದರ್ಭದಲ್ಲಿ ಗ್ರಾಮದ ಪ್ರಮುಖರು ಅವರಿಗೆ ಶುಭಕೋರಿದರು.

ಸೈನಿಕನನ್ನು ಸನ್ಮಾನಿಸಿ ಮಾತನಾಡಿದ ಮಲ್ಲಣ್ಣಗೌಡ ಪಾಟೀಲ್ ಹತ್ತಿಕುಣಿ, ದೇಶದ ಸೈನ್ಯದಲ್ಲಿ ಕೆಲಸ ಮಾಡುವ ಅವಕಾಶ ಕೆಲವರಿಗೆ ಮಾತ್ರ ಸಿಗುತ್ತದೆ. ನಮ್ಮ ಗ್ರಾಮದ ಮೊಮ್ಮಗನಾಗಿರುವ ಬಸವರಾಜ ಕೊರಳ್ಳಿ ಅವರು ದೇಶದ ಶಕ್ತಿಶಾಲಿಯಾಗಿರುವ ಭೂಸೇನಾದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದು ಹೆಮ್ಮೆಯ ವಿಷಯ ಅವರು,




ಪಾಕಿಸ್ತಾನ ಗಡಿ ಭಾಗದ ಸೂಕ್ಷ್ಮ ಪ್ರದೇಶದಲ್ಲಿ ಸುಮಾರು 13 ವರ್ಷಗಳಿಂದ ಕೆಲಸ ಮಾಡಿ ದೇಶದ ರಕ್ಷಣೆಗೆ ಶ್ರಮಿಸುತ್ತಿರುವ ಅವರ ಕಾರ್ಯ ಶ್ಲಾಘನೀಯ ಈ ಕದನದಲ್ಲಿ ಈಗಾಗಲೇ ಭಾರತ ಭಯೋತ್ಪಾದಕರನ್ನು ಬೆಂಬಲಿಸುತ್ತಿರುವ ಪಾಕಿಸ್ತಾನದ ವಿರುದ್ಧ ಮೇಲುಗೈಯ ಸಾಧಿಸಿದ್ದಾರೆ. ಪ್ರತಿಯೊಬ್ಬ ಸೈನಿಕನ ಸೇವೆ ದೇಶಕ್ಕೆ ಇಂದು ಅವಶ್ಯಕವಾಗಿದೆ. ಭಾರತ ಈ ಕದನದಲ್ಲಿ ಪಾಕಿಸ್ತಾನಕ್ಕೆ ಸೂಕ್ತ ಉತ್ತರ ನೀಡಿ ಹಿನಾಯವಾಗಿ ಸೋಲಿಸುತ್ತದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಅಮೃತರೆಡ್ಡಿ ಪಾಟೀಲ್, ಮಲ್ಲರೆಡ್ಡಿಗೌಡ ಮಾಲಿ ಪಾಟೀಲ್, ಚಂದ್ರಾರೆಡ್ಡಿ ದಳಪತಿ, ಮಲ್ಲಿಕಾರ್ಜುನ ಗೌಡಗೇರಾ, ಯಂಕಾರೆಡ್ಡಿ ಜಟ್ಟೂರ್, ದೇವಿಂದ್ರಪ್ಪ ಖಂಡಪ್ಪನೋರ್, ರವಿ ಪಾಟೀಲ್, ಹಣಮಂತ ಶಂಕ್ರಪ್ಪನೋರ್, ಸಿದ್ದು ನಾಯಕ, ಮಂಜುನಾಥರೆಡ್ಡಿಗಡೇದ, ನರಸಪ್ಪ ಭೀಮನಳ್ಳಿ, ಕ್ಷೀರಲಿಂಗಗಣಪೂರ್, ಶಿವಶರಣಪ್ಪ ನಿಶಾನಿ, ಸುಭಾಶ ನಾಯಕ, ಯಂಕಾರೆಡ್ಡಿ ಕೊಳ್ಳಿ, ಬಸಣ್ಣಗೌಡ ಮಾಲಿಪಾಟೀಲ್, ಕಮಲರೆಡ್ಡಿ ಬೂದಿ, ಶರಣುಗಡೇದ, ಸಾಹೇಬಗೌಡ ಮಾಲಿಪಾಟೀಲ್, ಮಲ್ಲಿಕಾರ್ಜುನ ಖಂಡಪ್ಪನೋರ್, ಯಂಕಾರೆಡ್ಡಿ ರಾಂಪೂರಳ್ಳಿ, ರಾಮಯ್ಯ ಕಲ್ಲಪ್ಪನೋರ್, ದೇವಪ್ಪ ಕವಲ್ದಾರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ತಾಲೂಕಾಡಳಿತದಿಂದ ಭಗವಾನ್ ಬುದ್ಧರ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಪಟ್ಟಣದ ತಹಸಿಲ್ದಾರ್ ಕಾರ್ಯಾಲಯ ಸಭಾಂಗಣದಲ್ಲಿ ಭಗವಾನ್ ಬುದ್ಧರ 2588 ನೇ ಜಯಂತಿಯನ್ನು ಸೋಮವಾರ ಆಚರಿಸಲಾಯಿತು. ಜಯಂತಿ ಅಂಗವಾಗಿ ಭಗವಾನ್ ಬುದ್ಧರ ಭಾವಚಿತ್ರಕ್ಕೆ ಬೌದ್ಧ ಧರ್ಮದ ವಿಧಿ ವಿಧಾನಗಳೊಂದಿಗೆ ಪೂಜೆಯನ್ನು ಮುಖಂಡ ಬಸವರಾಜ ಕಟ್ಟಿಮನಿ ನೆರವೇರಿಸಿ ಕೊಟ್ಟರು. ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಜೈ ಭೀಮ ಮುತ್ತಗಿ ಹಾಗೂ ಮಹೇಶ ಚಲವಾದಿ ಅವರು ಭಗವಾನ್ ಬುದ್ಧರ ಜೀವನದ ಸಂದೇಶದ ಕುರಿತು ಮಾತನಾಡಿ ಭಗವಾನ್ ಬುದ್ಧರು ಪ್ರಾಯೋಗಿಕ ನೀತಿ ಸಂಹಿತೆ ಮತ್ತು ಸಾಮಾಜಿಕ ಸಮಾನತೆಯ ತತ್ವಕ್ಕೆ ಹೆಚ್ಚಿನ ಒತ್ತು ನೀಡಿದರು ಎಲ್ಲರೂ ಸಮಾನರು ಜಾತಿ ಲಿಂಗ ಅಥವಾ ಯಾವುದೇ ಇತರ ಅಂಶಗಳ ಆಧಾರದ ಮೇಲೆ ಯಾರು



ತಾರತಮ್ಯ ಮಾಡಬಾರದು ಎಂದು ಅವರು ಬೋಧಿಸಿದರು. ಅವರ ಬೋಧನೆಗಳು ಎಲ್ಲಾ ಜೀವಿಗಳ ಬಗ್ಗೆ ದಯೆ, ಕರುಣೆ ಮತ್ತು ಸಹಾನುಭೂತಿಯನ್ನು ಉತ್ತೇಜಿಸುತ್ತವೆ, ಅವರು ಮನುಷ್ಯನ ದುಃಖಕ್ಕೆ ಮೂಲ ಕಾರಣ ಹಾಗೂ ಅದರಿಂದ ಹೇಗೆ ಹೊರ ಬರಬೇಕೆಂದು ಎಂಬುದನ್ನು ಪ್ರಾಯೋಗಿಕವಾಗಿ ತೋರಿಸಿಕೊಟ್ಟಿದ್ದಾರೆ, ಅವರ ಶಾಂತಿಯ ಸಂದೇಶದಲ್ಲಿ ಇಡೀ ಮನುಕುಲದ ಏಳಿಗೆ ಅಡಗಿದೆ ಎಂದರು. ತಹಸಿಲ್ದಾರ್ ಡಾ. ವಿನಯಾ ಹೂಗಾರ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಸಿ.ಆರ್.ಸಿ. ರಾಜು ವಿಜಾಪುರ ನಿರೂಪಿಸಿದರು. ಸಮಯದಲ್ಲಿ ಗಣ್ಯರಾದ ಬಿ.ಬಿ. ಕಟ್ಟಿಮನಿ, ಜಿ.ಜಿ. ಮದರಕಲ್ಲ, ದೇವೇಂದ್ರ ಹಾದಿಮನಿ, ನಾಗೇಶ ಎಂ. ಕಟ್ಟಿಮನಿ, ಸಾಮಾಜಿಕ ಕಾರ್ಯಕರ್ತ ಅಬೂಬಕರ ಲಾಹೊರಿ, ಗೋಪಾಲ ಕಟ್ಟಿಮನಿ, ಮಶಾಕ್ ಜಮಾದಾರ, ಅಲ್ತಾಫ್ ಬಿಜಾಪುರ, ತಾಪಂನ ಮಹಾಂತಗೌಡ ದೊರೆಗೋಳ, ಸಿರಸ್ತೆದಾರ ಜೆ.ಆರ್. ಜೈನಾಪೂರ, ಮುಖ್ಯ ಶಿಕ್ಷಕಿ ಆರ್.ಬಿ. ಆಲೂರ, ಪುರಸಭೆ, ಕಂದಾಯ, ಶಿಕ್ಷಣ ಇಲಾಖೆ ಹಾಗೂ ಹೆಸ್ಕಾಂ ಅಧಿಕಾರಿಗಳು ಮತ್ತು ಸಮಾಜದ ಗಣ್ಯರು ಇದ್ದರು.

## ಭೀ,ಗುಡಿಯಲ್ಲಿ ಸರಳ ಸಾಮೂಹಿಕ ವಿವಾಹ ಕಾರ್ಯಕ್ರಮ.

# 15 ಜನ ನವ ವಧುವರರು ದಾಂಪತ್ಯ ಜೀವನಕ್ಕೆ ಪಾದರ್ಪಣೆ!



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಅಮ್ಮ ಗ್ರಾಮೀಣ ಅಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಸ್ಥೆ[ರಿ] ಹಾರಣಗೇರಾ, ಮತ್ತು ದ,ಸಂ,ಸ ಆಶ್ರೆಯದಲ್ಲಿ ತಾಲುಕಿನ ಭೀ,ಗುಡಿಯಲ್ಲಿ ಸರಳ ಸಾಮೂಹಿಕ ವಿವಾಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು, ಈ ಕಾರ್ಯಕ್ರಮವನ್ನು ಸಣ್ಣ ಕೈಗಾರಿಕಾ ಹಾಗೂ ಸಾರ್ವಜನಿಕ ಉಧ್ಯಮಗಳ ಮಂತ್ರಿ ಶರಣಬಸ್ಸಪ್ಪಗೌಡ ದರ್ಶನಾಪುರವರು ಉಧ್ಘಾಟನೆ ನೇರವೇರಿಸಿದರು. ನಟ ಚೇತನರವರು ಆಗಮಿಸಿ ವಧುವರರಿಗೆ ಶುಭಹಾರೈಸಿದರು, ಒಟ್ಟು 16 ಜನ ನವದಂತಿಗಳು ದಾಂಪತ್ಯ ಜೀವನಕ್ಕೆ ಪಾದರ್ಪಣೆ ಮಾಡಿದರು. ಪೂಜ್ಯ ಸಿದ್ದಬಸವ ಕಬೀರ ಮಾಹಾಸ್ವಾಮೀಗಳು ನವ ದಂಪತಿಗಳಿಗೆ ಬದುಕಿನ ಮಹತ್ವವನ್ನು ಉಪನ್ಯಾಷ ನೀಡುವದರ ಮುಖಾಂತರ ಬೋದಿಸಿದರು, ಸಮಾಜ ಕಲ್ಯಾಣ ಜಂಟಿ ನಿರ್ಧೇಶಕರಾದ ಡಾ,ಜೆ,ಪಿ, ದೇವರಾಜ, ರಾಜ್ಯ ದ,ಸಂ,ಸ, ಸಂಯೋಜಿತ ಸಂಸ್ಥಾಪಕರಾದ ವಿ,ನಾಗರಾಜ ಬುದ್ದಘೋಷ ಸಾಹಿತಿ ದೇವಿಂದ್ರ ಹೆಗಡೆ, ದಲಿತ ಮುಖಂಡರಾದ ನೀಲಕಂಠ ಬಡಿಗೇರ, ಶಂಕರ ಸಿಂಗೆ, ಬಸವರಾಜ ತಳವಾರ, ಚಂದ್ರಶೆಖರ ಹತ್ತಿಗೂಡೂರ, ವೇದಿಕೆಯಲ್ಲಿ ಆಸೀನರಾಗಿದ್ದರು, ದಲಿತ ಮುಖಂಡರಾದ ಮರೆಪ್ಪ ಜಾಲಿಮೆಂಚಿ, ಪ್ರಾಸ್ತಾವಿಕವಾಗಿ ಮಾತನಾಡಿದರು, ದ,ಸಂ,ಸ ಸಂಯೋಜಿತ ಅಧ್ಯಕ್ಷರಾದ ಲಕ್ಷ್ಮಣ ಹಳಿಸಗರವರು ಅಧ್ಯಕ್ಷತೆ ವಹಿಸಿದ್ದರು, ಶರಣು ಉಕ್ಕಿನಾಳ. ಬಸವರಾಜ ಗುಡಿಮನಿ, ಚಂದ್ರಶೇಖರ ಹುಲಿಮನಿ, ಮಾನಪ್ಪ ಜೇಗ್ರಿ, ಸೇರಿದಂತೆ ಅನೇಕ ಕಾರ್ಯಕರ್ತರು ಹಿರಿಯರು ನವ ವಧುವರರ ಅಪ್ತರು ಬಂಧು ಮಿತ್ರರು, ಆಗಮಿಸಿದ್ದರು, ಮಲ್ಲಿಕಾರ್ಜುನ ಬಂಡೆ ಕಾರ್ಯಕ್ರಮ ನಿರೂಪಿಸಿದರು, ಶೇಖರ ಹುರಸಗುಂಡಗಿ ಸ್ವಾಗತಿಸಿದರು, ನಗರಸಭೆ ಸದಸ್ಯರಾದ ಶಿವುಕುಮಾರ ತಳವಾರ ಸರ್ವರನ್ನು ವಂದಿಸಿದರು,

# ಆಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.12-ಕಲಬುರಗಿ ಗ್ರಾಮೀಣ ಶಿಶು ಅಭಿವೃದ್ಧಿ ಯೋಜನೆಯಲ್ಲಿ ಖಾಲಿಯಿರುವ ಅಂಗನವಾಡಿ ಕಾರ್ಯಕರ್ತೆ-10 ಹಾಗೂ ಸಹಾಯಕಿಯರ-20 ಹುದ್ದೆಗಳಿಗೆ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ, ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಕಲಬುರಗಿ ಗ್ರಾಮೀಣ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ ಎಂದು ಕಲಬುರಗಿ (ಗ್ರಾಮೀಣ) ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದಾರೆ.

ಈ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಚಿಸುವವರು 2025ರ ಮೇ 19 ರೊಳಗಾಗಿ ಕಚೇರಿ ಸಮಯದಲ್ಲಿ ಮಧ್ಯಾಹ್ನ 1.30 ಗಂಟೆಯೊಳಗಾಗಿ ಸಂಭಂದಪಟ್ಟ ದಾಖಲಾತಿಗಳೊಂದಿಗೆ ಕಲಬುರಗಿ (ಗ್ರಾಮೀಣ) ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕೆಂದು ಅವರು ತಿಳಿಸಿದ್ದಾರೆ.

# ಮುಂಗಾರು ಹಂಗಾಮು ಪ್ರಾರಂಭ; ರೈತರು ಮಾಗಿ ಉಳುಮೆ ಅನುಸರಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 12–ಪ್ರಸ್ತಕ ಸಾಲಿನ ಮುಂಗಾರು ಹಂಗಾಮು ಪ್ರಾರಂಭವಾಗುತ್ತಿರುವುದರಿಂದ ರೈತರು ತಮ್ಮ ಜಮೀನಿನಲ್ಲಿ ಮಾಗಿ ಉಳುಮೆ ಮಾಡಿಕೊಂಡು, ಸಾಕಷ್ಟು ಪ್ರಮಾಣದಲ್ಲಿ ಕೊಟ್ಟಿಗೆ ಗೊಬ್ಬರ, ಎರೆಹುಳ ಗೊಬ್ಬರ ಮತ್ತು ಸಾವಯವ ಗೊಬ್ಬರಗಳನ್ನು ತಮ್ಮ ಜಮೀನುಗಳಿಗೆ ಸೇರಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ತಿಳಿಸಿದ್ದಾರೆ.

ಮಾಗಿ ಉಳುಮೆ ಎಂದರೆ ಎಂ.ಬಿ.ನೇಗಿಲು, ಡಿಸ್ಕ್ ಪ್ಲೋ ಅಂತಹ ಯಂತ್ರೋಪಕರಣಗಳನ್ನು ಬಳಸಿ, ಇಳಿಜಾರಿನ ಅಡ್ಡಕ್ಕೆ ಹೊಲವನ್ನು ಆಳವಾದ ಉಳುಮೆ, ಮಣ್ಣಿನ ಹೊರಪದರವನ್ನು ತೆ–ರೆದು ಸೂರ್ಯನ ಕಿರಣಗಳಿಂದ ಸೋಂಕುರಹಿತಗೊಳಿಸಲು ಕೆಳಗಿನ ಮಣ್ಣನ್ನು ತಿರುಗಿಸುವುದಾಗಿದೆ ಎಂದು ಅವರು ತಿಳಿಸಿದ್ದಾರೆ.

*ಮಾಗಿ ಉಳುಮೆಯಿಂದಾಗುವ ಪ್ರಯೋಜನಗಳು:*

ಮಾಗಿ ಉಳುಮೆಯಿಂದ ಮಣ್ಣಿನ ಗಟ್ಟಿಯಾದ ಹೊರಪದರವನ್ನು ಒಡೆದು ಆಳವಾದ ಉಳುಮೆ ಮಾಡುವುದರಿಂದ ನೀರಿನ ಇಂಗುವ ಸಾಮರ್ಥ್ಯ ಹೆಚ್ಚಾಗುತ್ತದೆ. ಮಣ್ಣು ಹೆಚ್ಚಿನ ನೀರನ್ನು ಹಿಡಿದು–ಕೊಂಡು ಸುಲಭವಾಗಿ ಗಿಡಗಳಿಗೆ ದೊರೆಯುವಂತೆ ಮಾಡುತ್ತದೆ.

ಮಾಗಿ ಉಳುಮೆಯಲ್ಲಿ ಪರ್ಯಾಯ ಬಿಸಿಲಿನಿಂದ ಒಣಗಿಸುವಿಕೆ ಹಾಗೂ ಗಾಳಿಯಿಂದ ತಂಪಾಗಿಸುವಿಕೆಯಿಂದಾಗಿ ಮಣ್ಣಿನ ರಚನೆಯು ಸುಧಾರಿಸುತ್ತದೆ. ಮಣ್ಣಿನ ಗಾಳಿಯನ್ನು ಸುಧಾರಿಸುವುದರಿಂದ ಸೂಕ್ಷ್ಮಜೀವಿಗಳ ಉತ್ಪತ್ತಿಯು ಹೆಚ್ಚಾಗಿ ಸಾವಯವ ಗೊಬ್ಬರಗಳು ಕರಗಿ ಪೋಷಕಾಂಶಗಳ ಲಭ್ಯತೆ–ಯು ಹೆಚ್ಚುತ್ತದೆ ಎಂದಿದ್ದಾರೆ.

ಮಳೆಯನ್ನು ಹೀರಿಕೊಳ್ಳುವ ಮಣ್ಣಿನ ಸಾಮರ್ಥ್ಯವು ಬೆಳೆದಂತೆ ವಾತಾವರಣದಲ್ಲಿ ಲಭ್ಯವಿರುವ ಸಾರಜನಕ ನೀರಿನಲ್ಲಿ ಕರಗಿ ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸುತ್ತದೆ. ಮಣ್ಣಿನಡಿಯಲ್ಲಿ ಅಡಗಿರುವ ಅನೇಕ ಕೀಟಗಳ ಮೊಟ್ಟೆ, ಮರಿಹುಳು ಮತ್ತು ಕೋಶಗಳು ಸೂರ್ಯನ ಅತಿಯಾದ ಬಿಸಿಲಿನ ಶಾಖದಿಂದ ಸತ್ತುಹೋಗಿ ಮುಂದಿನ ಬೆಳೆಗಳ ಮೇಲೆ ಕೀಟಗಳ ಅಪಾಯದ ಪ್ರಮಾಣವನ್ನು ಕಡಿಮೆ ಮಾಡಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಬಿಸಿಲಿನ ಶಾಖಕ್ಕೆ ಅನೇಕ ಬ್ಯಾಕ್ಟೀರಿಯಾ ಬೀಜಕಗಳು, ಶಿಲೀಂದ್ರಗಳು ಮತ್ತು ಸೂಕ್ಷ್ಮಜೀವಿಗಳು ಸಾಯುತ್ತವೆ, ಇದರಿಂದ ಮುಂದಿನ ಬೆಳೆಗಳಿಗೆ ಉಂಟಾಗುವ ರೋಗಗಳನ್ನು ತಪ್ಪಿಸಿ ಕೀಟ ಮತ್ತು ರೋಗನಾಶಕಗಳಿಗೆ ತಗಲುವ ವೆಚ್ಚವನ್ನು ಉಳಿಸುತ್ತದೆ. ಮಾಗಿ ಉಳಿಮೆಯಿಂದ ನೆಮಟೋಡ್ ಬಾಧೆಯನ್ನು ತಪ್ಪಿಸಬಹುದು. ಮಾಗಿ ಉಳುಮೆಯು ಕಳೆಗಳು ಮೊಳಕೆಯೊಡೆಯುವುದನ್ನು ತಡೆ–ಯುತ್ತದೆ ಇದರಿಂದ ಕಳೆಗಳ ನಿಯಂತ್ರಣವನ್ನು ಮಾಡಬಹುದು.

ಮಾಗಿ ಉಳುಮೆಯಿಂದ ಹೆಚ್ಚಿನ ಮಳೆ ನೀರು ಸಂಗ್ರಹಣೆ, ಪೋಷಕಾಂಶಗಳ ಸಮತೋಲನ ಮತ್ತು ಮಣ್ಣಿನ ಗುಣಧರ್ಮಗಳ ಸುಧಾರಣೆಯಿಂದ ಹೆಚ್ಚಿನ ಬೆಳೆ ಇಳುವರಿ ಪಡೆಯಲು ಸಾಧ್ಯವಾಗುತ್ತದೆ.

ಹಾಗಾಗಿ ರೈತ ಬಾಂಧವರು ಮಾಗಿ ಉಳುಮೆಯ ಈ ಎಲ್ಲಾ ಪ್ರಯೋಜನೆಗಳಿಂದ ಕಡಿಮೆ ಖರ್ಚು ಮಾಡಿ ಹೆಚ್ಚಿನ ಇಳುವರಿ ಪಡೆದುಕೊಂಡು ತಮ್ಮ ಆರ್ಥಿಕ ಮಟ್ಟವನ್ನು ಹೆಚ್ಚಿಸಕೊಳ್ಳಬಹುದು ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಖಾಸಗೀಕರಣ ವಿರೋಧಿಸಿ ಪ್ರತಿಭಟನೆ : ಮುದಿಯಪ್ಪ ನಾಯಕ




ಮಲ್ಲಮ್ಮನುಡಿ ವಾರ್ತೆ

ಕೊಪ್ಪಳ : ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯಾಧ್ಯಕ್ಷರು ಡಾ. ವಾಸುದೇವ ಮೇಟಿ ಬಣ ವತಿಯಿಂದ ಮೇ 15 ರಂದು ಬೆಳಿಗ್ಗೆ 11 ಗಂಟೆಗೆ

ಕೊಪ್ಪಳ ಜಿಲ್ಲಾ ಕೇಂದ್ರದ ಕಾರ್ಯಪಾಲಕ ಅಭಿಯಂತರರು ಜೆಸ್ಕಾಂ ಕಚೇರಿಯ ಮುಂದೆ ವಿದ್ಯುತ್ ಖಾಸಗೀಕರಣ ವಿರೋಧಿಸಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕೊಪ್ಪಳ ಜಿಲ್ಲಾಧ್ಯಕ್ಷ ಮುದಿಯಪ್ಪ ನಾಯಕ ಹೇಳಿದರು.

ಅವರು ಸೋಮವಾರದಂದು ನಗರದ ಪತ್ರಿಕಾ ಭವನದಲ್ಲಿ ಉದ್ದೇಶಿಸಿ ಮಾತನಾಡಿ ರಾಜ್ಯ ಸರ್ಕಾರ ರೈತರ ಕೃಷಿ ಪಂಪ್ ಸೆಟ್ ಗಳಿಗೆ ಸ್ಮಾರ್ಟ್ ಕಾರ್ಡ್, ಡಿಜಿಟಲ್ ಮೀಟರ್ ಅಳವಡಿಸಲು 10 ಸಾವಿರ ರೂ. ಡಿಪೋಜಿಟ್ ಶುಲ್ಕವನ್ನು ನಿಗಧಿಪಡಿಸಿರುವುದನ್ನು ಹಿಂಪಡೆಯಬೇಕು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸಲು ಮಾಡಿರುವ ಯತ್ನವನ್ನು ನಿಲ್ಲಿಸಬೇಕು, ರೈತರಿಗೆ ವಿದ್ಯುತ್ ಪರಿಕರಣಗಳನ್ನು ಅಕ್ರಮ–ಸಕ್ರಮ ಅಡಿಯಲ್ಲಿ ಈ ಹಿಂದೆ ನೀಡಿದ್ದಂತೆಯೇ ರೈತರ ಉಚಿತ ವಿದ್ಯುತ್‌ನ್ನು ಗೌರವದಿಂದ ನೀಡಬೇಕು ಎಂದರು.

ರೈತ ಸಂಘದ ಜಿಲ್ಲಾ ಗೌರವಾಧ್ಯಕ್ಷ ಶರಣಪ್ಪ ಸೋಮ ಸಾಗರ ಮಾತನಾಡಿ ವಿದ್ಯುತ್ ಸಂಪರ್ಕಕ್ಕೆ ರೈತರ ಆಧಾರ್ ಜೋಡಣೆ ಮಾಡುವುದನ್ನು ನಿಲ್ಲಿಸಬೇಕು, ರೈತರ ಜಮೀನಿನಲ್ಲಿ 3–4 ಬೋರ್‌ವೆಲ್ ಗಳು ಇದ್ದು, ಅಂತರ್ಜಾಲ ಕಡಿಮೆ ಆದಂತಹ ಸಂದರ್ಭದಲ್ಲಿ ಆಧಾರ್‌ಕಾರ್ಡ್ ಜೋಡನೆ ಮಾಡುವುದರಿಂದ ರೈತರ ಬದುಕು ದುಸ್ಥಿರವಾಗುತ್ತದೆ,

ಸರ್ಕಾರದ ಶೀಘ್ರ ಯೋಜನೆ ಅಡಿಯಲ್ಲಿ ಟಿ.ಸಿ. ಗಳನ್ನು ಮಾತ್ರ ನೀಡಲಿದ್ದು, ಉಳಿದ ಕಂಬ ಮತ್ತು ವೈರ್‌ಗಳನ್ನು ರೈತರು ಸ್ವಂತ ಖರ್ಚಿನಿಂದ ಮಾಡಿಸಲು ಸಾಧ್ಯವೇ ಇಲ್ಲ, ಸರ್ಕಾರವೇ ಉಚಿತವಾಗಿ ನೀಡಬೇಕು, ಜಮೀನಿನಲ್ಲಿ ವಾಸವಾಗಿರುವ ರೈತರಿಗೆ ವಿದ್ಯಾರ್ಥಿಗಳಿಗೆ, ಹೈನುಗಾರಿಕೆ ಮಾಡುವಂತವರಿಗೆ ಸಾಯಂಕಾಲ 6 ಗಂಟೆಯಿಂದ ಬೆಳಿಗ್ಗೆ 6 ಗಂಟೆಯವರೆಗೆ ಸಮರ್ಪಕ ಯೋಗ್ಯ ವಿದ್ಯುತ್ ನೀಡುವುದು ಸೇರಿದಂತೆ ಇದು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಲಾಗುವುದು ಎಂದರು.

ರೈತ ಸಂಘದ ಕೊಪ್ಪಳ ತಾಲೂಕ ಅಧ್ಯಕ್ಷ ಅಪ್ಪಣ್ಣ ಡೊಳ್ಳಿನ್ ಮಾತನಾಡಿ ಈ ಪ್ರತಿಭಟನೆಗೆ ಜಿಲ್ಲಾ, ತಾಲೂಕು, ಹೋಬಳಿ, ಗ್ರಾಮ ಮಟ್ಟದ ಎಲ್ಲಾ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಆಗಮಿಸಿ ಪ್ರತಿಭಟನೆಯನ್ನು ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಯಲಬುರ್ಗಾ ತಾಲೂಕ ಅಧ್ಯಕ್ಷ ಶರಣಬಸಪ್ಪ ದಾನಕೈ, ಶಿವಾನಂದ ವಂಕಲಕುಂಟಿ, ಕುಷ್ಟಗಿ ತಾಲೂಕು ಅಧ್ಯಕ್ಷ ಕಾಶಿಂ ಶ್ರೀಶೈಲ ಉಪಸ್ಥಿತರಿದ್ದರು.

# ಮೂಗುಬಸವೇಶ್ವರ ದೇವಸ್ಥಾನ ಸ್ಥಳಾಂತರ ಸರಿಯಲ್ಲ– ಆರ್ ಟಿಕ್ಯಾನಾಯಕ್..!





ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಎಕ್ಸ್ ಇಂಡಿಯಾ ಕಾರ್ಖಾನೆ ಮಾಲೀಕರು ಪುರಾತನ ಹಾಗೂ ನೂರಾರು ವರ್ಷ ಇತಿಹಾಸ ಇರುವ ಮೂಗು ಬಸವೇಶ್ವರ ದೇವಸ್ಥಾನ ಸ್ಥಳಾಂತರ ಮಾಡುವುದು ಸರಿಯಲ್ಲ ಎಂದು ಗ್ರಾಮಸ್ಥ ಟಿಕ್ಯಾನಾಯಕ್ ಬೇಸರ ವ್ಯಕ್ತಪಡಿಸಿದ್ದಾರೆ.

ಸೋಮವಾರ ತಾಲೂಕಿನ ಕುಣಿಕೇರಿ ತಾಂಡ ಗ್ರಾಮದ ಬಳಿ ಸುವರ್ಣ ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ಕುಣಿಕೇರಿ ತಾಂಡ ಗ್ರಾಮದ ನಿವಾಸಿ ಟಿಕ್ಯಾನಾಯಕ್ ಮಾತನಾಡಿ, ಗ್ರಾಮದ ಬಳಿ ಎಕ್ಸ್ ಇಂಡಿಯಾ ಕಾರ್ಖಾನೆಗೆ ರೈತರು ಭೂಮಿ ಕೊಟ್ಟಿದ್ದಾರೆ. ಕಾರ್ಖಾನೆಯವರು ಸುತ್ತಲೂ ತಡೆಗೋಡೆ ನಿರ್ಮಾಣ ಮಾಡಿದ್ದಾರೆ. ಅಲ್ಲಿ ನೂರಾರು ಇತಿಹಾಸ ಇರುವ ಮೂಗು ಬಸವೇಶ್ವರ ದೇವಸ್ಥಾನ ಇದೆ. ಅಮ್ಮ ತಾತ ನಮ್ಮ ಅಪ್ಪ ಕಾಲದಿಂದಲೂ ಪ್ರತಿ ವರ್ಷವೂ ದೇವಸ್ಥಾನದಲ್ಲಿ ಶ್ರಾವಣ ಮಾಸದ ನಾಲ್ಕನೇ ಸೋಮವಾರ ದಿನ ದೇವರಿಗೆ ವಿಶೇಷ ಪೂಜೆ ಹಾಗೂ ಜಾತ್ರೆ ಮಾಡಲಾಗುತ್ತಿದೆ. ಆ ದಿನ ಗ್ರಾಮದ ಎಲ್ಲಾ ರೈತರು ಹಾಗೂ ಗ್ರಾಮದ ಎಲ್ಲಾ ಸಾರ್ವಜನಿಕರು ದೇವಸ್ಥಾನಕ್ಕೆ ಆಗಮಿಸಿ ಪೂಜೆ ಹಾಗೂ ಜಾತ್ರೆಯಲ್ಲಿ ಪಾಲ್ಗೊಂಡು ಆಚರಣೆ ಮಾಡುತ್ತಾ ಬಂದಿದ್ದೇವೆ. ಆರ್ಥಿಕ ಸಂಕಷ್ಟದಿಂದ ಭೂಮಿ ಮಾರಾಟ ಮಾಡಿರಬಹುದು ದೇವಸ್ಥಾನ ಮಾರಾಟ ಮಾಡಿರುವುದಿಲ್ಲ, ಕಾರ್ಖಾನೆ ಮಾಲೀಕರು ದೇವಸ್ಥಾನ ಸ್ಥಳಾಂತರ ಮಾಡಿ ನೂತನ ದೇವಸ್ಥಾನ ನಿರ್ಮಾಣ ಮಾಡುತ್ತೇವೆ ಎಂದು ಹೇಳುತ್ತಾರೆ. ಸ್ಥಳಾಂತರ ಮಾಡುವ ಜಾಗದಲ್ಲಿ ಹೈಟೆನ್ಷನ್ ವಿದ್ಯುತ್ ತಂತಿ ಇದೆ. ಅಂತಹ ಜಾಗದಲ್ಲಿ ಇತಿಹಾಸ ಹಾಗೂ ನೂರಾರು ವರ್ಷದ ದೇವಸ್ಥಾನ ಸ್ಥಳಾಂತರ ಮಾಡುವುದು ಸರಿಯಾದ ಕ್ರಮವಲ್ಲ. ಧಾರ್ಮಿಕ ದತ್ತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಆಡಳಿತ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಜೊತೆಗೆ ಅದೇ ಜಾಗದಲ್ಲೇ ನೂತನ ದೇವಸ್ಥಾನವನ್ನ ನಿರ್ಮಾಣ ಮಾಡಿ ಪೂಜೆ ಮಾಡಲು ಗ್ರಾಮಸ್ಥರಿಗೆ ಭಕ್ತರಿಗೆ ಅವಕಾಶ ಕಲ್ಪಿಸಬೇಕು ಇಲ್ಲವಾದರೆ ಪ್ರತಿಭಟನೆ ಮಾಡಿ ನ್ಯಾಯಾಲಯದ ಮೊರೆ ಹೋಗಲಾಗುವುದು. ಕಾರ್ಖಾನೆ ಮಾಲೀಕರು ಅದಕ್ಕೆ ಅವಕಾಶ ಕೊಡದೆ ದೇವಸ್ಥಾನವನ್ನ ಸ್ಥಳಾಂತರ ಮಾಡಬಾರದು ಎಂದು ಮನವಿ ಮಾಡಿದರು.

# ಕಂಪ್ಲಿ: ಮೇ 15 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 12–ಕಂಪ್ಲಿ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪವಿಭಾಗ ವ್ಯಾಪ್ತಿಯ 110/11ಕೆವಿಯ ತುರ್ತು ನಿರ್ವಹಣಾ ಕಾರ್ಯ ಕೈಗೊಳ್ಳುತ್ತಿರುವುರಿಂದ ಮೇ 15 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:*

ಕಂಪ್ಲಿ ಪಟ್ಟಣ, ರಾಮಸಾಗರ, ನಂ–10 ಮುದ್ದಾಪುರ, ಕಣಿವೆ ತಿಮ್ಮಾಪುರ, ದೇವಸಮುದ್ರ, ಹಂಪಾದೇವನಹಳ್ಳಿಯ ಎಫ್–6 ವಿದ್ಯಾಪೀಠ ಮಾರ್ಗ ಸೇರಿದಂತೆ ಇನ್ನೂ ಮುಂತಾದ ಪ್ರದೇಶಗಳು ಮತ್ತು ಕಂಪ್ಲಿ ಪಟ್ಟಣ ವ್ಯಾಪ್ತಿಯ ಐಪಿ ಸೆಟ್ ಎಫ್–10 ಮಾರ್ಗದ ಕೆ.ಎನ್ ಕ್ಯಾಂಪ್, ಎಫ್–5 ಮಾರ್ಗದ ಜಾನೂರು, ಎಫ್–7 ಮಾರ್ಗದ ಸಣಾಪುರ, ಎಫ್–8 ಮಾರ್ಗದ ಕಣಿವೆ ತಿಮ್ಮಾಪುರ, ಎಫ್–9 ಮಾರ್ಗದ ಮುಷ್ಟೂರ್‌ಘಾಟ್ ಪ್ರದೇಶಗಳಲ್ಲಿ ಬೆಳಿಗ್ಗೆ 04 ಗಂಟೆಯಿಂದ ವಿದ್ಯುತ್ ಸರಬರಾಜು ಮಾಡಲಾಗುವುದು.

ಹಾಗಾಗಿ ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಕಂಪ್ಲಿ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ; ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 12–ಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯ ಸಂಜೀವರಾಯನ ಕೋಟೆ ಗ್ರಾಮದ 2ನೇ ವಾರ್ಡ್ನ ಎಸ್.ಸಿ ಕಾಲೋನಿಯ ಯನ್ನಪ್ಪ ತಾತ ದೇವಸ್ಥಾನದ ಬಳಿ ನಿವಾಸಿಯಾದ ಹೆಚ್. ವಿರೇಶ್ ಎನ್ನುವ 29 ವರ್ಷದ ವ್ಯಕ್ತಿಯು 2024 ರ ಆ.13 ರಂದು ರಂದು ಕಾಣೆ–ಯಾಗಿದ್ದು, ಈ ಕುರಿತು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತೆ–ಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ತಿಳಿಸಿದ್ದಾರೆ.

ಚಹರೆ ಗುರುತು:

ಅಂದಾಜು 5.6 ಅಡಿ ಎತ್ತರ, ಕೋಲು ಮುಖ, ಎಣ್ಣೆಗೆಂಪು ಮೈಬಣ್ಣ, ತೆಳುವಾದ ಮೈಕಟ್ಟು ಹೊಂದಿರುತ್ತಾನೆ. ಕಾಣೆಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ತುಂಬು ತೋಳಿನ ಶರ್ಟ್ ಹಾಗೂ ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ತೆಲುಗು ಭಾಷೆ ಮಾತನಾಡುತ್ತಾನೆ.

ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392–276461, ಮೊ.9480803049 ಅಥವಾ ಬಳ್ಳಾರಿ ಕಂಟ್ರೋಲ್ ರೂಂ ದೂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗದಗ– ವಾಡಿ ಪ್ರಥಮ ಹಂತದ ರೈಲು ಮಾರ್ಗ ಲೋಕಾರ್ಪಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನೂತನ ರೈಲ್ವೆ ಮಾರ್ಗ, ನಿಲ್ದಾಣ ನಿರ್ಮಾಣ ಸೇರಿದಂತೆ ಪ್ರತಿಯೊಂದು ಅಂಶಗಳು ಈ ಭಾಗದ ಜನರಲ್ಲಿ ಕುತೂಹಲ ಮೂಡಿಸಿದ್ದು ರೈಲು ಬಂಡಿ ಹಳಿ ಏರುವ ದಿನವನ್ನು ಕಾತುರದಿಂದ ಕಾಯುತ್ತಿದ್ದಾರೆ. ವರ್ಷಾನುಗಟ್ಟಲೆ ತಡವಾದರೂ ಸಹ ಜನರು ನಿರೀಕ್ಷೆಗೆ ತಕ್ಕಂತೆ ತ್ವರಿತಗತಿಯಲ್ಲಿ ರೈಲ್ವೆ ಕಾಮಗಾರಿ ನಿರ್ಮಾಣಗೊಳ್ಳದಿದ್ದರೂ ಸಹ ಕುಷ್ಟಗಿ ಪಟ್ಟಣದ ರೈಲು ನಿಲ್ದಾಣದ ಗ್ರಾಮಗಾರಿ ಮಾತ್ರ ಪ್ರಗತಿಯಲ್ಲಿ ಸಂಪೂರ್ಣಗೊಂಡಿದ್ದು ಐತಿಹಾಸಿಕ ಸ್ಮಾರಕಗಳನ್ನು ನಿರೂಪಿಸುವ ಕುಂಚದ ಕಲೆಯನ್ನು ರೈಲು ನಿಲ್ದಾಣ ಕಟ್ಟಡ ಹೊಂದಿದ್ದು ಎಲ್ಲರ ಆಕರ್ಷಣೀಯ ಕೇಂದ್ರವಾದಂತಿದೆ.

ಗದಗ– ವಾಡಿ ನೂತನ ರೈಲು ಮಾರ್ಗದ ತಳಕಲ್ ಜಂಕ್ಷನ್ ನಿಂದ ಕುಷ್ಟಗಿ ಪಟ್ಟಣದವರೆಗಿನ ಮೊದಲನೇ ಹಂತದ 60 ಕಿಲೋಮೀಟರ್ ಮಾರ್ಗ ಸಂಪೂರ್ಣಗೊಂಡಿದ್ದು. 2013 ಹದಿನಾಲ್ಕನೆಯ ಸಾಲಿನ ರೈಲ್ವೆ ಬಜೆಟ್ ನಲ್ಲಿ ಈ ಯೋಜನೆ ಘೋಷಣೆಯಾಗಿತ್ತು. ದೀರ್ಘಾವಧಿಯಿಂದ ಬಾಕಿ ಉಳಿದಿದ್ದ ರೈಲು ಮಾರ್ಗಕ್ಕೆ ಕೊನೆಗೂ ಮುಹೂರ್ತ ನಿಗದಿಯಾಗಿದ್ದು ಕುಷ್ಟಗಿ ಪಟ್ಟಣದಲ್ಲಿ ರಾಜ್ಯ ರೈಲ್ವೆ ಸಚಿವ ವಿ ಸೋಮಣ್ಣ ಅವರಿಂದ ಹಸಿರು ನಿಶಾನೆ ತೋರಿಸುವದರೊಂದಿಗೆ ಲೋಕಾರ್ಪಣೆಗೊಳಿಸಲಾಗುವುದು ಎಂದು ರೈಲ್ವೆ ಇಲಾಖೆಯ ಮಾಹಿತಿಯಿಂದ ತಿಳಿದು ಬಂದಿರುತ್ತದೆ.

# ಸಹಾಯಕಿಯರ ಹುದ್ದೆಯ ತಾತ್ಕಾಲಿಕ ಪಟ್ಟಿ ಪ್ರಕಟ: ಅಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.12.–ಜೇವರ್ಗಿ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಖಾಲಿ ಇರುವ 10 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 20 ಅಂಗನವಾಡಿ ಸಹಾಯಕಿಯರ ಖಾಲಿ ಇರುವ ಹುದ್ದೆಗಳಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆಯಲ್ಲಿ ತಾತ್ಕಾಲಿಕವಾಗಿ ಆಯ್ಕೆ ಮಾಡಿ, ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಜೇವರ್ಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಪ್ರಕಟಿಸಲಾಗಿದೆ ಎಂದು ಜೇವರ್ಗಿ ಶಿಶು ಅಬಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

# ಬನ್ನಿಕೊಪ್ಪ ರೈಲು ನಿಲ್ದಾಣಕ್ಕೆ ಹಂಪಿ ಟ್ರೈನ್ ನಿಲುಗಡೆ ನೀಡಿ–ಎಂ ಎನ್ ಕುಕನೂರು



ಮಲ್ಲಮ್ಮ ನುಡಿ ವಾರ್ತೆ

ಕುಕನೂರು: ತಾಲೂಕಿನ ಬನ್ನಿಕೊಪ್ಪ ರೈಲು ನಿಲ್ದಾಣಕ್ಕೆ ಹಂಪಿ ವೇಗದೂತ ರೈಲು ನಿಲ್ಗಡೆ ನೋಡುವಂತೆ ರೈಲ್ವೆ ಮಂತ್ರಿಗಳಾದ ವಿ ಸೋಮಣ್ಣ ಅವರಿಗೆ ಒತ್ತಾಯಿಸಲಾಗುವುದು ಎಂದು ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನೆಯ ಸಂಸ್ಥಾಪಕ ರಾಷ್ಟ ಅಧ್ಯಕ್ಷ ಎಂ ಎನ್ ಕುಕನೂರು ಹೇಳಿದರು.

ಜಿಲ್ಲೆಯ ಕುಕನೂರು ಪಟ್ಟಣದಲ್ಲಿ ವರದಿಗಾರರೊಂದಿಗೆ ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನೆ ರಾಷ್ಟೀಯ ಅಧ್ಯಕ್ಷ ಎಂ ಎನ್ ಕುಕನೂರು ಮಾತನಾಡುತ್ತಾ ರೈಲ್ವೆ ಇಲಾಖೆಯಿಂದ ಮೇ 15 ರಂದು ಗದಗ ವಾಡಿ ರೈಲು ಮಾರ್ಗದ ಪ್ರಥಮ ಹಂತದ ತಳಕಲ್ ಕುಷ್ಟಗಿ ಮಾರ್ಗ ಲೋಕಾರ್ಪಣೆಗೊಳಿಸುತ್ತಿರುವುದು ಸಂತಸದ ವಿಷಯವಾಗಿದ್ದು ಇದರ ಜೊತೆ ಕುಷ್ಟಗಿ, ಯಲಬುರ್ಗಾ ಹಾಗೂ ಕುಕುನೂರು ತಾಲೂಕುಗಳ ಜನತೆಯು ಕೆಲಸ ಕಾರ್ಯದ ನಿಮಿತ್ಯ ಬೆಂಗಳೂರಿಗೆ ತೆರಳಲು ಅನುಕೂಲವಾಗಲು ಹಂಪಿ ಎಕ್ಸ್ಪ್ರೆಸ್ ರೈಲು ಗಾಡಿಯನ್ನು ಕುಕನೂರು ತಾಲೂಕಿನ ಬನ್ನಿಕೊಪ್ಪ ರೈಲು ನಿಲ್ದಾಣದಲ್ಲಿ ನಿಲುಗಡೆ ನೀಡಬೇಕು ಎಂದು ನೂತನ ಮಾರ್ಗ ಲೋಕಾರ್ಪಣೆಗೆ ಆಗಮಿಸುವ ರಾಜ್ಯ ರೈಲ್ವೆ ಸಚಿವ ವಿ ಸೋಮಣ್ಣ ಅವರಿಗೆ ಒತ್ತಾಯಿಸುತ್ತಾ ಮನವಿ ಪತ್ರವನ್ನು ಸಲ್ಲಿಸುವುದಾಗಿ ತಿಳಿಸಿದರು.

ಕೋವಿಡ್ ಪೂರ್ವದಲ್ಲಿ ಹಂಪಿ ಎಕ್ಸ್ಪ್ರೆಸ್ ರೈಲು ಗಾಡಿ ಬನ್ನಿಕೊಪ್ಪ ರೈಲು ನಿಲ್ದಾಣದಲ್ಲಿ ನಿಲುಗಡೆ ಹೊಂದಿದ್ದು ಈ ಭಾಗದ ಜನತೆಗೆ ಬಹಳಷ್ಟು ಅನುಕೂಲವಾಗಿದ್ದು ಇಲ್ಲಿಯ ಜನ ಈ ರೈಲು ಗಾಡಿಯ ಪ್ರಯೋಜನವನ್ನು ಸಹ ಪಡೆದಿರುತ್ತಾರೆ.ಆದರೆ ಕೋವಿಡ್ ಲಾಕ್ಡೌನ್ ಸಮಯದಲ್ಲಿ ರೈಲು ಸಂಚಾರವನ್ನು ನಿಲ್ಲಿಸಿ ಪುನರ್ ಪ್ರಾರಂಭಗೊಳಿಸಿದಾಗ ಈ ರೈಲುಗಾಡಿಯನ್ನು ಬನ್ನಿಕೊಪ್ಪ ರೈಲು ನಿಲ್ದಾಣದಲ್ಲಿ ನಿಲುಗಡೆಯನ್ನು ರದ್ದುಪಡಿಸಿದ್ದು ಇಲ್ಲಿನ ಜನತೆ ಪರದಾಡುವಂಥ ಪರಿಸ್ಥಿತಿ ನಿರ್ಮಾಣವಾಗಿದೆ. ಇದೀಗ ರೈಲ್ವೆ ಇಲಾಖೆ ಕುಷ್ಟಗಿ ಪಟ್ಟಣವರೆಗೆ ರೈಲು ಸಂಚಾರ ಆರಂಭಿಸುತ್ತಿರುವುದು ಅತ್ಯಂತ ಸಂತಸ ಹಾಗೂ ಈ ಭಾಗದ ಜನತೆಯ ಬಹು ದಿನಗಳ ಕನಸು ನನಸಾಗುವ ಸಂಭ್ರಮದೊಂದಿಗೆ ಹಂಪಿ ಎಕ್ಸ್ಪ್ರೆಸ್ ರೈಲು ಗಾಡಿಯನ್ನು ಕುಷ್ಟಗಿ ರೈಲ್ವೆ ಗಾಡಿ ಜೊತೆ ಲಿಂಕ್ ಮಾಡಿ ಬೆಂಗಳೂರಿಗೆ ಹೋಗಲು ಅನುಕೂಲ ಮಾಡಿಕೊಟ್ಟಲ್ಲಿ ಈ ಭಾಗದ ರೈತರ ಕೃಷಿ ಚಟುವಟಿಕೆಗೆ ಸೇರಿದಂತೆ ವ್ಯಾಪಾರ ವಾಣಿಜ್ಯ ದೃಷ್ಟಿಯಿಂದ ಉಪಯುಕ್ತವಾಗಲಿದೆ ಎಂದು ತಿಳಿಸಿದರು.

ಈ ವೇಳೆಯಲ್ಲಿ ಚಂದ್ರಕಾಂತ್ ಪಾಟೀಲ್ ರಾಜ್ಯ ಉಪಾಧ್ಯಕ್ಷರು, ಯಶೋದಾ ಸಿ ರಾಜ್ಯ ಉಪಾಧ್ಯಕ್ಷರು ಮಹಿಳಾ ಘಟಕ, ಮಂಜುಳಾ ರಾಮೇಗೌಡ ಮೈಸೂರು ಜಿಲ್ಲಾ ಉಪಾಧ್ಯಕ್ಷರು, ಪಿಟ್ಟನಗೌಡ ಮಾಲಿ ಪಾಟೀಲ್ ಕೊಪ್ಪಳ ಜಿಲ್ಲಾ ಕಾರ್ಯಧ್ಯಕ್ಷರು, ಬಸವರಾಜ ಅಡವಿ, ಮೆಹಬೂಬ್ ಮಾಳೆಕೊಪ್ಪ, ಹನುಮೇಶ್, ಹೊನ್ನಪ್ಪ, ವೆಂಕಟೇಶ್ ಇಳಿಗೆರ್, ಬರ್ಮಣ್ಣ, ಅಂಬರೀಶ್, ಮತ್ತು ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನಾ. ರಿ. ದೆಹಲಿ ಸಂಘಟನೆಯ ಸದಸ್ಯರು ಪಾಲ್ಗೊಂಡಿದ್ದರು.

# ಚಿಂಚೋಳಿ: ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಹುದ್ದೆಯ ತಾತ್ಕಾಲಿಕ ಪಟ್ಟಿ ಪ್ರಕಟ: ಅಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.12–ಚಿಂಚೋಳಿ ಶಿಶು ಅಭಿವೃದ್ಧಿ ಯೋಜನೆಯಲ್ಲಿ ಖಾಲಿ ಇರುವ 6 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 14 ಸಹಾಯಕಿಯರ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ, ದಿನಾಂಕ:09–05–2025 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆಯಲ್ಲಿ 6 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 12 ಸಹಾಯಕಿಯರ ಹುದ್ದೆಗಳಿಗೆ ಮಾತ್ರ ತಾತ್ಕಾಲಿಕವಾಗಿ ಆಯ್ಕೆ ಮಾಡಲಾಗಿದೆ ಎಂದು ಚಿಂಚೋಳಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

ಈ ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳ ಆಯ್ಕೆಪಟ್ಟಿಯನ್ನು ಚಿಂಚೋಳಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದ್ದು, ಈ ಕುರಿತು ಆಕ್ಷೇಪಣೆಗಳಿದ್ದಲ್ಲಿ ಸಂಬಂಧಪಟ್ಟ ಸೂಕ್ತ ದಾಖಲಾತಿಗಳೊಂದಿಗೆ ಖುದ್ದಾಗಿ 2025ರ ಮೇ 20 ರೊಳಗಾಗಿ ಚಿಂಚೋಳಿ ತಾಲೂಕಿನ ಚಂದಾಪೂರದ ಪಟೇಲ್ ಕಾಲೋನಿಯಲ್ಲಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕು. ಅವಧಿ ಮುಗಿದ ಮೇಲೆ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಅದೇ ರೀತಿ ಅಡಕಿಮೋಕ ತಾಂಡ ಮತ್ತು ಮೋಟಿಮೋಕ ತಾಂಡದ ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಬಂದ ಅರ್ಜಿಗಳು ಅನರ್ಹವಾದ ಕಾರಣ ಹುದ್ದೆಗಳಿಗೆ ಮರು ಪ್ರಕಟಣೆ ಮಾಡಲಾಗಿದೆ. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಚಿಂಚೋಳಿ ತಾಲೂಕಿನ ಚಂದಾಪೂರ ಪಟೇಲ್ ಕಾಲೋನಿಯಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ ಸಂಪರ್ಕಿಸಲು ಕೋರಲಾಗಿದೆ.

## ರಸ್ತೆ ಕಾಮಗಾರಿಗೆ ಶಾಸಕ ಮೇಟಿ ಭೂಮಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.12–ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಡಿ ಬಾಗಲಕೋಟೆಯಿಂದ ಸೀಗಿಕೇರಿ ನೀರಲಕೇರಿ ರಸ್ತೆ ಸುಧಾರಣೆ–ಯ 20 ಕೋಟಿ ರೂ.ವೆಚ್ಚದ ಕಾಮಗಾರಿಗೆ ಶಾಸಕ ಎಚ್.ವಾಯ್.ಮೇಟಿ ಭೂಮಿ ಪೂಜೆ ನೆರವೇರಿಸಿದರು.

ನಗರದ ಸಾನ್ವಿ ಹೋಂಡಾ ಬಳಿ ನಡೆದ ಕಾರ್ಯಕ್ರಮದಲ್ಲಿ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಹಳೇ ಎಪಿಎಂಸಿ ಸ್ಮಶಾನ ರಸ್ತೆಯನ್ನು 5 ಕೋಟಿ ರೂ.ವೆಚ್ಚದಲ್ಲಿ ಶೀಘ್ರವೇ ಅಭಿವೃದ್ಧಿಗೊಳಿಸಲಾಗುವುದು ಎಂದರು.

ರಾಜೀವಗಾಂಧಿ ವೈದ್ಯಕೀಯ ವಿಶ್ವವಿದ್ಯಾಲಯದ ಅಡಿಯಲ್ಲಿ ವೈದ್ಯಕೀಯ ಕಾಲೇಜಿನ ಅಡಿಗಲ್ಲು ಕಾರ್ಯಕ್ರಮ ಶೀಘ್ರದಲ್ಲಿ ನೆರವೇರಲಿದ್ದು, ಬಿಟಿಡಿಎ ವತಿಯಿಂದ 3 ನೇ ಯುನಿಟನಲ್ಲಿ 200 ಎಕರೆ ಪ್ರದೇಶವನ್ನು ವಾಣಿಜ್ಯ ಚಟುವಟಿಕೆಗೆ ಮೀಸಲಿಡಲಾಗಿದ್ದು ಭೂ ವರಿವರ್ತನೆಗೆ ಅನುಮತಿಯ ಸಿಕ್ಕಿದೆ ಎಂದು ಮೇಟಿ ಹೇಳಿದರು.

ಬಸವೇಶ್ವರ ಬ್ಯಾಂಕಿನ ಅಧ್ಯಕ್ಷ ಪ್ರಕಾಶ ತಪಶೆಟ್ಟಿ, ನಿಂಗನಗೌಡ ಪಾಟೀಲ, ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ನಾಗರಾಜ ಹದ್ಲಿ, ಎಸ್ಸಿ ಘಟಕದ ಜಿಲ್ಲಾಧ್ಯಕ್ಷ ರಾಜು ಮನ್ನಿಕೇರಿ, ಮುಖಂಡರಾದ ಚಂದ್ರಶೇಖರ ರಾಠೋಡ, ದ್ಯಾಮಣ್ಣ ಗಾಳಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಬ್ದುಲರಜಾಕ ಬೆಣ್ಣೂರ, ರೇಣುಕಾ ನ್ಯಾಮಗೌಡ, ಹನಮಂತ ರಾಕುಂಪಿ, ಮಂಜುಳಾ ಭೂಸಾರೆ, ರೇಣುಕಾ ನಾರಾಯಣಕರ, ವೀರೇಶ ಹುಂಡೇಕಾರ, ಅಂದಾನೆಪ್ಪ ಬ್ಯಾಡಗಿ ಅನೇಕರು ಇದ್ದರು.

## ಜನಗಣತಿ ಸಮೀಕ್ಷೆಗೆ ಹೆಚ್ಚಿನ ಸಿಬ್ಬಂದಿ ನಿಯೋಜಿಸಲು ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.12–ಒಳಮೀಸಲಾತಿ ಜಾರಿಗೆ ಸಂಬಂಧಿಸಿದಂತೆ ಮಾಡಲಾಗುತ್ತಿರುವ ಪರಿಶಿಷ್ಟ ಜಾತಿಯ ಜನಗಣತಿ ಸಮೀಕ್ಷೆಗೆ ಹೆಚ್ಚಿನ ಸಿಬ್ಬಂದಿ ನಿಯೋಜಿಸಬೇಕು ಎಂದು ಆಲ್ ಇಂಡಿಯಾ ಬಹುಜನ ಸಮಾಜ ಪಕ್ಷದ ರಾಜ್ಯ ಉಪಾಧ್ಯಕ್ಷ ವೈ.ಸಿ.ಕಾಂಬಳೆ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್‌ಸಿ ಕಾಲೋನಿಗಳಿದ್ದಲ್ಲಿ ಗಣತಿಗೆ ಸಿಬ್ಬಂದಿ ಹೆಚ್ಚಿಗೆ ನೀಡಲು ಸರ್ಕಾರ ಆದ್ಯತೆ ನೀಡಬೇಕು ಎಂದರು.

ಸಮೀಕ್ಷೆಯ ಸಂದರ್ಭದಲ್ಲಿ ಸುಳ್ಳುಹೇಳಿ ಕೆಲವರು ಎಸ್ಸಿ ಎಂದು ನಮೂದು ಮಾಡುತ್ತಿದ್ದು ಇದರ ಬಗ್ಗೆ ಅಧಿಕಾರಿಗಳು ಗಮನ ಹರಿಸಬೇಕು. ಸಮೀಕ್ಷೆ ದಿನಾಂಕ ಹೆಚ್ಚಿಸಬೇಕು ಎಂದರು. ಸಮೀಕ್ಷೆಯ ಸಂದರ್ಭದಲ್ಲಿ ಪದೇ ಪದೇ ಸರ್ವರ್ ಕೈ ಕೊಡುತ್ತಿದ್ದು ಇದರ ಬಗ್ಗೆ ಸರ್ಕಾರ ಒತ್ತು ಕೊಡಬೇಕು. ಹೆಚ್ಚಿನ ಮುತವರ್ಜಿ ವಹಿಸಿ ಸರಿಪಡಿಸುವ ಕೆಲಸ ಮಾಡಬೇಕು ಎಂದು ಆಗ್ರಹಿಸಿದರು.

ಸಂವಿಧಾನದನ್ವಯ ಸೌಲಭ್ಯ ಪಡೆದುಕೊಳ್ಳಲು ಮೀಸಲಾತಿ ಅವಶ್ಯವಿದ್ದು, ಸಮೀಕ್ಷೆಗೆ ಅಧಿಕಾರಿಗಳು ಬಂದಾಗ ಸಮಾಜ ಬಾಂಧವರು ಜಾತಿಯ ಬಗ್ಗೆ ಸರಿಯಾಗಿ ಮಾಹಿತಿ ನೀಡಬೇಕು ಎಂದರು. ಗುರುಶಾಂತಪ್ಪ ಮದಿನಕರ, ಮಂಜುನಾಥ ನಡುವಿನಮನಿ, ಅಶೋಕ ರಾಜಾಪುರ, ಶಂಕರ ಚಂದಾವರಿ, ನಾಗೇಶ ಚಂದಾವರಿ ಇದ್ದರು.

## ಇಂದಿನಿಂದ ಉಚಿತ ಧಾರ್ಮಿಕ ಶಿಕ್ಷಣ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.12–ಉತ್ತರಾದಿ ಮಠಾಧೀಶರಾದ ಶ್ರೀಸತ್ಯಾತ್ಮತೀರ್ಥಶ್ರೀಪಾದಂಗಳವರ ಆದೇಶದಂತೆ ನವನಗರದ ಶ್ರೀಮಠದ ಆವರಣದಲ್ಲಿ ಮೇ 13 ರಿಂದ ಮೇ20ರವರೆಗೆ ಉಚಿತ ಧಾರ್ಮಿಕ ಶಿಕ್ಷಣ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಪ್ರತಿದಿನ ಬೆಳಿಗ್ಗೆ 7 ರಿಂದ ಸಂಜೆ 6ವರೆಗೆ ಎಲ್ಲ ವಯಸ್ಸಿನ ವಟುಗಳಿಗಾಗಿ ಶಿಬಿರವನ್ನು ಏರ್ಪಡಿಸಲಾಗಿದೆ. ಮೇ 18ರ ರವಿವಾರ 8 ರಿಂದ 80 ವರ್ಷದೊಳಗಿನವರಿಗಾಗಿ ಒಂದು ದಿನದ ವಿಶೇಷ ಸಂಧ್ಯಾವಂದನೆ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

ಶಿಬಿರವನ್ನು ಬೆಂಗಳೂರಿನ ಶ್ರೀಪಾದ ಕೃಷ್ಣಮೂರ್ತಿ ನಡೆಸಿಕೊಡಲಿದ್ದು, ಹೆಚ್ಚಿನ ಮಾಹಿತಿಗಾಗಿ ಬಾಬುರಾವ್ ಜಂಬಗಿ 94835996083, ವಿನಾಯಕ ದೇಸಾಯಿ 9480588628 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

## ಲೋಪದೋಷ ಸರಿಪಡಿಸಿ ಗಣತಿ ಕಾರ್ಯ ನಡೆಸಲು ಮನವಿ

ಕಲಬುರಗಿ:ಮೇ.12: ರಾಜ್ಯದಲ್ಲಿ ಒಳಮೀಸಲಾತಿ ಪರಿಶಿಷ್ಟ ಜಾತಿ ಪರಿಶಿಷ್ಟ 101 ಜಾತಿಗಳ ಬಗ್ಗೆ ಸಾಮಾಜಿಕ ಶೈಕ್ಷಣಿಕ ಸರ್ವೆ ನಡೆಯುತ್ತಿದ್ದು ಇದರಲ್ಲಿ ಅನೇಕ ಲೋಪಗಳಿದ್ದು ಅವುಗಳನ್ನು ಸರಿಪಡಿಸಬೇಕೆಂದು ಜಿಲ್ಲಾ ಮಾದಿಗ ಸಂಘಟನೆಗಳ ಒಕ್ಕೂಟದಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈಗಾಗಲೇ ರಾಜ್ಯದಲ್ಲಿ ಒಳಮೀಸಲಾತಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಇವುಗಳ ಸಾಮಾಜಿಕ ಶೈಕ್ಷಣಿಕ ಗಣತಿ ಕಾರ್ಯಾ ಪ್ರಾರಂಭವಾಗಿದ್ದು ಸರ್ವೆ ಗಣಿತಿ ಕಾರ್ಯದಲ್ಲಿ ಶೇಕಡ 70% ರಷ್ಟು ಇಂಟರ್ನೆಟ್ ಆನ್ಲೈನ್ ಸರ್ವರ್ ಡೌನ್ ಆಗುತ್ತಿದೆ ಇದರಿಂದ ಗಣಿತಿ ಕಾರ್ಯಕ್ಕೆ ತೊಂದರೆ ಉಂಟಾಗುತ್ತಿದೆ. ಗಣಿತಿಗೆ ಬಂದಂತ ಸಾಹ ಶಿಕ್ಷಕರಿಗೆ ಹಾಗೂ

## ಸಂತೋಷವಾಗಿ ಬದುಕಲು ಜಗತ್ತಿನ ತಿಳುವಳಿಕೆ ಅಗತ್ಯ:ಗವಿಸಿದ್ದೇಶ್ವರ ಶ್ರೀಗಳು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.12–ಸಂತೋಷವಾಗಿ ಬದುಕಬೇಕು ಎನ್ನುವುದು ಎಲ್ಲರ ಅಪೇಕ್ಷೆಯಾಗಿದ್ದರೂ, ಹೇಗೆ ಬದುಕಿದರೆ ಸಂತೋಷವಾಗಿ ಇರಬಹುದು ಎನ್ನುವ ತಿಳುವಳಿಕೆಯ ಕೊರತೆಯಿಂದಾಗಿ ಮನುಷ್ಯ ದು:ಖಿತನಾಗುತ್ತಾನೆ ಎಂದು ಕೊಪ್ಪಳ ಗವಿಮಠದ ಪೂಜ್ಯ ಗವಿಸಿದ್ದೇಶ್ವರ ಸ್ವಾಮೀಜಿ ಹೇಳಿದರು.

ಸಮೀಪದ ಅಚನೂರ ಗ್ರಾಮದಲ್ಲಿ ಲಕ್ಷ್ಮೀನರಸಿಂಹೇಶ್ವರ ಜಯಂತಿ ಹಾಗೂ ಗ್ರಾಮದೇವತೆಯ ಉಡಿತುಂಬುವ ಕಾರ್ಯಕ್ರಮದ ಅಂಗವಾಗಿ ರವಿವಾರ ಸಂಜೆ ಏರ್ಪಡಿಸಿದ್ದ ಪ್ರವಚನ ಕಾರ್ಯಕ್ರಮದಲ್ಲಿ ಮಾತನಾಡಿದ ಶ್ರೀಗಳು, ಸಂತಸಮಯ ಬದುಕಿಗೆ ಕೇವಲ ಅನ್ನ, ನೀರು, ಬಟ್ಟೆ, ಆಶ್ರಯ ಬೇಕಿಲ್ಲ. ಬದಲಾಗುತ್ತಿರುವ ಜಗತ್ತಿನ ತಿಳುವಳಿಕೆ ಹೊಂದಿ ಇರುವುದನ್ನು ಒಪ್ಪಿಕೊಂಡು ಬದುಕಿದರೆ ಸಂತೋಷದ ಬದುಕು ಸಿಗುತ್ತದೆ ಎಂದರು.

ದೇವರು ಕೊಟ್ಟಿರುವ ನಿಸರ್ಗದಲ್ಲಿ ಎಲ್ಲವೂ ಇದೆ. ಬದುಕಿನಲ್ಲಿ ಬಡತನವಿರಲಿ, ಸೋಲಾಗಲಿ, ಅಪಮಾನ, ನಿಂದನೆಗಳು ಬರಲಿ ಅದಕ್ಕೆ ಚಿಂತಿತನಾಗದೇ ತಾಳ್ಮೆಯಿಂದಿದ್ದು, ತನಗೆ ಬಂದಿರುವ ಕಷ್ಟಗಳ ಕುರಿತು ಚಿಂತನೆ(ಆತ್ಮವಿಮರ್ಶೆ) ಮಾಡುತ್ತ, ದೇವರ ಇಚ್ಛೆಯಂತೆ



ಬಾಳುವೆ ಎನ್ನುವ ನಿರ್ಧಾರ ತೆಗೆದುಕೊಂಡರೆ ಆವಾಗ ಸುಂದರ ಬದುಕು ಪ್ರಾಪ್ತವಾಗುತ್ತದೆ ಎಂದ ಗವಿಸಿದ್ದೇಶ್ವರ ಶ್ರೀಗಳು, ತಾಳ್ಮೆ, ಸ್ವಾಧ್ಯಾಯ ಹಾಗೂ ಈಶ್ವರ ಪ್ರನಿದಾನ ಇವುಗಳನ್ನು ನೆನಪಿಸಿಕೊಂಡು ಬದುಕಿದರೆ ಜೀವನ ಸಂತೋಷವಾಗಿರುತ್ತದೆ ಎಂದು ಹೇಳಿದರು.

ತಾಳ್ಮೆ ಹೊಂದಿದವನೇ ನಿಜವಾದ ತಪಸ್ವಿ. ಜೀವನ ಅಂದ ಮೇಲೆ ಕಷ್ಟ, ಸು:ಖ ಬರುವುದೇ. ಶ್ರೀರಾಮಚಂದ್ರ, ಸತ್ಯಹರಿಶ್ಚಂದ್ರರಿಗೂ ಕಷ್ಟಗಳು ಬಂದವು. ಆದರೆ ಅವರೆಲ್ಲ ತಪಸ್ವಿಗಳಾಗಿ(ತಾಳ್ಮೆಯುಳ್ಳವರು) ಎಲ್ಲವನ್ನೂ ಸಹಿಸಿಕೊಂಡು ಬದುಕಿರುವುದು ನಮ್ಮ ಕಣ್ಮುಂದೆ ಇದೆ. ಹೀಗಿರುವಾಗ ದೇವರು ಕರುಣಿಸಿದ ಮನುಷ್ಯ ದೇಹಕ್ಕೆ ಎಷ್ಟೇ ಕಷ್ಟ ಬಂದರೂ ಸಹನಶೀಲತೆಯಿಂದ ದೇವಾ ನಿನ್ನಿಚ್ಛೆಯಂತೆ ಬದುಕುವೆ ಎಂಬ ಭರವಸೆಯಿಂದ ಬಾಳಿದರೆ ಸಂತೋಷದ ಬದುಕು ನಮ್ಮದಾಗುವುದು.

ಜಾತಿ, ಪಂಗಡ, ಪಕ್ಷ ಬೇಧ ಮರೆತು ಎಲ್ಲರೂ ಒಟ್ಟಾಗಿ ಹಳ್ಳಿಗಳ ಅಭಿವೃದ್ಧಿಗೆ ದುಡಿಯುವುದೇ ಹಳ್ಳಿಗಳ ವೈಭವ ಎಂದ ಪೂಜ್ಯರು, ಪ್ರತಿಯೊಬ್ಬರೂ ಜೀವನದಲ್ಲಿ ಬರುವ ಕಷ್ಟ, ಸು:ಖಗಳನ್ನು ಸಮನಾಗಿ ಸ್ವೀಕರಿಸಿ ತಾಳ್ಮೆಯಿಂದ ಜೀವನ ಮಾಡಬೇಕು. ಯಾರು ತಾಳ್ಮೆಯ ಗುಣ ಬೆಳೆಸಿಕೊಳ್ಳುತ್ತಾರೋ ಅವರೇ ತಪಸ್ವಿಗಳು ಎಂದರು.

ಮಕ್ಕಳಿಗೆ ಅಪಾರ ಸಂಪತ್ತು ಗಳಿಸಿಟ್ಟು ಹೋದವರು ನಿಜವಾದ ತಂದೆ ತಾಯಿಗಳಲ್ಲ. ಒಳ್ಳೆಯ ಸಂಸ್ಕಾರ ಕೊಟ್ಟು ಸಂತೋಷವಾಗಿ ಬದುಕಲು ಕಲಿಸಿಕೊಟ್ಟವರು ನಿಜವಾದ ತಂದೆ ತಾಯಿಗಳು.

## ಶಾಲೆ ಬಿಟ್ಟ ಮಕ್ಕಳನ್ನು ಮುಖ್ಯ ವಾಹಿನಿಗೆ ತನ್ನಿ:ಮೊಹ್ಮದ ಮೊಸಿನ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.12–ಶಾಲೆ ಬಿಟ್ಟ ಮಕ್ಕಳನ್ನು ಮುಖ್ಯವಾಹಿನಿಗೆ ತರುವ ಕಾರ್ಯವಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮೊಹ್ಮದ ಮೊಸಿನ್ ಸೂಚಿಸಿದರು.

ಜಿಲ್ಲಾ ಪಂಚಾಯತ್ ನೂತನ ಸಭಾಂಗಣದಲ್ಲಿ ಸೋಮವಾರ ಜರುಗಿದ ಪ್ರಥಮ ಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಪ್ರತಿಷ್ಠಿತ ಶಾಲೆಗಳಿಗೆ ಪ್ರವೇಶ ಪರೀಕ್ಷೆ ಮೂಲಕ ದಾಖಲಾದ ಬಡ ಮಕ್ಕಳು ಮುಂದೆ ಶಾಲೆಯ ಇತರ ಮಕ್ಕಳೊಂದಿಗೆ ಬೆರೆಯಲು ಹಿಂಜರಿದು ಶಾಲೆ ಬಿಟ್ಟ ವಿಷಯವನ್ನು ಮುಖ್ಯಮಂತ್ರಿಗಳು ಪ್ರಸ್ತಾಪಿಸಿದ್ದು, ಶಾಲೆ ಬಿಡುವ ಮಕ್ಕಳಿಗೆ ಸಮಾಲೋಚನೆ ಮತ್ತು ಇತರೆ ಚಟುವಟಿಕೆಗಳ ಮೂಲಕ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಕೆಲಸ ಮಾಡಿ ಎಂದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶದಲ್ಲಿ ಜಿಲ್ಲೆಯ ಸ್ಥಾನ ಕೂಡ ಕುಸಿತಗೊಂಡಿದೆ. ಈ ಹಿನ್ನಲೆಯಲ್ಲಿ ಕಳೆದ ಮೂರು ವರ್ಷದಿಂದ ಸತತವಾಗಿ ಕಡಿಮೆ ಫಲಿತಾಂಶವನ್ನು ಸಾಧಿಸಿರುವ ಜಿಲ್ಲೆಯ ಸರಕಾರಿ, ಖಾಸಗಿ ಅಥವಾ ಅನುದಾನಿತ ಶಾಲೆಯಾಗಿದ್ದರೂ ಕೂಡ ಆ ಶಾಲೆಗಳಿಗೆ ನೋಟಿಸ್ ನೀಡಿ ಕ್ರಮ ಕೈಗೊಳ್ಳಬೇಕು ಮತ್ತು ವಿಷಯವಾರು ಶಿಕ್ಷಕರಿಗೂ ಗೈಡ್ ಮಾಡಲು ಸೂಚಿಸಬೇಕು ಎಂದು ಅವರು ತಿಳಿಸಿದರು.

ವಿವಿಧ ಇಲಾಖೆಗಳ ಗುರಿ ಮತ್ತು ಸಾಧನೆ ಪರಿಶೀಲಿಸುತ್ತ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಡಿಯಲ್ಲಿ ಹೊಸ ಅಂಗನವಾಡಿ ಕಟ್ಟಡಗಳ ನಿರ್ಮಾಣ, ನಿವೇಶನ, ಪೋ–ಕ್ಸೋ ಹಾಗೂ ಮಹಿಳಾ ದೌರ್ಜನ್ಯ ಪ್ರಕರಣಗಳ ಅಂಕಿಅಂಶಗಳನ್ನು ಪರಿಶೀಲಿಸಿ ಪೋಕ್ಸೋ ಪ್ರಕರಣಗಳ ಸಂತ್ರಸ್ತರಿಗೆ ಪರಿಹಾರ ಧನ ವಿತರಿಸದೇ ಇರುವುದು ಸಾಕಷ್ಟು ಸಂಖ್ಯೆಯಲ್ಲಿ ಕಂಡು ಬರುತ್ತಿದ್ದು, ಸಂತ್ರಸ್ತರಿಗೆ ಈ ಕುರಿತು ಸೂಕ್ತ ತಿಳುವಳಿಕೆ ನೀಡಿ ಅವರಿಗೆ ಪರಿಹಾರ ಮೊತ್ತ ವಿತರಿಸುವ ಕಾರ್ಯ ಮಾಡಬೇಕು ಎಂದು ಮೊಸಿನ್ ಹೇಳಿದರು. ಮಾಜಿ ದೇವದಾಸಿಯರ ನಿವೇಶನ ಮಂಜೂರ ಮಾಡುವ ಕೆಲಸ ಕೂಡ ಹಾಗೇ ಇದ್ದು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಮಾಜಿ ದೇವದಾಸಿಯರಿಗೆ ಇರುವ ಯೋಜನೆಗಳನ್ನು ಕಾರ್ಯರೂಪಕ್ಕೆ ತರಬೇಕು ಎಂದರು.

ಆರೋಗ್ಯ ಇಲಾಖೆಯ ಬ್ಲಡ್ ಬ್ಯಾಂಕ್ ಶಿಬಿರಗಳಿಗೆ ಅನುಕೂಲವಾಗಲು ಸಂಚಾರಿ ಸೌಲಭ್ಯ ಒದಗಿಸಬೇಕು. ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳಿಗೆ ಹಾಸಿಗೆ ಪೂರೈಕೆ, ಅಟ್ರಾಸಿಟಿ ಪ್ರಕರಣಗಳ ಕುರಿತಂತೆ ಚರ್ಚಿಸಿದ ಅವರು ಸಿಂಧುತ್ವ ನೀಡುವ ಹಳೆಯ ಪ್ರಕರಣಗಳು ಬಾಕಿ ಇದ್ದಲ್ಲಿ ಅವುಗಳನ್ನೆಲ್ಲ ಶೀಘ್ರ ವಿಲೇವಾರಿ ಮಾಡಬೇಕು ಎಂದು ಹೇಳಿದರು. ಪಶು ಸಂಗೋಪನೆ, ಕೃಷಿ, ತೋಟಗಾರಿಕೆ, ರೇಷ್ಮೆ , ಅಲ್ಪಸಂಖ್ಯಾತರ ಕಲ್ಯಾಣ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅರಣ್ಯ, ಸಾಮಾಜಿಕ ಅರಣ್ಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸೇರಿ ವಿವಿಧ ಇಲಾಖೆಗಳ ಪ್ರಗತಿ ಕುರಿತು ಇಲಾಖೆ ಅಧಿಕಾರಿಗಳೊಂದಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಚರ್ಚಿಸಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ್ ರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶಶಿಧರ ಕುರೇರ ಸೇರಿ ಇತರರು ಇದ್ದರು.

## ಬುದ್ಧನ ಶಾಂತಿ ಸಂದೇಶಕ್ಕೆ ಜಗತ್ತೇ ಶರಣು: ಸವಿತಾ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.12–ಬುದ್ಧನ ಶಾಂತಿ ಸಂದೇಶಗಳಾದ ಪಂಚಶೀಲ ತತ್ವಗಳಿಗೆ ಜಗತ್ತೇ ಶರಣಾಗಿದೆ ಎಂದು ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆಣ್ಣವರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಭಗವಾನ್ ಬುದ್ಧನ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ವೈಭವದ ಜೀವನ ಕಂಡಿದ್ದ ಸಿದ್ಧಾರ್ಥ, ಪ್ರತಿಯೊಬ್ಬ ವ್ಯಕ್ತಿ ಬಾಲ್ಯ, ಯೌವನ, ಸಂಸಾರಿಕ ತಾಪತ್ರೆಯ, ಮುಪ್ಪು, ರೋಗ, ಸಾವನ್ನು ಕಂಡು ಶರೀರ ನಶ್ವರ ಅಂತ ತಿಳಿದು ವೈರಾಗ್ಯ ತಾಳಿ ಬೋಧಿವೃಕ್ಷದ ಕೆಳಗೆ ಧ್ಯಾನಾಸಕ್ತನಾಗಿ ಬುದ್ದನಾಗಿ ಹೊರಹೊಮ್ಮಿದ. ಬುದ್ಧನ ಸಂದೇಶಗಳು ಸರ್ವಕಾಲಕ್ಕೂ ದಾರಿದೀಪಗಳಾಗಿವೆ ಎಂದರು.

ಆಳಂದದ ಬಂತಅಮರ್ ಜ್ಯೋತಿಮಹಾರಾಜ ಮಾತನಾಡಿ, ಮನುಕುಲದ ಒಳಿತಿಗಾಗಿ ಶಾಂತಿ ತತ್ವಗಳನ್ನು ಭಗವಾನ್ ಬುದ್ಧ ನೀಡಿದ್ದಾನೆ. ಅವನ ದೃಷ್ಟಿಯಲ್ಲಿ ಐದು ತರದ ಜನರಿರುತ್ತಾರೆ ಎಂದ ಅವರು ಸದಾ ಕೆಟ್ಟ ಯೋಚನೆಗಳನ್ನು ಮಾಡುವ ಹಾಗೂ ತೊಂದರೆಯನ್ನು ಕೊಡುವ ಮನುಷ್ಯರಿಗೆ ಐವಾನ್ ಎಂದು, ಕೆಟ್ಟದ್ದನ್ನು ಮಾಡಿ ನಾನು ಮಾಡಿಲ್ಲ ಎಂದು ಸುಳ್ಳು ಹೇಳುವವನಿಗೆ ಸೈತಾನನೆಂದು ಸಮಾಜದಲ್ಲಿ ಸದಾ ಗದ್ದಲ ಸಂಘರ್ಷ ಮಾಡಿ ಹುಚ್ಚರಂತೆ ತಿರುಗಾಡುವವನನ್ನು ದಿವಾನನೆಂದು ಕರೆಯಲಾಗುತ್ತದೆ ಎಂದರು.

ಏನಾದರೂ ಆಗು ಮೊದಲು ಮಾನವನಾಗು. ಮಾನವೀಯತೆಗೆ ಆದ್ಯತೆ ನೀಡುವವನಿಗೆ ಇನ್ಸಾನ್ ಎಂದು ಕರೆಯಲ್ಪಟ್ಟು ಕೊನೆಗೆ ಜೀವಿತಾವಧಿಯಲ್ಲಿ ಹುಟ್ಟಿನಿಂದ ಸಾಯುವವರೆಗೂ ಒಂದೇ ಒಂದು ತಪ್ಪು ಮಾಡದವನಿಗೆ ಭಗವಾನನೆಂದು ಕರೆಯಲಾಗುತ್ತದೆ ಎಂದು ತಿಳಿಸಿದರು. ಆದ್ದ–ರಿಂದ ಭಗವಾನ್ ಬುದ್ಧ ತನ್ನ ಇಡೀ ಜೀವನದಲ್ಲಿ ಒಂದೇ ಒಂದು ತಪ್ಪು ಮಾಡದೆ ಭಗವಾನನಾಗಿದ್ದಾನೆ ಎಂದರು.

ಉಪನ್ಯಾಸ ನೀಡಿದ ಗದಗನ ಪಶು ವೈದ್ಯಕೀಯ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ಪಂಚಶೀಲ ಭುಜಂಗೆ, ಬುದ್ದನ ಪ್ರಮುಖ ನುಡಿಯಾದ ಬುದ್ಧಂ, ಶರಣಂ ಗಚ್ಛಾಮಿ ಎಂಬುದಾಗಿದ್ದು, ಪ್ರತಿಯೊಬ್ಬರೂ ಸ್ವಾವಲಂಬಿಗಳಾಗಬೇಕು. ನಾನು ಕೇವಲ ನಿಮಗೆ ಮಾರ್ಗ ತೋರಿಸುತ್ತೇನೆ. ಸಾಧಿಸುವುದು, ಬಿಡುವುದು ನಿಮಗೆ ಬಿಟ್ಟದ್ದು. ಇದರ ಅರ್ಥ ಪಂಚಶೀಲಗಳಾದ ಪ್ರಾಣಿಹತ್ಯೆ, ಕಳ್ಳತನ ಮತ್ತು ಮೋಸತನ, ಸುಳ್ಳು ಮಾತನಾಡುವುದು, ಮದ್ಯವ್ಯಸನಿ ಏಕಪತ್ನಿ ವ್ರತಸ್ಥ ಮುಂತಾದವುಗಳನ್ನು ಪಾಲಿಸಿ ಪ್ರತಿಯೊಬ್ಬರು ಮುಕ್ತರಾಗಬೇಕೆಂಬುದು ಬುದ್ದನ ಸಂದೇಶವಾಗಿದೆ ಎಂದರು.

ಕಾರ್ಯಕ್ರಮದ ಪೂರ್ವದಲ್ಲಿ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಬುದ್ಧನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪ ಅರ್ಪಿಸಿದರು. ಜಿಲ್ಲಾ ಪಂಚಾಯತ ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ, ಸಮುದಾಯದ ಮುಖಂಡ ಶಾಮಸುಂದರ ಕಾಂಬಳೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಜೈನಾಪೂರ ಸ್ವಾಗತಿಸಿದರು. ಶಂಕರಲಿಂಗ ದೇಸಾಯಿ ಕಾರ್ಯಕ್ರಮ ನಿರೂಪಿಸಿದರು.

# ಜಿಲ್ಲಾಡಳಿತ ಭವನದಲ್ಲಿ ಮಾಕ್ ಡ್ರೀಲ್:ಮೊಳಗಿದ ಸೈರನ್

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.12–ಯುದ್ಧ ಸನ್ನಿವೇಶ ಹಾಗೂ ತುರ್ತು ಪರಿಸ್ಥಿತಿ ಸಂದರ್ಭಗಳಲ್ಲಿ ಸಾರ್ವಜನಿಕರು ವಹಿಸಬೇಕಾದ ಮುನ್ನಚ್ಚರಿಕೆ ಕುರಿತಾಗಿ ಜಿಲ್ಲಾಡಳಿತ ಭವನದ ಆವರಣದಲ್ಲಿ ಸೋಮವಾರ ನಾಗರಿಕ ಸುರಕ್ಷತಾ ಅಣಕು ಕಾರ್ಯಾಚರಣೆ ನಡೆಸಲಾಯಿತು.

ಜಿಲ್ಲಾಡಳಿತ ಭವನದಲ್ಲಿ ಬೆಳಿಗ್ಗೆ 9 ಗಂಟೆಗೆ ವಿವಿಧೆಡೆ ಸ್ಫೋಟಗೊಂಡ ಡಮ್ಮಿ ಬುಲೆಟ್‌ಗಳ ಸದ್ದು ಕೇಳಿದ ತಕ್ಷಣ ಆಡಳಿತ ಭವನದಲ್ಲಿರುವ ಅಧಿಕಾರಿ ಹಾಗೂ ಸಿಬ್ಬಂದಿಗಳು ಗಾಬರಿಗೊಂಡು ಓಡುತ್ತಿರುವುದು, ಉಗ್ರಗಾಮಿಗಳು ಆಡಳಿತ ಭವನ ಪ್ರವೇಶ ಮಾಡಿರುವ ಮಾಹಿತಿಯನ್ನು ಪೊಲೀಸ್ ಕಂಟ್ರೋಲ್ ರೂಮ್‌ಗೆ ಸಂದೇಶ ರವಾನೆಯಾಯಿತು. ಆ ವೇಳೆಗಾಗಲೇ ಬಾಂಬ್ ಸ್ಫೋಟಗೊಂಡು ಹಲವು ವ್ಯಕ್ತಿಗಳು ಮೃತಪಟ್ಟಿರುವ ಸನ್ನವೇಶ ಉಂಟು ಮಾಡಲಾಯಿತು. ಈ ವೇಳೆ ರಕ್ಷಣಾ ಕಾರ್ಯ ವಿಳಂಬವಿಲ್ಲದೇ ನಡೆಯಿತು.



ಕಾರ್ಯಾಚರಣೆಗೆ ಪೊಲೀಸ್, ಅಗ್ನಿಶಾಮಕ ದಳ, ಗೃಹರಕ್ಷಕ ದಳ, ಸಂಚಾರಿ ಪೊಲೀಸ್, ಎನ್.ಸಿ.ಸಿ ಕಮಾಂಡ ತಂಡ ಧಾವಿಸಿ ರಕ್ಷಣಾ ಕಾರ್ಯ ಆರಂಭಿಸಿದರು. ಆರೋಗ್ಯ ಇಲಾಖೆಯ ಅಂಬುಲೆನ್ಸ್ ಸ್ಥಳಕ್ಕೆ ಆಗಮಿಸುತ್ತಿದ್ದಂತೆ ಗಾಯಾಳುಗಳನ್ನು ರಕ್ಷಣೆ ಮಾಡಿದರು. ಆಡಳಿತ ಭವನದಲ್ಲಿ ರಕ್ಷಣೆ ತಂಡ ಸುತ್ತುವರೆದಿರುವ ಸನ್ನಿವೇಶ, ಭವನದಲ್ಲಿ ಅಡಗಿಕೊಂಡಿರುವ ಉಗ್ರರನ್ನು ಸದೆಬಡೆದು ಜನರನ್ನು ರಕ್ಷಿಸುವ ಅಣಕು ಪ್ರಾತ್ಯಕ್ಷಿಕೆಯ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲಾಯಿತು. ತುರ್ತು ಪರಿಸ್ಥಿತಿಯಲ್ಲಿ ಸೈರನ್‌ಗಳು ಮೊಳಗಿಸಿರುವ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಸೈರನ್ ಮೊಳಗಿದಾಗ ನಾಗರಿಕರು ಹೇಗೆ ಪ್ರತಿಕ್ರಿಯಿಸಬೇಕು. ಬಾಂಬ್ ಸ್ಫೋಟವಾದರೆ ಏನು ಮಾಡಬೇಕು. ಅವಶೇಷಗಳಡಿ ಸಿಲುಕಿರುವವರನ್ನು ಹೇಗೆ ರಕ್ಷಿಸಬೇಕು. ವೈದ್ಯಕೀಯ ತುರ್ತು ಸೇವೆಗಳನ್ನು ಒದಗಿಸುವುದು ಹೇಗೆ ಎಂಬುದನ್ನು ಅಣಕು ಪ್ರದರ್ಶನದ ಮೂಲಕ ತಿಳಿಸಿಕೊಡಲಾಯಿತು.

ಜಿಲ್ಲಾಡಳಿತ ಭವನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂದರ್ಭದಲ್ಲಿಯೇ ಇಂತಹದೊಂದು ಅಣಕು ಪ್ರದರ್ಶನ ನಡೆದ ಹಿನ್ನಲೆಯಲ್ಲಿ ದಾಳಿ ನಡೆದ ಸಂದರ್ಭದಲ್ಲಿ ಆಡಳಿತ ಭವನದಲ್ಲಿರುವ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ಸುರಕ್ಷಿತವಾಗಿ ಹೊರಗೆ ಕರೆದುಕೊಂಡು ಹೋಗುವ ದೃಶ್ಯ ನಂತರ ಅಲ್ಲಿನ ಕಾರ್ಯಾಚರಣೆ ಸನ್ನಿವೇಶಗಳನ್ನು ಕುತೂಹಲದಿಂದ ವೀಕ್ಷಣೆ ಮಾಡಿದರು.

ಅಣಕು ಪ್ರದರ್ಶನದಲ್ಲಿ ಪೊಲೀಸ್, ಗೃಹರಕ್ಷಕ ದಳ, ಅಗ್ನಿಶಾಮಕ ದಳ, ಬಾಂಬ್ ನಿಷ್ಕ್ರೀಯ ದಳ, ಸ್ವಾನಗಳ ತಂಡ, ಸಂಚಾರಿ ಪೊಲೀಸ್, ಎನ್.ಸಿ.ಸಿ ಕಮಾಂಡರ ಹಾಗೂ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಸೇರಿ 300ಕ್ಕೂ ಹೆಚ್ಚು ಜನ ಪಾಲ್ಗೊಂಡಿದ್ದರು.

ಈ ವೇಳೆಯಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮೊಹಮ್ಮದ ಮೊಹಸಿನ್, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿ.ಪಂ ಸಿಇಓ ಶಶಿಧರ ಕುರೇರ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರಸನ್ನ ದೇಸಾಯಿ, ಮಹಾಂತೇಶ್ವರ ಜಿದ್ದಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

# ನೂರು ಅಪಘಾತಗಳಲ್ಲಿ ನನ್ನೊಂದು ಎಂಬ ಭಾವನೆ ಬೇಡ: ಚಾಲನಾ ಸಿಬ್ಬಂದಿಗೆ ಸಚಿವ ರಾಮಲಿಂಗಾರೆಡ್ಡಿ ಎಚ್ಚರಿಕೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ನಾನು ಈ ಬಗ್ಗೆ ತುಂಬಾ ತೀಕ್ಷ್ಣವಾಗಿ ಪ್ರತಿಕ್ರಿಯಿಸಲು ಕಾರಣ, ಇತ್ತೀಚಿನ ದಿನಗಳಲ್ಲಿ ಅಪಘಾತದ ಬಗ್ಗೆ ಭಯ ಮತ್ತು ಸಂವೇದನಾ ಶೀಲತ ಇಲ್ಲದಂತಾಗಿರುವುದು. ನೂರು ಅವವಾತಗಳಲ್ಲಿ ನನ್ನದೊಂದು ಎಂಬ ಅಸಹನೀಯ ಭಾವನೆ ಚಾಲನಾ ಸಿಬ್ಬಂದಿಗಳಲ್ಲಿ ಇರಬಾರದು ಎಂಬುದಾಗಿ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಚಾಲನಾ ಸಿಬ್ಬಂದಿಗಳಿಗೆ ಎಚ್ಚರಿಸಿದರು.

ಇಂದು ನೂತನವಾಗಿ ಆಯ್ಕೆಯಾದಂತ 2,286 ಬಿಎಂಟಿಸಿ ನಿರ್ವಾಹಕರಿಗೆ ನೇಮಕಾತಿ ಆದೇಶ ಪತ್ರವನ್ನು ವಿತರಿಸಿ ಮಾತನಾಡಿದಂತ ಅವರು, ಅಪಘಾತಗಳಿಗೆ ಕಾರಣರಾದ ಸಂಬಂಧಪಟ್ಟ ಹಿರಿಯ ಅಧಿಕಾರಿಗಳ ಮೇಲೆ ನಿರ್ದಾಕ್ಷಿಣ್ಯವಾಗಿ ಶಿಸ್ತಿನ ಕ್ರಮ ಕೈಗೊಳ್ಳುವುದಾಗಿ ಖಡಕ್ ಎಚ್ಚರಿಕೆ ನೀಡಿದರು.




ಕಳೆದ 15 ದಿವಸಗಳ ಹಿಂದೆ ಅಪಘಾತದಲ್ಲಿ ಕಾಲು ಕಳೆದುಕೊಂಡ ಚಾಲನಾ ಸಿಬ್ಬಂದಿಯೊಬ್ಬರಿಗೆ ರೂ.25 ಲಕ್ಷ ಪರಿಹಾರ ಹಣವನ್ನು ನಾವು ನೀಡುವಾಗ ನನಗೆ ಅರ್ಥವಾಗಿದ್ದು ಒಂದೇ ವಿಷಯ, ಯಾವುದೇ ಆರ್ಥಿಕ ಸೌಲಭ್ಯವು ಆ ಸಿಬ್ಬಂದಿಗೆ ತನ್ನ ಹಿಂದಿನ ಸಂತೋಷದ ಜೀವನ ತಂದುಕೊಡುವುದಿಲ್ಲ. ಬೇರೆಯವರನ್ನು ನೋಡಿದಾಗ ಅವನಿಗಾಗುವ ಮಾನಸಿಕ ವೇದನೆ ಪದಗಳಲ್ಲಿ ವಿವರಿಸಲು ಸಾಧ್ಯವಿಲ್ಲ ಎಂದು ಹೇಳಿದರು.

ಬಸ್ಸು ರಸ್ತೆಯಲ್ಲಿ ಸಂಚರಿಸುವ ದೊಡ್ಡ ವಾಹನ ಆದ್ಯರಿಂದ ನಮ್ಮ ಚಾಲಕರು ಮತ್ತಷ್ಟು ತಾಳ್ಮೆ ಜಾಗ್ರತೆ ಮತ್ತು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಬೇಕು ನಿರ್ವಾಹಕರು ಚಾಲಕರಿಗೆ ವೇಗ ತಗ್ಗಿಸಲು, ಜಾಗ್ರತೆ ವಹಿಸಲು ಮನವರಿಕೆ ಮಾಡಿಕೊಡಬೇಕು. ಕೆಲ ಸಂದರ್ಭಗಳಲ್ಲಿ ಬಸ್ಸುಗಳ ಅಪಘಾತಕ್ಕೆ ಬಸ್ಸುಗಳ ಸ್ಥಿತಿಗತಿಗಳು/ತಾಂತ್ರಿಕ ದೋಷಗಳು ಕಾರಣವಿರಬಹುದು. ಆ ನಿಟ್ಟಿನಲ್ಲಿಯೂ ನಾವು ಗಮನವಹಿಸಬೇಕು ತಾಂತ್ರಿಕ ಇಲಾಖೆಯ ಅಧಿಕಾರಿಗಳು ಮೇಲ್ವಿಚಾರಕ ಸಿಬ್ಬಂದಿಗಳ ಆಜಾಗರೂಕ, ನಿರ್ಲಕ್ಷತೆ ಕಾರಣವಾಗಿರುತ್ತದೆ ಎಂದರು.

ಇನ್ಮುಂದೆ ಅಪಘಾತಗಳ ಬಗ್ಗೆ ಕೂಲಂಕುಷವಾಗಿ ಪರಿಶೀಲನೆ ನಡೆಸಿ, ತಪ್ಪಿತಸ್ಥರ ಮೇಲೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳದೆ ಅನ್ಯ ಮಾರ್ಗವಿಲ್ಲದಂತಾಗಿದೆ. ಅಪಘಾತಗಳನ್ನು ತಗ್ಗಿಸಲು ಕಠಿಣ ಕ್ರಮಗಳನ್ನು ಸಹ ಕೆಲವೊಮ್ಮೆ ಜಾರಿಗೊಳಿಸುವುದು ಪ್ರಯಾಣಿಕರ ಹಿತದೃಷ್ಟಿಯಿಂದ ಅಗತ್ಯವಾಗಿರುತ್ತದೆ. ಅಪಘಾತಗಳು ಆಕಸ್ಮಿಕವೇ ಆದರೂ ಅದನ್ನು ತಡೆಗಟ್ಟಲು ಎಲ್ಲಾ ರೀತಿಯ ಕ್ರಮಗಳನ್ನು ತೆಗೆದುಕೊಳ್ಳುವುದು ನಮ್ಮ ಆದ್ಯ ಕರ್ತವ್ಯವಾಗಿದೆ ಎಂದು ತಿಳಿಸಿದರು.



ಹುಮನಾಬಾದ್ ಪಟ್ಟಣದ ಸಾರಿಗೆ ಸಂಸ್ಥೆ ಕಚೇರಿಯಲ್ಲಿ ಸೋಮವಾರ ಬುದ್ಧ ಪೂರ್ಣಿಮೆ ಅದ್ದೂರಿಯಾಗಿ ಜರುಗಿತು. ವ್ಯವಸ್ಥಾಪಕ ಹಣಮಂತಪ್ಪ, ಕೈಲಾಸ ಮೇಟಿ, ರಾಜಪ್ಪ ಪಡಶಟ್ಟಿ, ವಿನೋದ, ಶಿವಬಸಪ್ಪ ಪಾಟೀಲ್, ಬಸವಂತಪ್ಪ ರೆಡ್ಡಿ, ರಾಜಕುಮಾರ ವರ್ಮಾ, (ಮಲ್ಲಮ್ಮ ನುಡಿ ಚಿತ್ರ).

# ವಿದ್ಯಾರ್ಥಿಗಳ ಬೆಳವಣಿಗೆಗೆ ಎನ್ ಎಸ್ ಎಸ್ ಅವಶ್ಯಕ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಇಂದಿನ ಸ್ಪರ್ಧಾತ್ಮಕ ಯುಗದ ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ ರಾಷ್ಟ್ರೀಯ ಸೇವಾ ಯೋಜನೆ ಶಿಬಿರ ಅವಶ್ಯಕವಾಗಿದೆ ಎಂದು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾ ಅಧಿಕಾರಿ ದೀಪಿಕಾ ನಾಯ್ಕರ್ ಹೇಳಿದರು.

ತಾಲೂಕಿನ ಮಾಣಿಕ ನಗರ ಗ್ರಾಮದ ಐತಿಹಾಸಿಕ ಮಾಣಿಕಪ್ರಭು ಸಂಸ್ಥಾನದ ಮಾಣಿಕ ವಿದ್ಯಾಲಯದ ಆವರಣದಲ್ಲಿ ಸರಕಾರಿ ಪ್ರಥಮ ದರ್ಜೆ ಕಾಲೇಜು ಹುಮನಾಬಾದ್ ವತಿಯಿಂದ ನಡೆದ ರಾಷ್ಟ್ರೀಯ ಸೇವಾ ಯೋಜನೆ ಶಿಬಿರದ ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಿದರು.

ರಾಷ್ಟ್ರೀಯ ಸೇವಾ ಯೋಜನೆ ದೇಶಾದ್ಯಂತ ಕಾಲೇಜುಗಳಲ್ಲಿ ವ್ಯಾಪಕವಾಗಿ ಗುರುತಿಸಲ್ಪಟ್ಟ ಮತ್ತು ಪ್ರಭಾವಶಾಲಿ ಯುವ ಕೇಂದ್ರಿತ ಕಾರ್ಯಕ್ರಮವಾಗಿದೆ. ಸ್ವಯಂಸೇವಕ ಸಮುದಾಯ ಸೇವೆಯ ಮೂಲಕ ವಿದ್ಯಾರ್ಥಿ ಯುವಕರ ಪಾತ್ರ ಮತ್ತು ವ್ಯಕ್ತಿತ್ವವನ್ನು ಬೆಳೆಸುವ ಪ್ರಾಥಮಿಕ ಗುರಿಯನ್ನು ಹೊಂದಿದೆ ಎಂದರು.

ಪ್ರಾಧ್ಯಪಕ ಡಾ. ವೀರಣ್ಣ ತುಪ್ಪದ್ ಮಾತನಾಡಿ, ನಾಗರಿಕ ಯುಗದಲ್ಲಿ ವಿದ್ಯಾರ್ಥಿಗಳು ಶಿಸ್ತು, ಸಂಯಮದಿಂದ ವರ್ಗಕ್ಕೆ ಹಾಜರಾಗಬೇಕು. ಅಲ್ಲಿ ಬೋಧಕರು ಹೇಳಿರುವ ಪಾಠ ಪ್ರವಚನ ಚಿತ್ತವಿಟ್ಟು ಕೇಳಿಕೊಂಡು ಮನೆಯಲ್ಲಿ ಮತ್ತೊಮ್ಮೆ ಅಭ್ಯಾಸ ಮಾಡುವ ಮೂಲಕ ಜೀವನದಲ್ಲಿ ಉತ್ತಮ ಸಾಧನೆ ಮಾಡಬೇಕು ಎಂದು ಸಲಹೆ ನೀಡಿದರು.

ಪ್ರಾಂಶುಪಾಲರಾದ ಅಪರ್ಣಾ ಶಟ್ಟಿ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆ ಶಿಬಿರ ನಮ್ಮ ವಿದ್ಯಾರ್ಥಿಗಳಲ್ಲಿ ನಾಗರಿಕ ಒಳಗೊಳ್ಳುವಿಕೆ, ಸಾಮಾಜಿಕ ಜವಾಬ್ದಾರಿ ಮತ್ತು ವೈಯಕ್ತಿಕ ಬೆಳವಣಿಗೆ ಪ್ರೋತ್ಸಾಹಿಸುವ ವೇದಿಕೆಯಾಗಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದು-ಕೊಂಡು ಉತ್ತಮ ಸಾಧನೆ ಮಾಡುವ ಮೂಲಕ ಕಲಿತ ಕಾಲೇಜಿಗೆ ತಮ್ಮ ಗ್ರಾಮಕ್ಕೆ ಕೀರ್ತಿ ತರಬೇಕು ಎಂದರು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿ ಡಾ. ಶಾಂತಕುಮಾರ ಬನಗುಂಡಿ, ಘಟಕ ಅಧಿಕಾರಿ ಶಿವಾಜಿ ರಾಠೋಡ, ರಜನಿ ಮುರಳಿ ಕೃಷ್ಣ, ಡಾ. ಅರುಣಕುಮಾರ ಚಂದನ್, ರಹೀನಾ ಬೇಗಂ, ವಿಶಾಲ ಸ್ವಾಮಿ, ಪ್ರಕಾಶ ಶೇಡೋಳ್ಕರ್, ಮಹೇಶ ಸಿದ್ದಗೊಂಡ, ಮಹೇಶ ಶೇಡೋಳ್ಕರ್ ಇದ್ದರು. ವಿಶಾಲ ಸ್ವಾಮಿ ಸ್ವಾಗತಿಸಿದರು. ಡಾ. ಪ್ರಹ್ಲಾದ್ ಚಂಗಟೆ ನಿರೂಪಿಸಿದರು. ಶಿವಾಜಿ ರಾಠೋಡ ವಂದಿಸಿದರು.

# ವಿಶ್ವಕ್ಕೆ ಭಗವಾನ ಬುದ್ಧರ ಕೊಡುಗೆ ಅನನ್ಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಅಹಿಂಸೆ, ಶಾಂತಿ ಸಂದೇಶದ ಮೂಲಕ ವಿಶ್ವಕ್ಕೆ ಭಗವಾನ್ ಬುದ್ಧ ನೀಡಿರುವ ಕೊಡುಗೆ ಅನನ್ಯ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಹೇಳಿದರು.

ಪಟ್ಟಣದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಯಲ್ಲಿ ಸೋಮವಾರ ಆಯೋಜಿಸಿದ್ದ ಭಗವಾನ ಬುದ್ಧರ ಜಯಂತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಬೌದ್ಧ ಧರ್ಮದ ತತ್ವಗಳು ಇಂದಿನ ಪೀಳಿಗೆಗೆ ಅಂತ್ಯಂತ ಅವಶ್ಯವಾಗಿವೆ. ಎಲ್ಲರಿಗೂ ಸಮಾನತೆ ನೀಡಿದ ಏಕೈಕ ಧರ್ಮ ಬೌದ್ಧ ಧರ್ಮವಾಗಿದೆ. ಹೀಗಾಗಿ ಎಲ್ಲರೂ ಬುದ್ಧರ ಆದರ್ಶಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರಸ್ ಸಮಿತಿ ಅಧ್ಯಕ್ಷ ಅಫ್ಸರಮಿಯ, ಪಿಎಲ್ಡಿ ಬ್ಯಾಂಕ್ ಅಧ್ಯಕ್ಷ ಮಲ್ಲಿಕಾರ್ಜುನ್ ಮಾಳಶಟ್ಟಿ, ಶ್ರೀಮಂತ ಪಾಟೀಲ್, ಉಮೇಶ ಜಮಗಿ, ಓಂಕಾರ ತುಂಬಾ, ಮಲ್ಲಿಕಾರ್ಜುನ್ ಮಹೇಂದ್ರಕರ್, ಕಟ್ಟಿಮನಿ, ಸುರೇಶ ಘಾಂಗ್ರೆ, ಲಕ್ಷ್ಮಿಪುತ್ರ ಮಾಳಗೆ, ನೀಲಕಂಠ ಶಟ್ಟಿ, ರಾಹುಲ್ ಉದ್ದಾ, ಸಂತೋಷ ಅತಿವಾಳೆ, ವಿಜಯಕುಮಾರ, ಮಲ್ಲಿಕಾರ್ಜುನ್ ಶರ್ಮಾ ಸೇರಿ ಅನೇಕರಿದ್ದರು.

# ಭಗವಾನ್ ಬುದ್ಧರ ಸಂದೇಶ ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ನಾಗರಿಕ ಜಗತ್ತಿನ ಸುಧಾರಣೆಗೆ ಬೋಧಿ ಸತ್ವ, ಭಗವಾನ ಬುದ್ಧರ ಸಂದೇಶಗಳು ಅಗತ್ಯ ಎಂದು ತಹಸೀಲ್ದಾರ್ ಅಂಜುಮ್ ತಬಸುಮ್ ಹೇಳಿದರು.

ಪಟ್ಟಣದ ತಹಸೀಲ್ ಕಚೇರಿಯಲ್ಲಿ ತಾಲೂಕು ಆಡಳಿತ ವತಿಯಿಂದ ಸೋಮವಾರ ಆಯೋಜಿಸಿದ್ದ ಗೌತಮ್ ಬುದ್ಧರ ಜಯಂತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಬುದ್ಧ, ಬಸವ, ಅಂಬೇಡ್ಕರ್ ಎಲ್ಲರ ಆಶಯ ಹಾಗೂ ಚಿಂತನೆಗಳು ಒಂದೇ ಆಗಿದ್ದು, ಅದರ ಮೂಲಕ ಸಮ ಸಮಾಜ ಸ್ಥಾಪಿಸುವ ಗುರಿಯನ್ನು ಹೊಂದಿದ್ದರು. ಆದ್ದರಿಂದ ಇಂದಿನ ಯುವಕ ಯುವತಿಯರು ಅವರ ಆದರ್ಶಗಳು ಮೈಗೂಡಿಸಿಕೊಂಡು ಸಮ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದರು.

ತಾಪಂ. ಇಒ ದೀಪಿಕಾ ನಾಯ್ಕರ್, ಧರ್ಮರಾಯ ಘಾಂಗ್ರೆ, ಸುಭಾಷ ಆರ್ಯ, ಲಕ್ಷ್ಮಿಪುತ್ರ ಮಾಳಗೆ, ಶಿವಪುತ್ರ ಮಾಳಗೆ, ಮಲ್ಲಿಕಾರ್ಜುನ್ ಶರ್ಮಾ, ಅರವಿಂದ ಮಾಶಟ್ಟಿ, ಗೌತಮ್ ಮೇಟಿ, ಶ್ರೀಧರ ಹಿರೇಮನಿ, ಗಣಪತಿ ಅಷ್ಟೂರೆ, ಮನೋಜ ಜಾನವೀರ್, ರಾಹುಲ್ ಹುದ್ದಾ ದುಬಲಗುಂಡಿ ಸೇರಿ ಅನೇಕರಿದ್ದರು.

# ಕಾಮ್ರೆಡ್ ಕೆ.ವಿಕ್ರಮ್ ರಾವ್ ನಿಧನಕ್ಕೆ ಕೆಯುಡಬ್ಲ್ಯೂಜೆ ಸಂತಾಪ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ (ಐಈಘಎ) ರಾಷ್ಟ್ರೀಯ ಅಧ್ಯಕ್ಷರಾದ ಕೆ. ವಿಕ್ರಂರಾವ್ (82) ಅವರು ಇಂದು ಬೆಳಿಗ್ಗೆ ಉತ್ತರ ಪ್ರದೇಶದ ಲಕ್ನೋ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.

ಭಾರತೀಯ ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ರಾಷ್ಟ್ರೀಯ ಅಧ್ಯಕ್ಷರಾಗಿ ಕಳೆದ ಮೂರು ದಶಕ ಗಳಿಂದ ಸೇವೆ ಸಲ್ಲಿಸಿದ್ದ ವಿಕ್ರಂ ರಾವ್ ಅವರ ನೇತೃತ್ವದಲ್ಲಿ ಶ್ರೀ ಕ್ಷೇತ್ರ ಶ್ರವಣಬೆಳಗೊಳ ಮತ್ತು ಶ್ರೀ ಕ್ಷೇತ್ರ ಆದಿಚುಂಚನಗಿರಿಯಲ್ಲಿ ರಾಷ್ಟ್ರೀಯ ಪತ್ರಕರ್ತರ ಸಮ್ಮೇಳನವನ್ನು ಆಯೋಜಿಸಲಾಗಿತ್ತು.

ರಾಷ್ಟ್ರ ಮಟ್ಟದಲ್ಲಿ ಗ್ರಾಮೀಣ ಪತ್ರಕರ್ತರನ್ನು ಸಂಘಟಿಸಿ ಯಶಸ್ವಿಯಾಗಿದ್ದ ವಿಕ್ರಮ್ ರಾವ್ ಅವರು ಪತ್ನಿ ಇಬ್ಬರು ಪುತ್ರರನ್ನು ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಕೆಯುಡಬ್ಲ್ಯೂಜೆ ಸಂತಾಪ:

ಭಾರತೀಯ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಸುಧೀರ್ಘ ಅವಧಿಗೆ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದ ಹಿರಿಯ ಪತ್ರಕರ್ತರಾದ ಕೆ.ವಿಕ್ರಮರಾವ್ ಅವರ ನಿಧನಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ತೀವ್ರ ಸಂತಾಪ ವ್ಯಕ್ತಪಡಿಸಿದೆ. ಪತ್ರಕರ್ತರ ಸಂಘಟನೆಗಾಗಿ ಅವರು ಮಾಡಿದ ಸೇವೆಯು ಅನನ್ಯವಾದದ್ದು ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಸ್ಮರಿಸಿದ್ದು, ಅವರ ಆತ್ಮಕ್ಕೆ ಶಾಂತಿ ಕೋರಿದ್ದಾರೆ.

**ಸಂತಾಪ:**

ಸುಧೀರ್ಘ ಅವಧಿಗೆ ಐಈಘಎ ಅಧ್ಯಕ್ಷರಾಗಿದ್ದ ವಿಕ್ರಮ್ ರಾವ್ ಅವರ ನಿಧನದಿಂದ ಪತ್ರಕರ್ತರ ಸಂಘಟನೆಯ ಪ್ರಮುಖ ಹಿರಿಯ ಕೊಂಡಿಯೊಂದು ಕಳಚಿದಂತಾಗಿದೆ ಎಂದು ಐಈಘಎ ಅಧ್ಯಕ್ಷ ಬಿ.ವಿ.ಮಲ್ಲಿಕಾರ್ಜುನಯ್ಯ ಮತ್ತು ಅಪರ ಪ್ರಧಾನ ಕಾರ್ಯದರ್ಶಿ ಎಚ್.ಬಿ ಮದನಗೌಡ ಅವರು ಸಂತಾಪ ವ್ಯಕ್ತಪಡಿಸಿದ್ದು, ಅವರ ಆತ್ಮಕ್ಕೆ ಚಿರಶಾಂತಿ ಕೋರಿದ್ದಾರೆ.

# ಬೀದರ್‌ನಲ್ಲಿ ಗುಡುಗು ಸಹಿತ ಬಿರುಸಿನ ಮಳೆ

ಮಲ್ಲಮ್ಮ ನುಡಿ ವಾರ್ತೆ

ನಗರ ಸೇರಿದಂತೆ ಗ್ರಾಮೀಣ ಭಾಗಗಳಲ್ಲಿ ಭಾನುವಾರ ಸಂಜೆ ಗುಡುಗು ಸಹಿತ ಬಿರುಸಿನ ಮಳೆಯಾಗಿದೆ.

ದಿನವಿಡೀ ಪ್ರಖರವಾದ ಬಿಸಿಲು ಇತ್ತು. ಸಂಜೆ ದಟ್ಟ ಕಾರ್ಮೋಡ ಕವಿದು, ಬಿರುಗಾಳಿಯೊಂದಿಗೆ ಗುಡುಗು ಸಹಿತ ಬಿರುಸಿನ ಮಳೆಯಾಗಿದೆ. ಬಿರುಗಾಳಿ ಮಳೆಗೆ ನಗರದ ಹಳ್ಳದಕೇರಿ ಸಮೀಪ ರಿಂಗ್‌ರೋಡ್‌ನಲ್ಲಿ ಬುಡಸಮೇತ ಮರವೊಂದು ರಸ್ತೆಗೆ ಅಡ್ಡಲಾಗಿ ಬಿದ್ದು, ವಾಹನ ಸಂಚಾರಕ್ಕೆ ತೊಡಕಾಯಿತು.

ಬಿದಿರಿನ ಹೋಟೆಲ್‌ವೊಂದು ಸಂಪೂರ್ಣ ನೆಲಕಚ್ಚಿದೆ.

ಅರ್ಧಗಂಟೆಗೂ ಹೆಚ್ಚು ಸಮಯ ಸುರಿದ ಜೋರು ಮಳೆಗೆ ವಾತಾವರಣ ಸಂಪೂರ್ಣ ತಂಪಾಗಿದೆ. ಬಿಸಿಲಿನಿಂದ ಕಂಗೆಟ್ಟಿದ್ದ ಜನ ನೆಮ್ಮದಿಯ ನಿಟ್ಟುಸಿರು ಬಿಟ್ಟರು. ಬೀದರ್ ತಾಲ್ಲೂಕಿನ ಅಮಲಾಪೂರ, ಚಿಟ್ಟಾ, ಘೋಡಂಪಳ್ಳಿ, ಯದಲಾಪೂರ,



ಯಾಕತಪೂರ, ಕಮಠಾಣ ಹಾಗೂ ಔರಾದ್ ತಾಲ್ಲೂಕಿನ ಹಲವೆಡೆ ಮಳೆಯಾಗಿದೆ.

ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನಲ್ಲಿಯೂ ಬಿರುಸಿನ ಮಳೆ ಸುರಿದಿದೆ.

ಸಿಡಿಲಿಗೆ ಇಬ್ಬರು ಮಹಿಳೆಯರ ಸಾವು

ಸವದತ್ತಿ (ಬೆಳಗಾವಿ ಜಿಲ್ಲೆ): ತಾಲ್ಲೂಕಿನ ಹಿಟ್ಟಣಗಿ ಗ್ರಾಮದಲ್ಲಿ ಭಾನುವಾರ ಮಧ್ಯಾಹ್ನ ಸಿಡಿಲಿನ ಅಬ್ಬರಕ್ಕೆ ಗಂಗವ್ವ ಶೇಖಪ್ಪ ಜಿರಗವಾಡ (55) ಹಾಗೂ ಕಲಾವತಿ ವಿರೂಪಾಕ್ಷಿ ಜಿರಗವಾಡ (42) ಮೃತಪಟ್ಟಿದ್ದಾರೆ. 'ಇವರಿಬ್ಬರು ಒಂದೇ ಕುಟುಂಬಕ್ಕೆ ಸೇರಿದವರಾಗಿದ್ದು ಕೃಷಿ ಚಟುವಟಿಕೆಗಾಗಿ ತಮ್ಮ ಜಮೀನಿಗೆ ತೆರಳಿದ ಸಂದರ್ಭದಲ್ಲಿ ಸಿಡಿಲು ಬಡಿದಿದೆ. ಘಟನಾ ಸ್ಥಳ ಪರಿಶೀಲಿಸಿ ಪರಿಹಾರ ನೀಡಲಾಗುವುದು' ಎಂದು ತಹಶೀಲ್ದಾರ್ ಎಂ.ಎನ್. ಹೆಗ್ಗನ್ನವರ ತಿಳಿಸಿದ್ದಾರೆ.

# ಬೀದರ ಜಿಲ್ಲಾ ಪೊಲೀಸರಿಂದ ರೌಡಿಜಂ ಮಟ್ಟ ಹಾಕಲು ರೌಡಿ ಜನರ ಚಟುವಟಿಕೆಗಳ ಮೇಲೆ ನಿಗಾ ವಹಿಸಲು ಕವಾಯತು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 12 :- ಸಮಾಜದಲ್ಲಿ ಶಾಂತಿ, ಸು-ವ್ಯವಸ್ಥೆ ಮತ್ತು ಅಪರಾಧಗಳನ್ನು ತಡೆಯುವಲ್ಲಿ ಜಿಲ್ಲೆಯ ರೌಡಿ ಜನರ ಮಟ್ಟ ಹಾಕುವುದು ಅತೀ ಅವಶ್ಯಕ ಮತ್ತು ಯಾವುದೇ ರೀತಿಯ ಕಳ್ಳತನ ಪ್ರಕರಣಗಳು ಜರುಗದಂತೆ ಎಮ್.ಓ.ಬಿ ಜನರ ಮೇಲೆ ನಿಗಾ ವಹಿಸುವುದು ಅತೀ ಅವಶ್ಯಕವಾಗಿರುತ್ತದೆ. ಈ ನಿಟ್ಟಿನಲ್ಲಿ ಶ್ರೀ ಪ್ರದೀಪ್ ಗುಂಟಿ, ಐ.ಪಿ.ಎಸ್. ಪೊಲೀಸ್ ವರಿಷ್ಠಾಧಿಕಾರಿಗಳು, ಬೀದರ ಜಿಲ್ಲೆ ಬೀದರ. ರವರು ಜಿಲ್ಲೆಯನ್ನು ಅಪರಾಧ ಮುಕ್ತ ಜಿಲ್ಲೆಯನ್ನಾಗಿಸಲು ಜಿಲ್ಲೆಯಲ್ಲಿರುವ



ರೌಡಿ ಮತ್ತು ಎಮ್.ಓ.ಬಿ ಜನರ ಮೇಲೆ ನಿಗಾ ವಹಿಸುವ ಸಲುವಾಗಿ ಬೀದರ ಜಿಲ್ಲಾ ಪೊಲೀಸ್ ಕಛೇರಿ ಕವಾಯತು ಮೈದಾನದಲ್ಲಿ ರೌಡಿ ಜನರ ಕವಾಯತು ನಡೆಸಿ, ಯಾರಾದರೂ ಸಮಾಜ ಘಾತಕ, ಅಪರಾಧಿಕ ಚಟುವಟಿಕೆಯಲ್ಲಿ ಭಾಗಿಯಾದಲ್ಲಿ ಅಂತವರಿಗೆ ಕಟ್ಟೆಚ್ಚರಿಸಲಾಗಿದೆ.

ಬೀದರ ಜಿಲ್ಲೆಯಲ್ಲಿ ಅಪರಾಧ ಮುಕ್ತ ಮತ್ತು ಅಪರಾಧ ನಿಯಂತ್ರಣಕ್ಕಾಗಿ ಜಿಲ್ಲೆಯ ಪೊಲೀಸರ ಕಾರ್ಯಾಚರಣೆಯು ಮುಂದುವರೆಯುತ್ತದೆ.

# ಜೆಸ್ಕಾಂ ನಗರ-01: ಇಂದು ನಗರದ ವಿವಿಧಡೆ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 12- ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆಯ ನಗರ ಉಪ ವಿಭಾಗ-1ರ 11ಕೆವಿ ಮಾರ್ಗ ದುರಸ್ತಿ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಮೇ.13ರ ಮಧ್ಯಾಹ್ನ 12 ಗಂಟೆಯಿಂದ ಸಂಜೆ 04 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕಾರಿಸುವಂತೆ ಕೋರಲಾಗಿದೆ.

# ಸಂಸ್ಕೃತಿ ಉಳಿಸಿ ಬೆಳೆಸುವ ಕಾರ್ಯ ನಮ್ಮದಾಗಲಿ:ಮಲ್ಲಮ್ಮ. ಆರ್.ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಮನುಷ್ಯಜೀವನದಲ್ಲಿರುವ ಮೂಲ ಭೂತ ಸೌಕರ್ಯಗಳಾದ ಅನ್ನ, ಬಟ್ಟೆ, ವಸತಿ, ಶಿಕ್ಷಣದ ಜೊತೆಗೆ ಸಂಸ್ಕಾರ ಉಳಿಸಿ, ಬೆಳೆಸಿಕೊಂಡು ಹೋಗುವ ಕಾರ್ಯಕ್ಕೂ ದುಡಿಯಬೇಕಿದೆ. ಈ ನಿಟ್ಟಿನಲ್ಲಿ ದುಡಿಯುವ ಕಾರ್ಯ ನಮ್ಮದಾಗಲಿ ಎಂದು ಕಸಾಪ ಬೆಂಗಳೂರಿನ ಮಹಿಳಾ ಪ್ರತಿನಿಧಿ ಮಲ್ಲಮ್ಮ ಆರ್.ಪಾಟೀಲ ಅಭಿಪ್ರಾಯಪಟ್ಟರು.

ಪಟ್ಟಣದ ಕನ್ನಡ ಭವನದಲ್ಲಿ ರವಿವಾರ ನಡೆದ ಕನ್ನನ ಸಾಹಿತ್ಯ ಪರಿಷತ್ತಿನ 111ನೇ ಸಂಸ್ಥಾಪನ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ನಮ್ಮ ಸಂಸ್ಕೃತಿ ಉಳಿಸುವ ನಿಟ್ಟಿನಲ್ಲಿ ಕ.ಸಾ.ಪ ದುಡೀತಾ ಇದೆ. ಮೊದಲು ಕರ್ನಾಟಕ ಸಾಹಿತ್ಯ ಪರಿಷತ್ ಹೆಸರಿನಲ್ಲಿದ್ದ ಕನ್ನಡ ಸಾಹಿತ್ಯ ಪರಿಷತ್ತು 111 ವಸಂತಗಳನ್ನು ದಾಟಿದೆ. 1958ನೇ ಸಾಲಿನಲ್ಲಿ ಕರ್ನಾಟಕ ಸಾಹಿತ್ಯ ಪರಿಷತ್‌ನ್ನು ಕನ್ನಡ ಸಾಹಿತ್ಯ ಪರಿಷತ್ ಎಂದು ನಾಮಕರಣ ಮಾಡಲಾಯಿತು. ಕೇಂದ್ರ ಸಾಹಿತ್ಯ ಪರಿಷತ್ ವತಿಯಿಂದ 87 ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಗಳನ್ನು ನಡೆಸಲಾಗಿದೆ. 88ನೇ ಅಖಿಲ ಭಾರತ ಕನ್ನಡ




ಸಾಹಿತ್ಯ ಸಮ್ಮೇಳನ ಬೆಳಗಾವಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ. ಕೇಂದ್ರ ಸಾಹಿತ್ಯ ಪರಿಷತ್‌ನಲ್ಲಿ ಸುಮಾರು 1750 ಸಾವಿರ ಪುಸ್ತಕಗಳ ಭಂಡಾರವಿದೆ. ದೇಶದಲ್ಲಿಯೇ ಅತಿ ಹಳೆಯದಾದ, ಬ್ರಹತ್ ಪರಿಷತ್ ಕನ್ನಡ ಸಾಹಿತ್ಯ ಪರಿಷತ್ ಆಗಿದೆ ಎಂದು ಹೇಳಿದರು.

ವಿಶೇಷ ಉಪನ್ಯಾಸ ಮಂಡಿಸಿದ ಹಿರಿಯ ಸಾಹಿತಿ ವಿರಶೆಟ್ಟಿ ಬಾವುಗೆ, ಭಾಲ್ಕಿಯಲ್ಲಿ ಇದುವರೆಗೆ 10ಜನ ಕಸಾಪ ಅಧ್ಯಕ್ಷರಾಗಿದ್ದಾರೆ, ಆದರೆ ಕೇವಲ 6 ತಾಲೂಕು ಮಟ್ಟದ ಸಮ್ಮೇಳನಗಳನ್ನು ನಡೆಸಲಾಗಿದೆ. ಸದ್ಯದ ಅಧ್ಯಕ್ಷರು ಆದಷ್ಟು ಬೇಗ ಮಹಿಳಾ ಸಾಹಿತ್ಯ ಸಮ್ಮೇಳನ ಆಯೋಜಿಸುವ ಮೂಲಕ ತಾಲೂಕಿನಲ್ಲಿ ಮಹಿಳಾ ಸಾಹಿತಿಗಳಿಗೆ ಪ್ರೋತ್ಸಾಹಿಸಬೇಕು ಎಂದು ಸಲಹೆ ನೀಡಿದರು. ಹಾಗು ಕನ್ನಡ ಸಾಹಿತ್ಯ ಪರಿಷತ್ತು ಬೆಳೆದು ಬಂದ ದಾರಿಯ ಬಗ್ಗೆ ಮಾತನಾಡಿದರು.

ಕಸಾಪ ತಾಲೂಕು ಅಧ್ಯಕ್ಷ ನಾಗಭೂಷಣ ಮಾಮಡಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಸಾಪ ಕಾರ್ಯದರ್ಶಿ ಹಣಮಂತ ಕಾರಾಮುಂಗೆ ಆಶಯ ನುಡಿ ನುಡಿದರು. ಇದೇವೇಳೆ ಬಿಆರ್‌ಪಿ ಚೇತನಾ ಚನಶೆಟ್ಟಿ ರಚಿಸಿದ ನವಚೇತನ ಕವನ ಸಂಕಲನ ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕಸಾಪ ಮಾಜಿ ಅಧ್ಯಕ್ಷ ಸುಭಾಷ ಹುಲಸೂರೆ, ನೇಕಾರ ಸಮಾಜದ ಗೌರವಾಧ್ಯಕ್ಷ ಬಾಬುರಾವ ಖ್ಯಾಡೆ, ಭದ್ರೇಶ ಗುರಯ್ಯಾ ಸ್ವಾಮಿ, ಚಂದ್ರಕಾಂತ ತಳವಾಡೆ, ಅಕ್ಷಯಕುಮಾರ ಮುದ್ದಾ, ನಗರ ಘಟಕದ ಅಧ್ಯಕ್ಷ ಸಂತೋಷ ಬಿಜಿ.ಪಾಟೀಲ, ಜಯರಾಜ ದಾಬಶೆಟ್ಟಿ, ಸಂತೋಷಕುಮಾರ ಚನಶೆಟ್ಟಿ ಉಪಸ್ಥಿತರಿದ್ದರು.

ಭದ್ರೇಶ ಸ್ವಾಮಿ ಸ್ವಾಗತಿಸಿದರು. ಹಣಮಂತ ಕಾರಾಮುಂಗೆ ನಿರೂಪಿಸಿದರು. ಸಂತೋಷ ಬಿಜಿಪಾಟೀಲ ವಂದಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.